VOLUME: 16 | 05 APRIL 2026 | ಭಾನುವಾರ | RS: 2 | PAGE: 06 | ISSUE: 66 | ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಆಂಕರ್ ಅನುಶ್ರೀ ಇತ್ತೀಚಿನ ಸಂದರ್ಶನದಲ್ಲಿ ಹೆಣ್ಣು ಮಕ್ಕಳಿಗೆ ಆನ್‌ಲೈನ್‌ನಲ್ಲಿ ಎದುರಾಗುವ ಕಿರುಕುಳದ ಬಗ್ಗೆ ಧ್ವನಿ ಎತ್ತಿದ್ದಾರೆ. 'ಡಗಾರ್' ಪದದ ಬಳಕೆಯು ಹೆಣ್ಣು ಮಕ್ಕಳಿಗೆ ಎಷ್ಟು ನೋವುಂಟು ಮಾಡುತ್ತದೆ ಎಂಬುದನ್ನು ಅವರು ಸ್ಪಷ್ಟಪಡಿಸಿದ್ದಾರೆ. ಸಾರ್ವಜನಿಕ ಖಾತೆಗಳನ್ನು ಹೊಂದಿರುವ ಸೆಲೆಬ್ರಿಟಿಗಳು ಇಂತಹ ಕಮೆಂಟ್‌ಗಳಿಗೆ ಹೆಚ್ಚು ಗುರಿಯಾಗುತ್ತಾರೆ ಎಂದಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
ಸಂಪಾದಕ ಗಂಡಸಿ ಸದಾನಂದಸ್ವಾಮಿ



ನಾನು ಮೊದಲ ಬಾರಿ ಮುಖ್ಯಮಂತ್ರಿಯಾದಾಗ ದೇವರಾಜ ಅರಸು ನಿಗಮ, ವಾಲ್ಮೀಕಿ ಅಭಿವೃದ್ಧಿ ನಿಗಮ, ಅಂಬೇಡ್ಕರ್ ನಿಗಮ ಮತ್ತು ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ಸಾಲ ಮತ್ತು ಬಡ್ಡಿಯನ್ನು ಮನ್ನಾ ಮಾಡಿದೆ. ಈ ಸಮುದಾಯಗಳು ಸಾಲದಿಂದ ಮುಕ್ತರಾಗಬೇಕು ಎನ್ನುವ ಉದ್ದೇಶದಿಂದ ಮಾಡಿದ್ದಾಗಿತ್ತು ಎಂದರು. ಜನರಲ್ಲಿ ಕೊಳ್ಳುವ ಶಕ್ತಿ ಇಲ್ಲದೇ ಹೋದರೆ ಉತ್ಪಾದನೆ ಕುಸಿಯುತ್ತದೆ. ಆದ್ದರಿಂದ ಜನರ ಕೊಳ್ಳುವ ಶಕ್ತಿ ಹೆಚ್ಚಿಸುವ ಕಾರ್ಯಕ್ರಮಗಳನ್ನು ನಾವು ರೂಪಿಸುತ್ತೇವೆ ಎಂದು ಸಿಎಂ ಹೇಳಿದರು.

# 'ಹಸಿವು ಮುಕ್ತ ರಾಜ್ಯ ನಿರ್ಮಿಸುವ ಕನಸಾಗಿ ಅನ್ನಭಾಗ್ಯ ಜಾರಿ'

ಬಾಗಲಕೋಟೆ: ರೈತ-ಕಾರ್ಮಿಕ ವರ್ಗದ ಜೊತೆಗೆ ಶೋಷಿತ ಸಮುದಾಯಗಳನ್ನು ಒಟ್ಟಿಗೇ ಕರೆದೊಯ್ಯುವ ಏಕೈಕ ಪಕ್ಷ ಕಾಂಗ್ರೆಸ್ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಉಪ ಚುನಾವಣೆ ಪ್ರಯುಕ್ತ, "ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ" ಆಯೋಜಿಸಿದ್ದ "ಶೋಷಿತರ ಜಾಗೃತ ಸಭೆ"ಯಲ್ಲಿ ಮಾತನಾಡಿದರು.

ರೈತ-ಕಾರ್ಮಿಕ ವರ್ಗದ ಜೊತೆಗೆ ಶೋಷಿತ ಸಮುದಾಯಗಳನ್ನು ಒಟ್ಟಿಗೇಜನ ಕರೆದೊಯ್ಯುವ ಪಕ್ಷ ಕಾಂಗ್ರೆಸ್. ಪ್ರತಿಯೊಬ್ಬರಿಗೂ ಆರ್ಥಿಕ ಸ್ವಾತಂತ್ರ್ಯ ಮತ್ತು ಸಾಮಾಜಿಕ ಸ್ವಾತಂತ್ರ್ಯ ಅಗತ್ಯ ಎನ್ನುವ ಅಂಬೇಡ್ಕರ್ ಆಶಯದಂತೆ ಕಾಂಗ್ರೆಸ್ ಕಾರ್ಯಕ್ರಮಗಳನ್ನು ರೂಪಿಸುತ್ತಿದೆ.



ಅಕ್ಷರ ಸಂಸ್ಕೃತಿಯಿಂದ ವಂಚಿತರಾದವರು ಸಾಮಾಜಿಕವಾಗಿ ಹಿಂದುಳಿಯುತ್ತಾರೆ. ಇದರಿಂದ ಹಿಂದುಳಿದವರು ಅವಕಾಶಗಳಿಂದ ವಂಚಿತರಾಗುತ್ತಾರೆ ಎಂದರು.

ಅದಕ್ಕೇ ಬಸವಣ್ಣನವರು ಕರ್ಮ ಸಿದ್ಧಾಂತವನ್ನು ವಿರೋಧಿಸಿದ್ದರು. ನಮ್ಮ ಬಡತನಕ್ಕೆ ಹಿಂದಿನ ಜನ್ಮದ ಕರ್ಮಫಲ ಕಾರಣ ಎನ್ನುವ ಮೌಢ್ಯವನ್ನು ಗಟ್ಟಿಯಾಗಿ ಬಿತ್ತಿದ್ದಾರೆ ಎಂದರು.

ನಾನು ಮೊದಲ ಬಾರಿ ಮುಖ್ಯಮಂತ್ರಿಯಾದಾಗ ದೇವರಾಜ ಅರಸು ನಿಗಮ, ವಾಲ್ಮೀಕಿ ಅಭಿವೃದ್ಧಿ ನಿಗಮ, ಅಂಬೇಡ್ಕರ್ ನಿಗಮ ಮತ್ತು ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ಸಾಲ ಮತ್ತು ಬಡ್ಡಿಯನ್ನು ಮನ್ನಾ ಮಾಡಿದೆ. ಈ ಸಮುದಾಯಗಳು ಸಾಲದಿಂದ ಮುಕ್ತರಾಗಬೇಕು ಎನ್ನುವ ಉದ್ದೇಶದಿಂದ ಮಾಡಿದ್ದಾಗಿತ್ತು ಎಂದರು.

ಜನರಲ್ಲಿ ಕೊಳ್ಳುವ ಶಕ್ತಿ ಇಲ್ಲದೇ ಹೋದರೆ ಉತ್ಪಾದನೆ ಕುಸಿಯುತ್ತದೆ. ಆದ್ದರಿಂದ ಜನರ ಕೊಳ್ಳುವ ಶಕ್ತಿ ಹೆಚ್ಚಿಸುವ ಕಾರ್ಯಕ್ರಮಗಳನ್ನು ನಾವು ರೂಪಿಸುತ್ತೇವೆ.

ಕಾಂಗ್ರೆಸ್ ಸದಾ ಬಡವರ ಶೋಷಿತರ ಪರವಾಗಿ ಇರುವ ಪಕ್ಷ. ಬಿಜೆಪಿ ಕಾರ್ಪೋರೇಟ್ ಮತ್ತು ಶ್ರೀಮಂತರ ಪರವಾಗಿ ಇರುವ ಪಕ್ಷ. ಈ ವ್ಯತ್ಯಾಸವನ್ನು ನೀವು ಅರಿತುಕೊಳ್ಳಬೇಕು ಎಂದರು.

ನಾನು ಅಸಮಾನತೆ ವಿರುದ್ಧ ಇದ್ದೇನೆ, ಶೋಷಿತರ ಪರವಾಗಿ ಇದ್ದೇನೆ ಎನ್ನುವ ಕಾರಣಕ್ಕೆ ಖಖಖ ಮತ್ತು ಮನುವಾದಿಗಳು ನನ್ನ ಮೇಲೆ ಅಟಾಕ್ ಮಾಡ್ತಾರೆ. ಪ್ರತಾಪ ಸಿಂಹನ ಮೂಲಕ ನನ್ನನ್ನು ಗುರಿಯಾಗಿಸಿ, ಟಾರ್ಗೆಟ್ ಮಾಡಿಸಿ ಹೇಳಿಕೆ ನೀಡುತ್ತಾರೆ ಎಂದರು.

ಈ ಕಾರಣಕ್ಕೆ ಉಪ ಚುನಾವಣೆಯಲ್ಲಿ ಬಿಜೆಪಿ ಗೆಲ್ಲಬಾರದು. ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಗೆಲ್ಲಬೇಕು. ಈ ದಿಕ್ಕಿನಲ್ಲಿ ಶ್ರಮ ಹಾಕಿ ಎಂದು ಮನವಿ ಮಾಡಿದರು.

ಸಚಿವರಾದ ಶಿವರಾಜ್ ತಂಗಡಗಿ, ಆರ್.ಬಿ.ತಿಮ್ಮಾಪುರ್, ಒಕ್ಕೂಟದ ಅಧ್ಯಕ್ಷರಾದ ರಾಮಚಂದ್ರಣ್ಣ ಸೇರಿ ಒಕ್ಕೂಟದ ಪದಾಧಿಕಾರಿಗಳು, ಶಾಸಕರುಗಳು ಉಪಸ್ಥಿತರಿದ್ದರು.

## 272 ಅಕ್ರಮ ವಲಸಿಗರ ಗಡಿಪಾರು

ಬೆಂಗಳೂರು: ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಅಕ್ರಮವಾಗಿ ನೆಲೆಸಿದ್ದ ಬಾಂಗ್ಲಾ ವಲಸಿಗರ ಮೇಲೆ ಸಿಸಿಬಿ ಮತ್ತು ನಗರ ಪೊಲೀಸರು ಬೃಹತ್ ಕಾರ್ಯಾಚರಣೆ ಕೈಗೊಂಡಿದ್ದಾರೆ. ಇದುವರೆಗೆ ಬರೋಬ್ಬರಿ 272 ಜನರನ್ನು ಬೆಂಗಳೂರಿನಿಂದ ಯಶಸ್ವಿಯಾಗಿ ಗಡಿಪಾರು ಮಾಡಲಾಗಿದೆ.

ಮಾರ್ಚ್ ಮೊದಲ ವಾರದಲ್ಲಿ ದೆಹಲಿ ಪೊಲೀಸರು ದೆಹಲಿ ಮತ್ತು ಕೊಲ್ಕತ್ತಾದಲ್ಲಿ ಐವರು ಬಾಂಗ್ಲಾ ಮೂಲದ ಉಗ್ರರ ಬಂಧನದ ಬೆನ್ನಲ್ಲೇ ದೇಶದಲ್ಲಿ ಅಕ್ರಮ ವಲಸಿಗರ ಪತ್ತೆಗೆ ಸೂಚಿಸಲಾಗಿತ್ತು. ಅದರಂತೆ ಬೆಂಗಳೂರಿನಲ್ಲಿ ಅಕ್ರಮವಾಗಿ ನೆಲೆಸಿದ್ದ ವಲಸಿಗರ ಪತ್ತೆಗೆ ಸಿಸಿಬಿ ಮತ್ತು ಸಿಟಿ ಪೊಲೀಸರು ವಿಶೇಷ ಕಾರ್ಯಾಚರಣೆ ಕೈಗೆತ್ತಿಕೊಂಡಿತು.

ಬೆಂಗಳೂರಿನ ಮೂಲೆಮೂಲೆಯಲ್ಲಿ ಅಕ್ರಮವಾಗಿ ವಾಸವಿದ್ದವರನ್ನು ಪತ್ತೆಹಚ್ಚಿದ ಪೊಲೀಸರು, ದಾಖಲೆಗಳಿಲ್ಲದ 272 ಜನರನ್ನು ವಶಕ್ಕೆ ಪಡೆದಿದ್ದರು. ಇವರನ್ನು ತ್ರಿಪುರಾ ಗಡಿಯ ಮೂಲಕ ಬಾಂಗ್ಲಾದೇಶಕ್ಕೆ ಯಶಸ್ವಿಯಾಗಿ ಗಡಿಪಾರು ಮಾಡಲಾಗಿದೆ.

ಇನ್ನು ದೇಶದಲ್ಲೇ ಅತಿ ದೊಡ್ಡ ಮಟ್ಟದ ಡಿಪೋರ್ಟೇಷನ್ ಪ್ರಕ್ರಿಯೆ ಇದಾಗಿದ್ದು, ಬೆಂಗಳೂರಿನಿಂದ ಹೊರಹಾಕಲ್ಪಟ್ಟವರಲ್ಲಿ 178 ಪುರುಷರು, 94 ಮಹಿಳೆಯರು ಹಾಗೂ 12 ಮಕ್ಕಳು ಸೇರಿದ್ದಾರೆ.

ಇವರೆಲ್ಲರನ್ನೂ ರೈಲಿನಲ್ಲಿ ತ್ರಿಪುರಾ ಗಡಿಯವರೆಗೆ ಕರೆದೊಯ್ದು, ಬಿಎಸ್‌ಎಫ್ ಮೂಲಕ ಅವರ ದೇಶಕ್ಕೆ ಹಸ್ತಾಂತರಿಸಲಾಯಿತು. ಪಶ್ಚಿಮ ಬಂಗಾಳದ ಚುನಾವಣೆ ಹಾಗೂ ಭದ್ರತಾ ದೃಷ್ಟಿಯಿಂದ ತ್ರಿಪುರಾ ಗಡಿಯನ್ನೇ ಗಡಿಪಾರಿಗೆ ಬಳಸಿಕೊಳ್ಳಲಾಗಿದೆ.

ಇತ್ತ ಈ ಅಕ್ರಮ ವಲಸೆಯ ಹಿಂದೆ ವ್ಯವಸ್ಥಿತ ಜಾಲವೊಂದು ಕೆಲಸ ಮಾಡುತ್ತಿದೆ. ಒಬ್ಬ ವಲಸಿಗ ಬೆಂಗಳೂರು ಸೇರಲು ಹಂತಹಂತವಾಗಿ ಟೇಕೆದಾರರ ಬಾಂಗ್ಲಾದೇಶದ ಒಳಗಿದ್ದುಕೊಂಡು ವಲಸಿಗರನ್ನು ಭಾರತದ ಗಡಿಯವರೆಗೂ ಕರೆತರುತ್ತಾನೆ. ಅಲ್ಲಿಂದ ಭಾರತದ ಗಡಿಯಲ್ಲಿ ನಿಂತು ಅಕ್ರಮವಾಗಿ ಒಳನುಗ್ಗಿಸುವ ಜವಾಬ್ದಾರಿ ಇನ್ನೊಬ್ಬ ತೆಗೆದುಕೊಳ್ಳುತ್ತಾರೆ.

## ಬಿಜೆಪಿಗೆ ಮತ ನೀಡಬೇಡಿ

2014ರಲ್ಲಿ ಬಿಜೆಪಿ ಸರ್ಕಾರದ ಅಧಿಕಾರಕ್ಕೆ ಬರುವ ಮುನ್ನ ಗ್ಯಾಸ್ ಬೆಲೆ 400 ರೂ. ಆಸುಪಾಸಿನಲ್ಲಿತ್ತು. ಈಗ ಎಲ್ ಪಿಜಿ ಸಿಲಿಂಡರ್ ಬೆಲೆ 950 ರೂ. ದಾಟಿದೆ. ಲೀಟರ್‌ಗೆ 70 ರೂಪಾಯಿಯಿದ್ದ ಪೆಟ್ರೋಲ್ ಈಗ 102ರ ಗಡಿ ದಾಟಿದೆ. ಡೀಸೆಲ್ 56 ರೂಪಾಯಿಂದ 96ಕ್ಕೆ ಜಿಗಿದಿದೆ. ಏ.1ರಿಂದ ಟೋಲ್ ದರ ಹೆಚ್ಚಳ ಮಾಡಲಾಗಿದೆ. ಕರ್ನಾಟಕದಿಂದ ವರ್ಷಕ್ಕೆ 5000 ಸಾವಿರ ಕೋಟಿ ರೂ. ಟೋಲ್ ಟ್ಯಾಕ್ಸ್ ಸಂಗ್ರಹ ಮಾಡಲಾಗಿದೆ. ದೇಶದಾದ್ಯಂತ 2.80 ಲಕ್ಷ ಕೋಟಿ ಟೋಲ್ ಟ್ಯಾಕ್ಸ್ ಸಂಗ್ರಹವಾಗುತ್ತಿದೆ ಎಂದರು.

ದಾವಣಗೆರೆ: ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಪಂಚಗ್ಯಾರಂಟಿ ಯೋಜನೆಗಳನ್ನು ಟೀಕಿಸಿ, ಅನಗತ್ಯ ಅಪಪ್ರಚಾರ ಮಾಡುತ್ತಿರುವ ಬಿಜೆಪಿಗೆ ಮತ ನೀಡಬಾರದು. ಗ್ಯಾರಂಟಿ ಯೋಜನೆಗಳು ಜನರ ಕೊಳ್ಳುವ ಸಾಮರ್ಥ್ಯವನ್ನು ಹೆಚ್ಚಿಸಿದೆ. ಬೆಲೆ ಏರಿಕೆಯಿಂದ ಬಸವಳಿಯುತ್ತಿರುವ ಜನತೆಗೆ ಗ್ಯಾರಂಟಿ ಯೋಜನೆಗಳು ನೆರವಾಗಿವೆ. ಗ್ಯಾರಂಟಿ ಯೋಜನೆಗಳಿಗಾಗಿ ಕಾಂಗ್ರೆಸ್ ಸರ್ಕಾರ 1 ಲಕ್ಷ 36 ಸಾವಿರ ಕೋಟಿ ಹಣ ಖರ್ಚು ಮಾಡಿದೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಹೇಳಿದರು.

ನಗರದ ಎಪಿಎಂಸಿ ಮಾರುಕಟ್ಟೆ ಬಳಿ ಗ್ಯಾರಂಟಿ ಫಲಾನುಭವಿಗಳ ಜೊತೆ ಸಂವಾದ ನಡೆಸಿದ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ರಾಜ್ಯದಲ್ಲಿ ಎರಡು ಮಾಡೆಲ್ ಗಳಿವೆ. ಮೊದಲನೆಯದು ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಮಾಡೆಲ್. ಎರಡನೇಯದು ಮೋದಿ ಸರ್ಕಾರದಿಂದ ರಾಜ್ಯದ ಜನತೆಯ ಜೇಬು ಕತ್ತರಿಸುವ ಮಾಡೆಲ್. ಜನರ ಜೇಬಿಗೆ ಹಾಕುತ್ತಿರುವ ಕತ್ತರಿಯಿಂದ ಬಚಾವ್ ಆಗಲು ಗ್ಯಾರಂಟಿ ಯೋಜನೆಗಳು ಸಹಕಾರಿಯಾಗಿವೆ ಎಂದರು.

2014ರಲ್ಲಿ ಬಿಜೆಪಿ ಸರ್ಕಾರದ ಅಧಿಕಾರಕ್ಕೆ ಬರುವ ಮುನ್ನ ಗ್ಯಾಸ್ ಬೆಲೆ 400 ರೂ. ಆಸುಪಾಸಿನಲ್ಲಿತ್ತು. ಈಗ ಎಲ್ ಪಿಜಿ ಸಿಲಿಂಡರ್ ಬೆಲೆ 950 ರೂ. ದಾಟಿದೆ. ಲೀಟರ್‌ಗೆ 70 ರೂಪಾಯಿಯಿದ್ದ ಪೆಟ್ರೋಲ್ ಈಗ 102ರ ಗಡಿ ದಾಟಿದೆ. ಡೀಸೆಲ್ 56 ರೂಪಾಯಿಂದ 96ಕ್ಕೆ ಜಿಗಿದಿದೆ. ಏ.1ರಿಂದ ಟೋಲ್ ದರ ಹೆಚ್ಚಳ ಮಾಡಲಾಗಿದೆ. ಕರ್ನಾಟಕದಿಂದ ವರ್ಷಕ್ಕೆ 5000 ಸಾವಿರ ಕೋಟಿ ರೂ. ಟೋಲ್ ಟ್ಯಾಕ್ಸ್ ಸಂಗ್ರಹ ಮಾಡಲಾಗಿದೆ. ದೇಶದಾದ್ಯಂತ 2.80 ಲಕ್ಷ ಕೋಟಿ ಟೋಲ್ ಟ್ಯಾಕ್ಸ್ ಸಂಗ್ರಹವಾಗುತ್ತಿದೆ ಎಂದರು.



ಪ್ಲಾಸ್ಟಿಕ್ ಸರಕು ಸಾಮಾಗ್ರಿಗಳ ಬೆಲೆಗಳು ಶೇ. 50 ಹೆಚ್ಚಾಗಿದೆ. ಪಿವಿಸಿ ಪೈಪ್ ಗಳ ಬೆಲೆ 30%, ಏರ್ ಟಿಕೆಟ್ ದರದಲ್ಲಿ 15% ಹೆಚ್ಚಾಗಿದೆ. ಖಾಸಗಿ ಪೆಟ್ರೋಲ್ ಬಂಕ್ ಗಳಾದ ಎಸ್ಸಾರ್, ಶೆಲ್ ನಲ್ಲಿ ಪೆಟ್ರೋಲ್, ಡೀಸೆಲ್ ಬೆಲೆಗಳು 3 ರಿಂದ 20 ರೂ.ವರೆಗೆ ಹೆಚ್ಚಾಗಿದೆ. ಚುನಾವಣೆ ಬಳಿಕ ಎಲ್ ಪಿಜಿ ಸಿಲಿಂಡರ್, ಪೆಟ್ರೋಲ್, ಡೀಸೆಲ್ ಬೆಲೆ ಕೂಡ ಹೆಚ್ಚಾಗಲಿದೆ ಎಂದು ಮಾಹಿತಿ ನೀಡಿದರು.

ಬೆಲೆ ಏರಿಕೆಯಿಂದ ಬಚಾವ್ ಆಗಲು ಇರುವ ಮಾರ್ಗವೇ ಗ್ಯಾರಂಟಿ. ಪಂಚಗ್ಯಾರಂಟಿ ಯೋಜನೆಗಳಿಗಾಗಿ ಕಾಂಗ್ರೆಸ್ ಸರ್ಕಾರ ಪ್ರತಿ ವರ್ಷ 50 ಸಾವಿರ ಕೋಟಿ ರೂ. ಖರ್ಚು ಮಾಡುತ್ತಿದೆ. ಆದರೆ ಇದನ್ನು ಬಂದ್ ಮಾಡಲು ಬಿಜೆಪಿ ಶತಪ್ರಯತ್ನ ನಡೆಸುತ್ತಿದೆ. ಕಾಂಗ್ರೆಸ್ ಗೆ ಶಕ್ತಿ ತುಂಬುವ ಕೆಲಸ ಮತದಾರರ ಮೇಲಿದೆ. ಸಮರ್ಥ ಒಬ್ಬ ಸಮರ್ಥ ಅಭ್ಯರ್ಥಿ. ಯುವಕರಿಗೆ ಸ್ಫೂರ್ತಿದಾಯಕ. ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿ ಕಾಂಗ್ರೆಸ್ ಬಲ ಹೆಚ್ಚಿಸಿ ಎಂದು ಕರೆಕೊಟ್ಟರು.

ಸಂಸದೆ ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಪಂಚಗ್ಯಾರಂಟಿ ಯೋಜನೆಗಳಿಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ 538.81 ಕೋಟಿ ರೂ. ಖರ್ಚು ಮಾಡಿದೆ ಎಂದರು.

ಗೃಹಲಕ್ಷ್ಮಿ ಯೋಜನೆಯಡಿ ಕ್ಷೇತ್ರದ 58,684 ಮನೆಯ ಯಜಮಾನಿರಿಗೆ ಮಾಸಿಕ ಎರಡು ಸಾವಿರ ರೂಗಳಂತೆ 332 ಕೋಟಿ ರೂ. ಹಣ ನೀಡಲಾಗಿದೆ.

## ಕ್ಷುಲ್ಲಕ ಕಾರಣಕ್ಕೆ ಮನಸ್ೋಯಿಚ್ಛೆ ಹಲ್ಲೆ



ಹಾಸನ: ಕ್ಷುಲ್ಲಕ ಕಾರಣಕ್ಕೆ ದಂಪತಿಗಳ ಮೇಲೆ ಮನಸ್ೋಯಿಚ್ಛೆ ಹಲ್ಲೆ ನಡೆಸಿ ಶಾಸಕ ಕೆ.ಎಂ ಶಿವಲಿಂಗೇಗೌಡರ ಬಲಗೈ ಬಂಟನ ಪುತ್ರ ಸೂಫಿಯಾನ್ ಸಮಿವುಲ್ಲಾ ಕ್ರೌರ್ಯ ಮೆರೆದಿರುವ ಘಟನೆ ಅರಸೀಕೆರೆ ಪಟ್ಟಣದಲ್ಲಿ ನಡೆದಿದೆ.

**ದೇವಸ್ಥಾನಕ್ಕೆ ತೆರಳಿ ವಾಪಸ್ ಬರುತ್ತಿದ್ದ ದಂಪತಿಯೊಂದಿಗೆ ಸಣ್ಣ ವಿಚಾರಕ್ಕೆ ಕಿರಿಕ್ ತೆಗೆದು ಹಲ್ಲೆ ನಡೆದ್ದಾನೆ. ಕೈಮುಗಿದು ಬೇಡಿಕೊಂಡರೂ ಬಿಡದೇ ತನ್ನ ಪುಂಡರ ಗ್ಯಾಂಗ್ ಕರೆಸಿ ರಕ್ತ ಬರುವಂತೆ ಥಳಿಸಿದ್ದಾನೆ. ಈ ದೃಶ್ಯಗಳು ಮೊಬೈಲ್‌ನಲ್ಲಿ ಸೆರೆಯಾಗಿದ್ದು, ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.**

ದಂಪತಿಗಳಿಬ್ಬರು ಅರಸೀಕೆರೆ ಪಟ್ಟಣದಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಜೇನುಕಲ್ಲು ಸಿದ್ದೇಶ್ವರಸ್ವಾಮಿ ರಥೋತ್ಸವದಲ್ಲಿ ಭಾಗಿಯಾಗಲು ಬಂದಿದ್ದರು. ರಥೋತ್ಸವ, ದೇವರ ಪೂಜೆ ಮುಗಿಸಿಕೊಂಡು ವಾಪಸ್ ತೆರಳುತ್ತಿದ್ದರು.

ಈ ವೇಳೆ ತನ್ನ ಬೈಕ್‌ನಲ್ಲಿ ವೇಗವಾಗಿ ಬರುತ್ತಿದ್ದ ಸಮಿವುಲ್ಲಾ ಅರಸೀಕೆರೆ ಪಟ್ಟಣದ ಎಪಿಎಂಸಿ ಮುಂಭಾಗ ದಂಪತಿ ತೆರಳುತ್ತಿದ್ದ ಬೈಕ್‌ಗೆ ಟಚ್ ಮಾಡಿದ್ದಾನೆ. ಇದನ್ನ ಪ್ರಶ್ನೆ ಮಾಡಿದ್ದಕ್ಕೆ ದಂಪತಿಗಳ ಮೇಲೆ ಹಲ್ಲೆ ಮಾಡಿದ್ದಾನೆ ಅನ್ನೋ ಆರೋಪ ಕೇಳಿಬಂದಿದೆ.

ಸಣ್ಣ ವಿಚಾರವನ್ನೇ ಮುಂದಿಟ್ಟುಕೊಂಡು ದಂಪತಿ ತೆರಳುತ್ತಿದ್ದ ಬೈಕ್ ಅಡ್ಡಗಟ್ಟಿ ಸೂಫಿಯಾನ್ ಸಮಿವುಲ್ಲಾ ವ್ಯಕ್ತಿಯನ್ನ ಹಿಡಿದು ಎಳೆದಾಡಿ ಮನಬಂದಂತೆ ಥಳಿಸಿದ್ದಾನೆ. ಇಷ್ಟಕ್ಕೂ ಸುಮ್ಮನಾಗದೇ ಫೋನ್ ಮಾಡಿ ತನ್ನ ಪುಂಡರ ಗ್ಯಾಂಗ್ ಕರೆಸಿ ಹಲ್ಲೆ ಮಾಡಿಸಿದ್ದಾನೆ, ಪತ್ನಿ ಕೈಮುಗಿದು ಬೇಡಿಕೊಂಡರೂ ಬಿಡದೇ ರಕ್ತ ಬರುಬಂತೆ ಹಲ್ಲೆ ಮಾಡಿದ್ದಾರೆ ಪುಂಡರು. ಅಮಾಯಕ ವ್ಯಕ್ತಿಗೆ ಥಳಿಸುವ ದೃಶ್ಯ ಮೊಬೈಲ್‌ನಲ್ಲಿ ಸೆರೆಯಾಗಿದ್ದು, ಆರೋಪಿಗಳನ್ನು ಕೂಡಲೇ ಬಂಧಿಸುವಂತೆ ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಇನ್ನೂ ಅಮಾಯಕ ದಂಪತಿ ಮೇಲೆ ಸೂಫಿಯಾನ್ ಮತ್ತವನ ಪಟಾಲಂನಿಂದ ಹಲ್ಲೆ ಘಟನೆ ಅರಸೀಕೆರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಈ ವೇಳೆ ತನ್ನ ಬೈಕ್‌ನಲ್ಲಿ ವೇಗವಾಗಿ ಬರುತ್ತಿದ್ದ ಸಮಿವುಲ್ಲಾ ಅರಸೀಕೆರೆ ಪಟ್ಟಣದ ಎಪಿಎಂಸಿ ಮುಂಭಾಗ ದಂಪತಿ ತೆರಳುತ್ತಿದ್ದ ಬೈಕ್‌ಗೆ ಟಚ್ ಮಾಡಿದ್ದಾನೆ. ಇದನ್ನ ಪ್ರಶ್ನೆ ಮಾಡಿದ್ದಕ್ಕೆ ದಂಪತಿಗಳ ಮೇಲೆ ಹಲ್ಲೆ ಮಾಡಿದ್ದಾನೆ ಅನ್ನೋ ಆರೋಪ ಕೇಳಿಬಂದಿದೆ.

ಹೀಗಾಗಿ ನೂರಾರು ಸಂಖ್ಯೆಯ ಜನ ಪೊಲೀಸ್ ಠಾಣೆ ಎದುರು ಜಮಾಯಿಸಿದ್ದು, ಆರೋಪಿಗಳ ಬಂಧನಕ್ಕೆ ಒತ್ತಾಯಿಸಿದ್ದಾರೆ. ಇತ್ತ ಹಲ್ಲೆಗೊಳಗಾದ ದಂಪತಿ ಹುಡುಕಾಟಕ್ಕೆ ಪೊಲೀಸರು ಮುಂದಾಗಿದ್ದಾರೆ.

## ಸಮೀರ್ ವಿರುದ್ಧ ಲೈಂಗಿಕ ದೌರ್ಜನ್ಯ ಕೇಸ್

ಹುಬ್ಬಳ್ಳಿ: ಲವ್ ಜಿಹಾದ್ ಕೇಸಲ್ಲಿ ಜಿಮ್ ಟ್ರೈನರ್‌ಗೆ ಮತ್ತೊಂದು ಸಂಕಷ್ಟ ಎದುರಾಗಿದೆ. ಸಮೀರ್ ವಿರುದ್ಧ ಸಂತ್ರಸ್ತೆ ಇದೀಗ ಲೈಂಗಿಕ ದೌರ್ಜನ್ಯ ಕೇಸ್ ದಾಖಲಿಸಿದ್ದಾರೆ.

ಸಂತ್ರಸ್ತ ಯುವತಿ ಶುಕ್ರವಾರ (ಏ.3) ರಾತ್ರಿ ಹುಬ್ಬಳ್ಳಿ ವಿದ್ಯಾನಗರ ಠಾಣೆಯಲ್ಲಿ ಸಮೀರ್ ವಿರುದ್ಧ ಲೈಂಗಿಕ ದೌರ್ಜನ್ಯ ಕೇಸ್ ದಾಖಲಿಸಿದ್ದಾರೆ. ನಾನು ಜಿಮ್‌ಗೆ ಹೋಗುವಾಗ ಸಮೀರ್ ಪರಿಚಯವಾಗಿದ್ದ.

2025ರ ಆ.16ರಂದು ನನ್ನನ್ನು ಮನೆಗೆ ಕರೆಸಿಕೊಂಡಿದ್ದ. ಆ ವೇಳೆ ಜ್ಯೂಸ್‌ನಲ್ಲಿ ಮತ್ತು ಬರೋ ಪದಾರ್ಥ ಹಾಕಿ ನನಗೆ ಕುಡಿಸಿದ್ದ. ಬಳಿಕ ನನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದ. ಇದನ್ನು ವಿಡಿಯೋ ಮಾಡಿಟ್ಟುಕೊಂಡು ಬೆದರಿಕೆ ಹಾಕಿದ್ದ. ಇದಾದ ಬಳಿಕ ಬೆದರಿಕೆ ಹಾಕಿ ಮತ್ತೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ ಎಂದು ಆರೋಪಿಸಿದ್ದಾರೆ.

ಸದ್ಯ ಯುವತಿಯ ದೂರಿನ ಆಧಾರದ ಮೇಲೆ ಸಮೀರ್ ವಿರುದ್ಧ ಬಿಎನ್‌ಎಸ್ ಸೆಕ್ಷನ್ 64(1), 351, 123 ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಯುವತಿ ದೂರಿನ ಹಿನ್ನೆಲೆ ಪೊಲೀಸರು ವಿಚಾರಣೆ ನಡೆಸಲು ಮುಂದಾಗಿದ್ದಾರೆ. ಸದ್ಯ ಸಮೀರ್ ಹುಬ್ಬಳ್ಳಿಯ ಕಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ.

ಇನ್ನೂ ಲವ್ ಜಿಹಾದ್ ಪ್ರಕರಣ ದಾಖಲಾಗುತ್ತಿದ್ದಂತೆ ಆರೋಪಿ ಸಮೀರ್ ಬಂಡವಾಳ ಮತ್ತಷ್ಟು ಬಯಲಾಗಿದೆ. ಬೇರೆ ಬೇರೆ ಯುವತಿಯರ ಜೊತೆಗೆ ಇರುವ ಫೋಟೋಗಳು ವೈರಲ್ ಆಗಿದೆ.

ಜಿಮ್‌ಗೆ ಬರುವ ಹಿಂದೂ ಯುವತಿಯರನ್ನು ಟಾರ್ಗೆಟ್ ಮಾಡಿ, ಸ್ನೇಹ ಬೆಳೆಸಿಕೊಳ್ಳುತ್ತಿದ್ದ. ಪೊಲೀಸರು ಸಮೀರ್ ಮೊಬೈಲ್ ಪರಿಶೀಲನೆ ಮಾಡಿದಾಗ ಹಲವು ವಿಚಾರಗಳು ಬಯಲಾಗಿವೆ. ಬ್ರೌಸಿಂಗ್ ಹಿಸ್ಟರಿಯಲ್ಲಿ ಅಸಭ್ಯ ಮತ್ತು ನಿಷೇಧಿತ ವೆಬ್ ಬಳಕೆ ಮಾಡುತ್ತಿರುವುದು ಗೊತ್ತಾಗಿದೆ.

## ಆಟೋ ಚಾಲಕರಿಗೆ ಸಮಸ್ಯೆಯಾಗಿದೆ..., ಇದು ಬಯಸಿ ಬಂದಿದ್ದಲ್ಲ

ಕೊಪ್ಪಳ: ರಾಜ್ಯದಲ್ಲಿ ಆಟೋ ಚಾಲಕರಿಗೆ ಸಮಸ್ಯೆಯಾಗಿದ್ದು, ಈ ಸಮಸ್ಯೆ ನಾವು ಯಾರೂ ಬಯಸಿ ಬಂದಿರೋದಲ್ಲ. ಯುದ್ಧದ ಹಿನ್ನೆಲೆಯಲ್ಲಿ ಕೆಲ ಸಮಸ್ಯೆಗಳು ಉದ್ಭವವಾಗಿವೆ ಎಂದು ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಹೇಳಿದರು.

ಕೊಪ್ಪಳ ತಾಲೂಕಿನ ಹಿಟ್ನಾಳ್ ಟೋಲ್ ಗೇಟ್ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಯಾವುದೇ ಸರ್ಕಾರ ಇದ್ರೂ ಇಂತಹ ಪರಿಸ್ಥಿತಿಯಲ್ಲಿ ಜನ ಸಾಮಾನ್ಯರಿಗೆ ತೊಂದರೆ ಆಗದಂತೆ ನೋಡಿಕೊಳ್ಳೋದು ನಮ್ಮ ಧರ್ಮ. ಆದರೆ, ಈಗಿನ ಪರಿಸ್ಥಿತಿಯಲ್ಲಿ ಮೋದಿ ನೇತೃತ್ವದಲ್ಲಿ ಜನ ಸಾಮಾನ್ಯರಿಗೆ ಬೇಕಾಗಿರೋ ವಸ್ತುಗಳನ್ನ ತರಲು ಅಲ್ಪಸ್ವಲ್ಪ ಮಟ್ಟಿಗೆ ಯಶಸ್ಸು ಕಾಣುತ್ತಿದ್ದಾರೆ. ಇವತ್ತು ಕಾಂಗ್ರೆಸ್‌ನವರು ಏನೇನೋ ಮಾತಾಡುತ್ತಿದ್ದಾರೆ. ಕೇಂದ್ರದಲ್ಲಿ ಯುಪಿಎ ಸರ್ಕಾರವೇ ಇದ್ರೆ ಏನು ಮಾಡುತ್ತಿದ್ದರು ಎಂದು ಪ್ರಶ್ನಿಸಿದರು.

ಕೇಂದ್ರ ಸರ್ಕಾರವನ್ನು ಬೈಯೋದು ಒಳ್ಳೆದಲ್ಲ ಅನ್ನೋದು ನನ್ನ ಅಭಿಪ್ರಾಯ. ರಾಜ್ಯದಲ್ಲಿ ಸಿಲಿಂಡರ್, ಆಟೋ ಎಲ್‌ಪಿಜಿ ಕೊರತೆ ಇರೋದು ಕಾಣುತ್ತಿದೆ. ಸರ್ಕಾರವೂ ಆಟೋ ಚಾಲಕರ ಮೇಲೆ ತೆರಿಗೆ ವಿಧಿಸಿದೆ. ಆಟೋ ಚಾಲಕರು ಆರನೇ ಗ್ಯಾರಂಟಿಯಾಗಿ ತಿಂಗಳು 15 ಸಾವಿರ ಕೇಳುತ್ತಿದ್ದಾರೆ. ಸರ್ಕಾರ ಅದನ್ನು ಕೊಟ್ಟು ಗೌರಯುವತವಾಗಿ ನಡೆದುಕೊಳ್ಳಬೇಕು ಎಂದರು.

ಸಿಂಧನೂರಿನಲ್ಲಿ ಸೈನಿಕ ಶಾಲೆಯ ಪ್ರಾರಂಭೋತ್ಸವ ಕಾರ್ಯಕ್ರಮಕ್ಕೆ ಹೋಗುತ್ತಿದ್ದೇನೆ.

ಇಂದು ಸಂಜೆ ದಾವಣಗೆರೆ ಚುನಾವಣೆ ಪ್ರಚಾರಕ್ಕೆ ಹೋಗುತ್ತೇನೆ. ಎರಡೂ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಗೆಲ್ಲೋ ವಾತಾವರಣ ಇದೆ ಎಂದು ಹೇಳಿದರು.

## ಹಿಂದಿ ಭಾಷೆಗೆ ಗ್ರೇಡಿಂಗ್ ನಿರ್ಧಾರ: ಲೋಕಭವನದ ವಿರುದ್ಧ ಕಿಡಿ

ಬೆಂಗಳೂರು: ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೂರನೇ ಭಾಷೆ ಹಿಂದಿಗೆ ಅಂಕ ನೀಡದೆ ಕೇವಲ ಗ್ರೇಡ್ ನೀಡುವ ನಿರ್ಧಾರದ ಬಗ್ಗೆ ಇರುವ ಕಳವಳಗಳ ಬಗ್ಗೆ ಸಮಗ್ರವಾಗಿ ಪರಿಶೀಲಿಸುವಂತೆ ರಾಜ್ಯಪಾಲರು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿಗೆ ಪತ್ರ ಬರೆದಿರುವುದಕ್ಕೆ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಕಿಡಿಕಾರಿದ್ದು, ತಿಂದ ಮನೆಗೆ ಕನ್ನ ಹಾಕಬೇಡಿ, ಗಂಟು ಮೂಟೆ ಕಟ್ಟಿ ಹೊರಡಿ ಎಂದು ಆಗ್ರಹಿಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ನೀವು ಹಿಂದಿ ಸಾಮ್ರಾಜ್ಯಶಾಹಿಯ ಲಾಬಿಯ ಪರವಾಗಿ ಮಾತನಾಡುತ್ತಿದ್ದೀರಿ ಎಂಬುದು ನಮಗೆ ಚೆನ್ನಾಗಿ ಗೊತ್ತಿದೆ. ಕನ್ನಡಿಗರು ಔದಾರ್ಯವಂತರು. ನಮ ನೆಲದಲ್ಲಿ ನಿಮಗೆ ಐಶಾರಾಮಿ ವ್ಯವಸ್ಥೆ ಕಲ್ಪಿಸಿಕೊಟ್ಟಿದ್ದೇವೆ. ಕನ್ನಡಿಗರ ತೆರಿಗೆ ದುಡ್ಡಿನಲ್ಲಿ ರಾಜಭವನ ನಡೆಯುತ್ತಿದೆ.

ತಿಂದ ಮನೆಗೆ ಕನ್ನ ಹಾಕುವುದು ತರವಲ್ಲ. ಅಧಿಕಪ್ರಸಂಗವನ್ನು ಮುಂದುವರೆಸಿದರೆ ಗಂಟುಮೂಟೆ ಕಟ್ಟಿಕೊಂಡು ನಿಮ ರಾಜ್ಯಕ್ಕೆ ತೊಲಗಿ ಎಂದು ಖಾರವಾಗಿ ನುಡಿದಿದ್ದಾರೆ.



ಕರ್ನಾಟಕ ಸರ್ಕಾರಕ್ಕೆ ನೀವು ಬರೆದ ಪತ್ರದ ಕುರಿತ ಮಾಧ್ಯಮ ವರದಿಗಳನ್ನು ಗಮನಿಸಿದೆ.

ನೀವು ಹೇಳಿದ್ದೀರಿ. ನಿಮ ಈ ಪತ್ರ, ಈ ಹಸ್ತಕ್ಷೇಪ ಒಕ್ಕೂಟ ವ್ಯವಸ್ಥೆಯನ್ನು ಅಣಕಿಸುವಂತೆ ಇದೆ. ನಿಮ ಅಧಿಕಪ್ರಸಂಗವನ್ನು ಕರ್ನಾಟಕದ ಜನತೆ ಒಪ್ಪಿಕೊಳ್ಳುವುದಿಲ್ಲ. ರಾಜ್ಯಪಾಲರು ಸರ್ಕಾರದ ಪದನಿಮಿತ್ತ ಮುಖ್ಯಸ್ಥರು ಎಂಬುದನ್ನು ನೀವು ಮರೆತಿದ್ದೀರಿ. ನೀವು ನಮಿಂದ ನೇರವಾಗಿ ಆಯ್ಕೆಯಾದ ಜನಪ್ರತಿನಿಧಿಯಲ್ಲ. ಒಂದು ಸರ್ಕಾರ ಬಹುಮತದೊಂದಿಗೆ ಸದೃಢವಾಗಿ ಕಾರ್ಯ ನಿರ್ವಹಿಸುತ್ತಿರುವಾಗ ದೈನಂದಿನ ಆಡಳಿತದಲ್ಲಿ ಮೂಗು ತೂರಿಸಲು ನಿಮಗೆ ಯಾವುದೇ ನೈತಿಕ ಅಧಿಕಾರವಿಲ್ಲ, ಸಾಂವಿಧಾನಿಕ ಹೊಣೆಗಾರಿಕೆಯಿಲ್ಲ. ಅದು ನಿಮ ವ್ಯಾಪ್ತಿಯ ಕೆಲಸವೂ ಅಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಕಾಲಕಾಲಕ್ಕೆ ಬದಲಾವಣೆ ಮಾಡುವ ಸಂವಿಧಾನಬದ್ಧ ಹಕ್ಕು ರಾಜ್ಯ ಸರ್ಕಾರಕ್ಕಿದೆ. ಸರ್ಕಾರ ಈಗ ಗ್ರೇಡಿಂಗ್ ವ್ಯವಸ್ಥೆ ಜಾರಿಗೆ ತರುತ್ತಿರುವುದಕ್ಕೆ ಸಾಕಷ್ಟು ಕಾರಣಗಳಿವೆ. ಇದರ ಸಾಧಕ ಬಾಧಕಗಳನ್ನು ನಮ ಜನಪ್ರತಿನಿಧಿಗಳು ನೋಡಿಕೊಳ್ಳುತ್ತಾರೆ.

ಬೆಂಗಳೂರು ಸ್ಥಳೀಯ ಭಾಷೆಗಳ ಸಂರಕ್ಷಣಾ ಸಂಘದವರು ನಿಮಗೆ ಕೊಟ್ಟಿದ್ದಾರೆ ಎನ್ನಲಾದ ಮನವಿಗೆ ತುರ್ತಾಗಿ ಪ್ರತಿಕ್ರಿಯಿಸಿರುವುದನ್ನು ಕೇಳಿ ಆಶ್ಚರ್ಯವಾಯಿತು. ಬೆಂಗಳೂರಿನಲ್ಲಿ ಇಂಥದ್ದೊಂದು ಸಂಘ ಇದೆ ಎಂಬುದೇ ನಮಗೆ ತಿಳಿದಿರಲಿಲ್ಲ.

ಈ ರೀತಿಯ ನಾಟಕಗಳನ್ನು ನಾವು ಎಷ್ಟೋ ನೋಡಿದ್ದೇವೆ. ಇಂಥ ಕುತಂತ್ರಗಳು ಕರ್ನಾಟಕಕ್ಕೆ ಹೊಸದೇನೂ ಅಲ್ಲ ಎಂದರು.

2
ಭಾರತ ಸಾರಥಿ
05/04/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com




ಬೆಂಗಳೂರು: ಅರ್.ವಿ. ಶಿಕ್ಷಕರ ಸಂಸ್ಥೆಯಲ್ಲಿ ಸಹಾಯಕ ಪ್ರಾಧ್ಯಾಪಕಿಯಾಗಿ ಸೇವೆ ಸಲ್ಲಿಸುತ್ತಿರುವ ಗೀತಾಲಕ್ಷ್ಮೀ ಅವರು ತಮ್ಮ ಶೈಕ್ಷಣಿಕ ಕ್ಷೇತ್ರದಲ್ಲಿ ಮಹತ್ವದ ಸಾಧನೆ ಮಾಡಿದ್ದಾರೆ. ಸಂಸ್ಥೆಯ ಪ್ರಾಂಶುಪಾಲರಾದ ಡಾ. ಕಾರ್ತಿಯಾಯಿನಿ ಅವರ ಮಾರ್ಗದರ್ಶನದಲ್ಲಿ "Effectiveness of Experiential Learning on Achievement and Interest in Social Science Among Secondary School Students" ಎಂಬ ಮಹಾಪ್ರಬಂಧವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ಡಾ. ಮನಮೋಹನ್ ಸಿಂಗ್ ನಗರ ವಿಶ್ವವಿದ್ಯಾಲಯದ 5ನೇ ಘಟಿಕೋತ್ಸವ ಸಮಾರಂಭದಲ್ಲಿ ಗೀತಾಲಕ್ಷ್ಮೀ ಅವರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಗಿದೆ. ಈ ಸಮಾರಂಭದಲ್ಲಿ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಪದವಿ ಪ್ರದಾನ ಮಾಡಿ ಅಭಿನಂದಿಸಿದರು. ಗೀತಾಲಕ್ಷ್ಮೀ ಅವರ ಈ ಸಾಧನೆಗೆ ಶಿಕ್ಷಣ ವಲಯದಲ್ಲಿ ಪ್ರಶಂಸೆ ವ್ಯಕ್ತವಾಗಿದ್ದು, ಸಂಸ್ಥೆಯ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಬಂಧು-ಬಳಗದಿಂದ ಶುಭಾಶಯಗಳ ಮಹಾಪೂರವೇ ಹರಿದುಬಂದಿದೆ.

# ದ ಹೌಸ್ ಆಫ್ ಸಂಟೋರಿ' ಟೋಕಿ ಬ್ಲ್ಯಾಕ್ ಬಿಡುಗಡೆ

ಬೆಂಗಳೂರು

'ದ ಹೌಸ್ ಆಫ್ ಸಂಟೋರಿ'ಯು ಭಾರತದಲ್ಲಿ ಟೋಕಿ ಸಂಟೋರಿ ವಿಸ್ಕಿ ಬ್ಲಾಕ್ ಅನ್ನು ಹೆಮ್ಮೆಯಿಂದ ಪರಿಚಯಿಸುತ್ತಿದೆ. ಇದು ಟೋಕಿ ಪೋರ್ಟ್ಫೋಲಿಯೊಗೆ ಸೇರ್ಪಡೆಯಾಗುತ್ತಿರುವ ಹೊಸ ಆವೃತ್ತಿಯಾಗಿದೆ. ಹಳೆಯ ಮತ್ತು ಹೊಸ ಜಪಾನ್ನ ಸಾರವನ್ನು ಸೆರೆಹಿಡಿಯಲು ಸಂಪ್ರದಾಯ ಮತ್ತು ನಾವೀನ್ಯತೆಯನ್ನು ಬೆರೆಸುವ ಮೂಲಕ, ಹೊಸತನದ ಉತ್ಸಾಹವನ್ನು ಇದು ಮೈಗೂಡಿಸಿಕೊಂಡಿದೆ.

ಈ ವರ್ಷದ ಆರಂಭದಲ್ಲಿ ಮುಂಬೈ ಮತ್ತು ದೆಹಲಿ ಡ್ಯೂಟಿ ಫ್ರೀ ಸೇರಿದಂತೆ ಪ್ರಮುಖ ಭಾರತೀಯ ವಿಮಾನ ನಿಲ್ದಾಣಗಳಲ್ಲಿನ ಜಾಗತಿಕ ಟ್ರಾವೆಲ್ ರಿಟೇಲ್ ಮೂಲಕ ಪದಾರ್ಪಣೆ ಮಾಡಿದ್ದ ಟೋಕಿ ಬ್ಲ್ಯಾಕ್, ಇದೀಗ ಕರ್ನಾಟಕದಲ್ಲಿಯೂ ಲಭ್ಯವಿದೆ. ಶೀಘ್ರದಲ್ಲೇ ಭಾರತದಾದ್ಯಂತ ಇತರ ಮಾರುಕಟ್ಟೆಗಳಿಗೂ ವಿಸ್ತರಿಸುವ ಯೋಜನೆ ಹೊಂದಿದೆ.

ಸಂಪ್ರದಾಯವನ್ನು ನಾವೀನ್ಯತೆಯೊಂದಿಗೆ ಸಮತೋಲನಗೊಳಿಸುವ ಜಪಾನೀಸ್ ತತ್ವಶಾಸ್ತ್ರದಲ್ಲಿ ಬೇರೂರಿರುವ 'ಟೋಕಿ ಬ್ಲ್ಯಾಕ್', ಜಪಾನೀಸ್ ವಿಸ್ಕಿ ತಯಾರಿಕೆಯ



ಆಳವಾದ ಮತ್ತು ಶ್ರೀಮಂತ ಮುಖವನ್ನು ಅನಾವರಣಗೊಳಿಸುತ್ತದೆ. ಇದನ್ನು ಇದೀಗ ಭಾರತದಲ್ಲಿ ಬೆಳೆಯುತ್ತಿರುವ ಪ್ರೀಮಿಯಂ ವಿಸ್ಕಿ ಪ್ರಿಯರ ಸಮುದಾಯಕ್ಕಾಗಿ ವಿಶೇಷವಾಗಿ ಸಿದ್ಧಪಡಿಸಲಾಗಿದೆ.

ಹಕುಶು ಹೆವಿಲಿ ಪೀಟೆಡ್ ಮಾಲ್ಟ್ ಮತ್ತು ಹಕುಶು ಧಾನ್ಯಗಳನ್ನು ಬಳಸಿ ತಯಾರಿಸಲಾದ ಟೋಕಿ ಸಂಟೋರಿ ವಿಸ್ಕಿ ಬ್ಲ್ಯಾಕ್, ನಯವಾದ, ಮೃದುವಾದ ಸ್ಮೋಕಿ (ಹೊಗೆಯ) ಪರಿಮಳವನ್ನು ಹೊಂದಿದ್ದು, ಇದು ಟೋಕಿ ಸಂಟೋರಿ ವಿಸ್ಕಿಯ ಮೃದುವಾದ ರುಚಿಗೆ ಇನ್ನಷ್ಟು ಮೆರುಗು ನೀಡುತ್ತದೆ. ಜಪಾನೀಸ್ ಭಾಷೆಯಲ್ಲಿ "ಟೋಕಿ" ಎಂದರೆ "ಸಮಯ", ಇದು ಸಂಪ್ರದಾಯ ಮತ್ತು ಹೊಸತನದ ನಡುವಿನ ಸಮತೋಲನವನ್ನು ಪ್ರತಿಬಿಂಬಿಸುತ್ತದೆ. ಈ ಹೊಸ ಆವೃತ್ತಿಯು ಬ್ರ್ಯಾಂಡ್ನ ಪರಂಪರೆಗೆ ನಿಷ್ಠವಾಗಿರುತ್ತಲೇ, ಮೂಲ ಟೋಕಿಯ ಗುಣಮಟ್ಟವನ್ನು ಮತ್ತಷ್ಟು ಉನ್ನತೀಕರಿಸುತ್ತದೆ.

ಈ ವಿಸ್ಕಿಯು ಬೇಯಿಸಿದ ಸೇಬು, ಒರೆಗಾನೊ ಮತ್ತು ಹನಿಸಕಲ್ ಹೂವಿನ ಪದರ–ಪದರವಾದ ಸುವಾಸನೆಯೊಂದಿಗೆ ತೆರೆದುಕೊಳ್ಳುತ್ತದೆ. ಆನಂತರ ಇದು ಬಟರ್ಸ್ಕಾಚ್ನ ಸಿಹಿತನ, ಜೊತೆಗೆ ಲವಂಗ, ದಾಲ್ಚಿನ್ನಿ ಮತ್ತು ಹುರಿದ ರೋಸ್ಮರಿಯ ಸಮತೋಲಿತ ರುಚಿಯನ್ನು ನೀಡುತ್ತದೆ. ಇದು ಬಿಳಿ ಮೆಣಸು, ಶುಂಠಿ ಮತ್ತು ಮೃದುವಾದ, ದೀರ್ಘಕಾಲ ಉಳಿಯುವ ಸ್ಮೋಕಿನೆಸ್ನೊಂದಿಗೆ (ಹೊಗೆಯ ಪರಿಮಳ) ಮುಕ್ತಾಯಗೊಳ್ಳುತ್ತದೆ – ಒಟ್ಟಾರೆಯಾಗಿ ಇದು ಅತ್ಯುತ್ತಮವಾದ ಮತ್ತು ಉನ್ನತ ಮಟ್ಟದ ರುಚಿಯ ಅನುಭವವನ್ನು ಸೃಷ್ಟಿಸುತ್ತದೆ. ಇದನ್ನು ನೇರವಾಗಿ ಸವಿಯಬಹುದು ಅಥವಾ ಟೋಕಿ ಬ್ಲ್ಯಾಕ್ ಹೈಬಾಲ್ನಂತಹ (ವಿಸ್ಕಿ ಮತ್ತು ಸೋಡಾ) ರಿಫ್ರೆಶ್ ಸರ್ವ್ಗಳೊಂದಿಗೂ ಆನಂದಿಸಬಹುದು, ಇದು ಅದರ ಗರಿಗರಿಯಾದ, ಸ್ಮೋಕಿ ಗುಣವನ್ನು ಮತ್ತಷ್ಟು ಹೆಚ್ಚಿಸುತ್ತದೆ.

# ಹಸಿವು ಮುಕ್ತ ರಾಜ್ಯ ನಿರ್ಮಿಸುವ ಕನಸಾಗಿ ಅನ್ನಭಾಗ್ಯ ಜಾರಿ: ಸಿ.ಎಂ.ಸಿದ್ದರಾಮಯ್ಯ

ಬಾಗಲಕೋಟೆ

ರೈತ–ಕಾರ್ಮಿಕ ವರ್ಗದ ಜೊತೆಗೆ ಶೋಷಿತ ಸಮುದಾಯಗಳನ್ನು ಒಟ್ಟಿಗೇ ಕರೆದೊಯ್ಯುವ ಏಕೈಕ ಪಕ್ಷ ಕಾಂಗ್ರೆಸ್ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಉಪ ಚುನಾವಣೆ ಪ್ರಯುಕ್ತ, "ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ" ಆಯೋಜಿಸಿದ್ದ "ಶೋಷಿತರ ಜಾಗೃತ ಸಭೆ" ಯಲ್ಲಿ ಮಾತನಾಡಿದರು.

ರೈತ–ಕಾರ್ಮಿಕ ವರ್ಗದ ಜೊತೆಗೆ ಶೋಷಿತ ಸಮುದಾಯಗಳನ್ನು ಒಟ್ಟಿಗೇಜನ ಕರೆದೊಯ್ಯುವ ಪಕ್ಷ ಕಾಂಗ್ರೆಸ್. ಪ್ರತಿಯೊಬ್ಬರಿಗೂ ಆರ್ಥಿಕ ಸ್ವಾತಂತ್ರ್ಯ ಮತ್ತು ಸಾಮಾಜಿಕ ಸ್ವಾತಂತ್ರ್ಯ ಅಗತ್ಯ ಎನ್ನುವ ಅಂಬೇಡ್ಕರ್ ಆಶಯದಂತೆ ಕಾಂಗ್ರೆಸ್ ಕಾರ್ಯಕ್ರಮಗಳನ್ನು ರೂಪಿಸುತ್ತಿದೆ. ಅಕ್ಷರ ಸಂಸ್ಕೃತಿಯಿಂದ ವಂಚಿತರಾದವರು ಸಾಮಾಜಿಕವಾಗಿ ಹಿಂದುಳಿಯುತ್ತಾರೆ. ಇದರಿಂದ ಹಿಂದುಳಿದವರು ಅವಕಾಶಗಳಿಂದ ವಂಚಿತರಾಗುತ್ತಾರೆ ಎಂದರು.

ಅದಕ್ಕೇ ಬಸವಣ್ಣನವರು ಕರ್ಮ ಸಿದ್ಧಾಂತವನ್ನು ವಿರೋಧಿಸಿದ್ದರು. ನಮ್ಮ ಬಡತನಕ್ಕೆ ಹಿಂದಿನ ಜನ್ಮದ ಕರ್ಮಫಲ ಕಾರಣ ಎನ್ನುವ ಮೌಢ್ಯವನ್ನು ಗಟ್ಟಿಯಾಗಿ ಬಿತ್ತಿದ್ದಾರೆ ಎಂದರು. ನಾನು ಮೊದಲ ಬಾರಿ ಮುಖ್ಯಮಂತ್ರಿಯಾದಾಗ ದೇವರಾಜ ಅರಸು ನಿಗಮ, ವಾಲ್ಮೀಕಿ ಅಭಿವೃದ್ಧಿ ನಿಗಮ, ಅಂಬೇಡ್ಕರ್ ನಿಗಮ ಮತ್ತು ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ಸಾಲ ಮತ್ತು ಬಡ್ಡಿಯನ್ನು ಮನ್ನಾ ಮಾಡಿದೆ. ಈ ಸಮುದಾಯಗಳು ಸಾಲದಿಂದ ಮುಕ್ತರಾಗಬೇಕು ಎನ್ನುವ ಉದ್ದೇಶದಿಂದ ಮಾಡಿದ್ದಾಗಿತ್ತು ಎಂದರು.

ಜನರಲ್ಲಿ ಕೊಳ್ಳುವ ಶಕ್ತಿ ಇಲ್ಲದೇ ಹೋದರೆ ಉತ್ಪಾದನೆ ಕುಸಿಯುತ್ತದೆ. ಆದ್ದರಿಂದ ಜನರ ಕೊಳ್ಳುವ ಶಕ್ತಿ ಹೆಚ್ಚಿಸುವ ಕಾರ್ಯಕ್ರಮಗಳನ್ನು ನಾವು ರೂಪಿಸುತ್ತೇವೆ. ಕಾಂಗ್ರೆಸ್ ಸದಾ ಬಡವರ ಶೋಷಿತರ ಪರವಾಗಿ ಇರುವ ಪಕ್ಷ. ಬಿಜೆಪಿ ಕಾರ್ಪೋರೇಟ್ ಮತ್ತು ಶ್ರೀಮಂತರ ಪರವಾಗಿ ಇರುವ ಪಕ್ಷ. ಈ ವ್ಯತ್ಯಾಸವನ್ನು ನೀವು ಅರಿತುಕೊಳ್ಳಬೇಕು ಎಂದರು.

ನಾನು ಮೊದಲ ಬಾರಿ ಮುಖ್ಯಮಂತ್ರಿಯಾದಾಗ ದೇವರಾಜ ಅರಸು ನಿಗಮ, ವಾಲ್ಮೀಕಿ ಅಭಿವೃದ್ಧಿ ನಿಗಮ, ಅಂಬೇಡ್ಕರ್ ನಿಗಮ ಮತ್ತು ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ಸಾಲ ಮತ್ತು ಬಡ್ಡಿಯನ್ನು ಮನ್ನಾ ಮಾಡಿದೆ. ಈ ಸಮುದಾಯಗಳು ಸಾಲದಿಂದ ಮುಕ್ತರಾಗಬೇಕು ಎನ್ನುವ ಉದ್ದೇಶದಿಂದ ಮಾಡಿದ್ದಾಗಿತ್ತು ಎಂದರು.

ಜನರಲ್ಲಿ ಕೊಳ್ಳುವ ಶಕ್ತಿ ಇಲ್ಲದೇ ಹೋದರೆ ಉತ್ಪಾದನೆ ಕುಸಿಯುತ್ತದೆ. ಆದ್ದರಿಂದ ಜನರ ಕೊಳ್ಳುವ ಶಕ್ತಿ ಹೆಚ್ಚಿಸುವ ಕಾರ್ಯಕ್ರಮಗಳನ್ನು ನಾವು ರೂಪಿಸುತ್ತೇವೆ. ಕಾಂಗ್ರೆಸ್ ಸದಾ ಬಡವರ ಶೋಷಿತರ ಪರವಾಗಿ ಇರುವ ಪಕ್ಷ. ಬಿಜೆಪಿ ಕಾರ್ಪೋರೇಟ್ ಮತ್ತು ಶ್ರೀಮಂತರ ಪರವಾಗಿ ಇರುವ ಪಕ್ಷ. ಈ ವ್ಯತ್ಯಾಸವನ್ನು ನೀವು ಅರಿತುಕೊಳ್ಳಬೇಕು ಎಂದರು.

ನಾನು ಅಸಮಾನತೆ ವಿರುದ್ಧ ಇದ್ದೇನೆ, ಶೋಷಿತರ ಪರವಾಗಿ ಇದ್ದೇನೆ ಎನ್ನುವ ಕಾರಣಕ್ಕೆ ಖಖಖ ಮತ್ತು ಮನುವಾದಿಗಳು ನನ್ನ ಮೇಲೆ ಅಟಾಕ್ ಮಾಡ್ತಾರೆ. ಪ್ರತಾಪ ಸಿಂಹನ ಮೂಲಕ ನನ್ನನ್ನು ಗುರಿಯಾಗಿಸಿ, ಟಾರ್ಗೆಟ್ ಮಾಡಿಸಿ ಹೇಳಿಕೆ ನೀಡುತ್ತಾರೆ ಎಂದರು.

ಹೀಗಾಗಿ ಃಏಕ–ಖಖಖ ಮತ್ತು ಮನುವಾದಿಗಳ ಷಡ್ಯಂತ್ರವನ್ನು ಅರಿತು ಅದಕ್ಕೆ ತಕ್ಕ ಉತ್ತರ ನೀಡುವ ಶಕ್ತಿ ನಿಮಗೆ ಮಾತ್ರ ಇದೆ ಎಂದರು. ಈ ಕಾರಣಕ್ಕೆ ಉಪ ಚುನಾವಣೆಯಲ್ಲಿ ಬಿಜೆಪಿ ಗೆಲ್ಲಬಾರದು. ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಗೆಲ್ಲಬೇಕು. ಈ ದಿಕ್ಕಿನಲ್ಲಿ ಶ್ರಮ ಹಾಕಿ ಎಂದು ಮನವಿ ಮಾಡಿದರು.

ಸಚಿವರಾದ ಶಿವರಾಜ್ ತಂಗಡಗಿ, ಆರ್.ಬಿ.ತಿಮ್ಮಾಪುರ್, ಒಕ್ಕೂಟದ ಅಧ್ಯಕ್ಷರಾದ ರಾಮಚಂದ್ರಣ್ಣ ಸೇರಿ ಒಕ್ಕೂಟದ ಪದಾಧಿಕಾರಿಗಳು, ಶಾಸಕರುಗಳು ಉಪಸ್ಥಿತರಿದ್ದರು.

# ಕೋರಮಂಗಲ ಟೋಸ್ಟ್‌ಮಾಸ್ಟರ್ಸ್ ಕ್ಲಬ್‌ನ ವಿಶೇಷ ಹೊರಾಂಗಣ ಸಭೆ – ಫ್ರೀಡಂ ಪಾರ್ಕ್‌ನಲ್ಲಿ ಮರೆಯಲಾಗದ ಕ್ಷಣಗಳು

ಕೋರಮಂಗಲ ಟೋಸ್ಟ್‌ಮಾಸ್ಟರ್ಸ್ ಕ್ಲಬ್ (**KTMC**) ಸಂವಹನ ಮತ್ತು ನಾಯಕತ್ವ ಕೌಶಲ್ಯಗಳನ್ನು ಬೆಳೆಸುವ ಸಜೀವ ವೇದಿಕೆಯಾಗಿದೆ. 2012ರ ಫೆಬ್ರವರಿ 13ರಂದು ಶ್ರೀ ಸುಬ್ರಮಣಿಯನ್ ಚಿಟ್ಟೂರ್ ಅವರ ದೃಷ್ಟಿ ಮತ್ತು ಪ್ರಯತ್ನಗಳಿಂದ ಸ್ಥಾಪಿತವಾದ ಈ ಕ್ಲಬ್, ಮಾತನಾಡುವಿಕೆ, ಕಲಿಕೆ ಮತ್ತು ಪರಸ್ಪರ ಸಂಪರ್ಕಗಳ ಮೂಲಕ ವ್ಯಕ್ತಿತ್ವವನ್ನು ರೂಪಿಸುವ ಕೇಂದ್ರವಾಗಿ ಬೆಳೆಯುತ್ತಿದೆ.

ಸಾಮಾನ್ಯ ಸಭೆಗಳಿಗಿಂತ ವಿಭಿನ್ನವಾಗಿ, ಇತ್ತೀಚೆಗೆ ಏಖಿಂಅ ಫ್ರೀಡಂ ಪಾರ್ಕ್‌ನಲ್ಲಿ ವಿಶೇಷ ಹೊರಾಂಗಣ ಸಭೆಯನ್ನು ಆಯೋಜಿಸಿತು. ಮುಕ್ತ ವಾತಾವರಣ, ಶುದ್ಧ ಗಾಳಿ ಮತ್ತು ಶಾಂತ ಪರಿಸರ ಸಭೆಗೆ ಹೊಸ ಉತ್ಸಾಹವನ್ನು ನೀಡಿದ್ದು, ಎಲ್ಲರಿಗೂ ಸ್ಮರಣೀಯ ಮತ್ತು ಅರ್ಥಪೂರ್ಣ ಅನುಭವವನ್ನು ನೀಡಿತು.

ಈ ವಿಶೇಷ ಅವಕಾಶವನ್ನು ಫ್ರೀಡಂ ಪಾರ್ಕ್ ಅಧ್ಯಕ್ಷರಾದ ಡಾ. ಗಂಡಸಿ ಸದಾನಂದ ಸ್ವಾಮಿ ಅವರ ಉದಾರ ಸಹಕಾರದಿಂದ ಸಾಧ್ಯವಾಯಿತು. ಅವರು ಸ್ಥಳವನ್ನು ಒದಗಿಸಿ, ಎಲ್ಲಾ ವ್ಯವಸ್ಥೆಗಳನ್ನು ಸುಗಮವಾಗಿ ನಡೆಸಿಕೊಟ್ಟಿದ್ದು, ಕಾರ್ಯಕ್ರಮದ ಮಹತ್ವವನ್ನು ಹೆಚ್ಚಿಸಿತು.

ಕಾರ್ಯಕ್ರಮದ ಪ್ರಮುಖ ಕ್ಷಣಗಳಲ್ಲಿ ಒಂದು ಮರ ನೆಡುವ ಕಾರ್ಯಕ್ರಮವಾಗಿತ್ತು. ಇದು ನಿಜವಾದ



ಅರ್ಥದಲ್ಲಿ ಬೆಳವಣಿಗೆಯನ್ನು ಪ್ರತಿಬಿಂಬಿಸಿತು. ಪ್ರತಿಯೊಬ್ಬ ಟೋಸ್ಟ್‌ಮಾಸ್ಟರ್ ಸಮಯ, ಶ್ರಮ ಮತ್ತು ಸೂಕ್ತ ವಾತಾವರಣದೊಂದಿಗೆ ಹೇಗೆ ಬೆಳೆದು ಬರುತ್ತಾರೆ ಎಂಬುದಕ್ಕೆ ಇದು ಸಂಕೇತವಾಗಿತ್ತು.

ಈ ಕಾರ್ಯಕ್ರಮಕ್ಕೆ ಡಿಸ್ಟ್ರಿಕ್ಟ್ 121ರ ಏರಿಯಾ ಅ03 ನಿರ್ದೇಶಕರಾದ ಪೊನ್ರಾಮ್ ಕೆ ಅವರು ಸಹ ಆಗಮಿಸಿ, ಈ ಅರ್ಥಪೂರ್ಣ ಉಪಕ್ರಮದಲ್ಲಿ ಭಾಗಿಯಾದರು.

ಈ ಹೊರಾಂಗಣ ಸಭೆ ಕೇವಲ ಸ್ಥಳ ಬದಲಾವಣೆಯಲ್ಲ, ಅದು ಸಂಪರ್ಕ, ಬೆಳವಣಿಗೆ ಮತ್ತು ಜೀವನಪೂರ್ತಿ ನೆನಪಿನಲ್ಲಿ ಉಳಿಯುವ ಅನುಭವಗಳ ಸಂಕಲನವಾಗಿತ್ತು. ಕೋರಮಂಗಲ ಟೋಸ್ಟ್‌ಮಾಸ್ಟರ್ಸ್ ಕ್ಲಬ್ ಸದಾ ಸಭೆಗಳನ್ನು ಮೀರಿ, ಒಟ್ಟಿಗೆ ಬೆಳೆದು ಪರಸ್ಪರ ಪ್ರೇರೇಪಿಸುವ ಸಮುದಾಯವನ್ನು ನಿರ್ಮಿಸುತ್ತಿದೆ.



# ಕಾಂಗ್ರೆಸ್ ಯುವ ಮುಖಂಡ ದಿನೇಶ್ ಹುಟ್ಟುಹಬ್ಬ ಆಚರಣೆ

ಬೆಂಗಳೂರು: ಕಾಂಗ್ರೆಸ್ ಯುವ ಮುಖಂಡರಾದ ಬ್ಯಾಟರಾಯನಪುರ ದಿನೇಶ್ ಅವರ ಹುಟ್ಟುಹಬ್ಬವನ್ನು ನಗರದ ಕುಮಾರ ಪಾರ್ಕ್‌ನಲ್ಲಿರುವ ಬುದ್ಧಿಮಾನ ತಮ್ಮ ಮಕ್ಕಳ ಶಾಲೆ ಹಾಗೂ ಮಾತೃಶ್ರೀ ಮನೋವಿಕಾಸ ಕೇಂದ್ರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮಕ್ಕಳೊಂದಿಗೆ ಕೇಕ್ ಕತ್ತರಿಸಿ ಸಂಭ್ರಮಿಸಲಾಯಿತು ಹಾಗೂ ಅವರಿಗೆ ಅಗತ್ಯ ವಸ್ತುಗಳನ್ನು ವಿತರಿಸುವ ಮೂಲಕ ದಿನೇಶ್ ಅವರು ತಮ್ಮ ಹುಟ್ಟುಹಬ್ಬವನ್ನು ವಿಶೇಷವಾಗಿ ಆಚರಿಸಿದರು. ಕಾರ್ಯಕ್ರಮದಲ್ಲಿ ಚಲನಚಿತ್ರ ನಿರ್ಮಾಪಕರಾದ ಕೆ.ಎಂ. ನಟರಾಜ್, ಯುವ ಮುಖಂಡರಾದ ಸುರೇಶ್ ವಾಲೆ, ಮಹೇಶ್, ವಸಂತ್ ಕುಮಾರ್, ಪಾಪು, ವೆಂಕಟೇಶ್, ಚಂದ್ರಶೇಖರ್ ಸೇರಿದಂತೆ ಹಲವರು ಉಪಸ್ಥಿತರಿದ್ದು, ದಿನೇಶ್ ಅವರಿಗೆ ಶುಭಾಶಯಗಳನ್ನು ತಿಳಿಸಿದರು. ಈ ಕಾರ್ಯಕ್ರಮವು ಸಮಾಜ ಸೇವೆಯೊಂದಿಗೆ ಹುಟ್ಟುಹಬ್ಬವನ್ನು ಆಚರಿಸುವ ಮೂಲಕ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

# ಮಾಹಿತಿ ಹಕ್ಕು ಕಾಯ್ದೆಯಡಿ ಮಾಹಿತಿ ಒದಗಿಸುವುದು ಅಧಿಕಾರಿಗಳ ಕಡ್ಡಾಯ ಜವಾಬ್ದಾರಿ : ಡಾ.ಹರೀಶ್ ಕುಮಾರ್

ಕಾರವಾರ

ಮಾಹಿತಿ ಹಕ್ಕು ಕಾಯಿದೆ ಯಡಿ ಮಾಹಿತಿ ಕೋರಿ ಸಾರ್ವಜನಿಕರು ಸಲ್ಲಿಸುವ ಅರ್ಜಿಗಳಿಗೆ ನಿಗದಿತ ಅವಧಿಯೊಳಗೆ ಅಗತ್ಯ ಮಾಹಿತಿ ಒದಗಿಸುವುದು ಎಲ್ಲಾ ಇಲಾಖೆಗಳ ಮಾಹಿತಿ ಅಧಿಕಾರಿಗಳ ಕಡ್ಡಾಯ ಜವಾಬ್ದಾರಿಯಾಗಿದೆ ಎಂದು ರಾಜ್ಯ ಮಾಹಿತಿ ಆಯೋಗದ ಆಯುಕ್ತ ಡಾ. ಹರೀಶ್ ಕುಮಾರ್ ತಿಳಿಸಿದರು.

ಅವರು ಶನಿವಾರ ಉತ್ತರ ಕನ್ನಡ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಆಯೋಜಿಸಿದ್ದ ಮಾಹಿತಿ ಹಕ್ಕು ಕಾಯ್ದೆ ಕುರಿತು ಜಾಗೃತಿ ಕಾರ್ಯಗಾರ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಾಹಿತಿ ಹಕ್ಕು ಕಾಯಿದೆಯು ಸಾರ್ವಜನಿಕ ಆಡಳಿತ ವ್ಯವಸ್ಥೆಯಲ್ಲಿ ಪಾರದರ್ಶಕತೆ ಮತ್ತು ಕಾನೂನಾತ್ಮಕವಾಗಿ ಸಾರ್ವಜನಿಕ ಕೆಲಸಗಳನ್ನು ಮಾಡಲು ಸಹಕಾರಿಯಾಗಿದ್ದು,ಇದು ಸಾರ್ವಜನಿಕರ ಕುಂದುಕೊರತೆಗಳನ್ನು ನಿವಾರಣೆ ಮಾಡುವ ಕಾಯಿದೆಯಾಗಿ ಬದಲಾಗಿದೆ , ಅಧಿಕಾರಿಗಳು ಪ್ರಾಮಾಣಿಕವಾಗಿ ತಪ್ಪುಗಳನ್ನು ಮಾಡದಂತೆ ಕೆಲಸ ನಿರ್ವಹಿಸಲು ಕಾಯ್ದೆ ಸಹಕಾರಿಯಾಗಿದೆ ಎಂದರು.

ಕಾಯಿದೆಯ ಕುರಿತಂತೆ ಆಗಿಂದಾಗ್ಗೆ ಸರ್ವೋಚ್ಚ ನ್ಯಾಯಾಲಯ, ಹೈಕೋರ್ಟ್ ನೀಡುವ ತೀರ್ಪುಗಳ ಕುರಿತಂತೆ ಮಾಹಿತಿ ಅಧಿಕಾರಿಗಳು ಅರಿವು ಹೊಂದಿರಬೇಕು, ಕಾಯಿದೆಯಲ್ಲಿನ ಎಲ್ಲಾ ಅಂಶಗಳ ಬಗ್ಗೆ ಸಮಗ್ರವಾಗಿ ಅರಿತುಕೊಂಡು ಸಾರ್ವಜನಿಕರಿಗೆ ಮಾಹಿತಿಗಳನ್ನು ಒದಗಿಸಬೇಕು. ಪ್ರಥಮ ಮೇಲ್ಮನವಿ ಮತ್ತು ಎರಡನೇ ಮೆಲ್ಮನವಿಗಳ ಸಲ್ಲಿಕೆಗೆ ಅವಕಾಶ ನೀಡದೇ ಅರ್ಜಿಗಳನ್ನು ಕಾಲಮಿತಿಯಲ್ಲಿ ವಿಲೇಗೊಳಿಸಬೇಕು. ನಿಗಧಿತ ಅವಧಿಯೊಳಗೆ ಮಾಹಿತಿ ಒದಗಿಸದ ಅಧಿಕಾರಿಗಳಿಗೆ ರೂ.25000 ಗಳವರೆಗೆ ದಂಡ ಮತ್ತು ಕರ್ತವ್ಯ ಲೋಪದಡಿ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡುವ ಅಧಿಕಾರ ಆಯೋಗಕ್ಕಿದೆ ಎಂದರು.

ಸಾರ್ವಜನಿಕರಿಗೆ ಶೀಘ್ರದಲ್ಲಿ ಮತ್ತು ಸಮರ್ಪಕವಾದ ಮಾಹಿತಿ ನೀಡಲು ಅನುಕೂಲವಾಗುವಂತೆ ಕಚೇರಿಗಳಲ್ಲಿ ಕಡತಗಳನ್ನು ವರ್ಗೀಕರಣ ಮಾಡಿಟ್ಟುಕೊಳ್ಳಬೇಕು, ಕಡತಗಳನ್ನು ನಿಯಮಾನುಸಾರ ನಾಶಪಡಿಸಿದ್ದರೆ ಈ ಬಗ್ಗೆ ದಾಖಲೆ ಇರಬೇಕು, ಕಡತಗಳು ಕಣ್ಮರೆಯಾಗಿದ್ದಲ್ಲಿ ಎಫ್.ಐ.ಆರ್ ದಾಖಲಿಸಬೇಕು ಇಲ್ಲವಾದಲ್ಲಿ ಸಂಬಂದ ಪಟ್ಟ ಅಧಿಕಾರಿಯ ವಿರುದ್ದವೇ ಶಿಕ್ಷೆ ವಿಧಿಸಬಹುದಾಗಿದೆ ಎಂದು ತಿಳಿಸಿದರು.

ಮಾಹಿತಿ ಹಕ್ಕು ಕಾಯಿದೆಯ ವಿವಿಧ ಸೆಕ್ಷನ್‌ಗಳಡಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕಾದ ಕಾರ್ಯಗಳ ಕುರಿತು ವಿವರವಾದ ಮಾಹಿತಿ ನೀಡಿದ ಅವರು ಕಾಯಿದೆಯನ್ನು ಅತ್ಯಂತ ಪರಿಣಾಮಕಾರಿಯಾಗಿ ಹಾಗೂ ಸಮರ್ಪಕವಾಗಿ ಅನುಷ್ಠಾನಗೊಳಿಸುವಂತೆ ನಿರ್ದೇಶನ ನೀಡಿದ ಅವರು ಜಿಲ್ಲೆಯ ಎಲ್ಲಾ ಕಚೇರಿಗಳಲ್ಲಿ ಕಚೇರಿಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಮತ್ತು ಮೇಲ್ಮನವಿ ಅಧಿಕಾರಿಗಳ ವಿವರಗಳನ್ನು ಹಾಗೂ ಸೆಕ್ಷನ್ 4 (1)ಎ ಮತ್ತು 4 (1)ಬಿ ಮಾಹಿತಿಯನ್ನು ಕಡ್ಡಾಯವಾಗಿ ಅಳವಡಿಸುವಂತೆ ಸೂಚಿಸಿದರು.

ಮಾಹಿತಿ ಆಯೋಗದ ಆಯುಕ್ತ ಬದ್ರುದ್ದೀನ್ ಕೆ ಮಾತನಾಡಿ, ಮಾಹಿತಿ ಹಕ್ಕು ಕಾಯಿದೆಯಡಿ ಅರ್ಜಿದಾರರು ಕೋರುವ ಮಾಹಿತಿಯನ್ನು ವಿವರವಾಗಿ ಪರಿಶೀಲಿಸಿ ಅಗತ್ಯ ಮಾಹಿತಿಯನ್ನು , ನಿಗಧಿತ ಶುಲ್ಕ ಪಡೆದು ಕಾಲಮಿತಿಯಲ್ಲಿ ನೀಡಬೇಕು. ಈ ಕಾಯಿದೆಯ ದುರ್ಬಳಕೆ ಕುರಿತು ಕೂಡಾ ಆಯೋಗಕ್ಕೆ ದೂರುಗಳು ಬಂದಿದ್ದು , ಆಯೋಗವು ಇದುವರೆಗೆ 26 ಜನರನ್ನು ಕಪ್ಪುಪಟ್ಟಿಗೆ ಸೇರ್ಪಡೆ ಮಾಡಿದೆ. ಕಳೆದ ವರ್ಷ ಫೆಬ್ರವರಿಯಲ್ಲಿ ಆಯೋಗದಲ್ಲಿ 55400 ಮೇಲ್ಮನವಿ ಅರ್ಜಿಗಳು ವಿಚಾರಣೆಗೆ ಬಾಕಿ ಇತ್ತು , ನಂತರ ಈ ವರ್ಷ ಸಲ್ಲಿಕೆಯಾದ ಮೇಲ್ಮನವಿಗಳು ಸೇರಿ ಬಹುತೇಕ ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದ್ದು, ಪ್ರಸ್ತುತ ರಾಜ್ಯದಲ್ಲಿ 28731 ಮೇಲ್ಮನವಿಗಳು ವಿಚಾರಣೆಗೆ ಬಾಕಿ ಇವೆ. ಉತ್ತರ ಕನ್ನಡ ಜಿಲ್ಲೆಯ 524 ಅರ್ಜಿಗಳು ಬಾಕಿ ಇದ್ದು ಜಿಲ್ಲೆಯು ರಾಜ್ಯದಲ್ಲಿ 17 ನೇ ಸ್ಥಾನದಲ್ಲಿದ್ದು, ಈ ಪೈಕಿ 164 ಅರ್ಜಿಗಳು ಆರ್.ಡಿ.ಪಿ.ಆರ್ ಮತ್ತು 110 ಅರ್ಜಿಗಳು ಕಂದಾಯ ಇಲಾಖೆಗೆ ಸೇರಿದ್ದು , ಉಳಿದದ್ದು ಇತರೆ ಇಲಾಖೆಗಳಿಗೆ ಸಂಬದ್ಧಪಟ್ಟದ್ದಾಗಿದೆ ಎಂದರು.

ಅರ್ಜಿಗಳನ್ನು ಪ್ರಥಮ ಮೇಲ್ಮನವಿ ಅಧಿಕಾರಿಗಳ ಹಂತದಲ್ಲೇ ವಿಲೇ ಮಾಡುವ ಉದ್ದೇಶದಿಂದ ಜಿಲ್ಲೆಯಲ್ಲಿ ಎಲ್ಲಾ ಇಲಾಖಾಧಿಕಾರಿಗಳು ತಮ್ಮ ಹಂತದಲ್ಲಿ ಪರಿಶೀಲನಾ ಸಭೆಯನ್ನು ಕಾಲಕಾಲಕ್ಕೆ ನಡೆಸುವಂತೆ ಮತ್ತು ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಮಾಹಿತಿ ಹಕ್ಕು ಅರ್ಜಿಗಳ ವಿಲೇವಾರಿಯನ್ನು ಒಂದು ವಿಷಯವನ್ನಾಗಿ ಕಾರ್ಯಸೂಚಿಯಲ್ಲಿ ತೆಗೆದುಕೊಂಡು ಪ್ರಗತಿ ಪರಿಶೀಲನೆ ನಡೆಸುವಂತೆ ತಿಳಿಸಿದರು. ಅರ್ಜಿಗಳನ್ನು ಪ್ರಥಮ ಮೇಲ್ಮನವಿ ಅಧಿಕಾರಿಗಳ ಹಂತದಲ್ಲೇ ವಿಲೇ ಮಾಡುವ ಉದ್ದೇಶದಿಂದ ಜಿಲ್ಲೆಯಲ್ಲಿ ಎಲ್ಲಾ ಇಲಾಖಾಧಿಕಾರಿಗಳು ತಮ್ಮ ಹಂತದಲ್ಲಿ ಪರಿಶೀಲನಾ ಸಭೆಯನ್ನು ಕಾಲಕಾಲಕ್ಕೆ ನಡೆಸುವಂತೆ ಮತ್ತು ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಮಾಹಿತಿ ಹಕ್ಕು ಅರ್ಜಿಗಳ ವಿಲೇವಾರಿಯನ್ನು ಒಂದು ವಿಷಯವನ್ನಾಗಿ ಕಾರ್ಯಸೂಚಿಯಲ್ಲಿ ತೆಗೆದುಕೊಂಡು ಪ್ರಗತಿ ಪರಿಶೀಲನೆ ನಡೆಸುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಮಾತನಾಡಿ, ಜಿಲ್ಲೆಯಲ್ಲಿ ಕಂದಾಯ,ಅರಣ್ಯ. ಪೊಲೀಸ್, ಗ್ರಾಮೀಣಭಿವೃದ್ಧಿ ಇಲಾಖೆಗಳಿಗೆ ಸಂಬಂಧಿಸಿದ ಹೆಚ್ಚಿನ ಸಂಖ್ಯೆಯಲ್ಲಿ ಮಾಹಿತಿ ಹಕ್ಕು ಕಾಯಿದೆ ಅರ್ಜಿಗಳು ಸಲ್ಲಿಕೆಯಾಗುತ್ತಿದ್ದು, ಕಾಯಿದೆಯು ಸಾರ್ವಜನಿಕರಿಗೆ ಆಡಳಿತ ವ್ಯವಸ್ಥೆ ಮೇಲೆ ನಂಬಿಕೆ ಮೂಡಿಸುವ ಮತ್ತು ಪ್ರಜಾಪ್ರಭುತ್ವದ ಬಲಪಡಿಸಲು ಸಹಾಯವಾಗಲಿದ್ದು, ಕಂದಾಯ ಇಲಾಖೆಯಲ್ಲಿ ಡಿಜಿಟಲೀಕರಣ ನಡೆಯುತ್ತಿರುವುದರಿಂದ ಮುಂದಿನ ದಿನಗಳಲ್ಲಿ ಅತ್ಯಂತ ಶೀಘ್ರದಲ್ಲಿ ಮಾಹಿತಿ ಒದಗಿಸಲು ಸಾಧ್ಯವಾಗಲಿದ್ದು ಪಾರದರ್ಶಕತೆ ತರಲು ಸಾಧ್ಯವಾಗಲಿದೆ. ಜಿಲ್ಲೆಯ ಎಲ್ಲಾ ಅಧಿಕಾರಿಗಳು ಕಾಯಿದೆಯ ಕುರಿತಂತೆ ಸಂಪೂರ್ಣ ಅರಿವು ಹೊಂದಿರಬೇಕು ಎಂದರು.

ಮಾಹಿತಿ ಆಯುಕ್ತ ನಾರಾಯಣ ಚನ್ನಾಳ, ಜಿ.ಪಂ. ಸಿಇಓ ಡಾ.ದಿಲೀಷ್ ಶಶಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಕೃಷ್ಣಮೂರ್ತಿ, ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಹಾಗೂ ಜಿಲ್ಲೆಯ ಎಲ್ಲಾ ಇಲಾಖೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಇದ್ದರು.

ನಂತರ ಸಾರ್ವಜನಿಕರು ಹಾಗೂ ಮಾಧ್ಯಮದವರೊಂದಿಗೆ ಮಾಹಿತಿ ಹಕ್ಕು ಕಾಯ್ದೆ ಕುರಿತು ಸಂವಾದ ಚರ್ಚೆ ನಡೆಯಿತು.

# ಗ್ಯಾರಂಟಿ ಯೋಜನೆಗಳಿಗಾಗಿ ಕಾಂಗ್ರೆಸ್ ಸರ್ಕಾರ 1 ಲಕ್ಷ 36 ಸಾವಿರ ಕೋಟಿ ವೆಚ್ಚ

ದಾವಣಗೆರೆ

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಪಂಚಗ್ಯಾರಂಟಿ ಯೋಜನೆಗಳನ್ನು ಟೀಕಿಸಿ, ಅನಗತ್ಯ ಅಪಪ್ರಚಾರ ಮಾಡುತ್ತಿರುವ ಬಿಜೆಪಿಗೆ ಮತ ನೀಡಬಾರದು. ಗ್ಯಾರಂಟಿ ಯೋಜನೆಗಳು ಜನರ ಕೊಳ್ಳುವ ಸಾಮರ್ಥ್ಯವನ್ನು ಹೆಚ್ಚಿಸಿದೆ. ಬೆಲೆ ಏರಿಕೆಯಿಂದ ಬಸವಳಿಯುತ್ತಿರುವ ಜನತೆಗೆ ಗ್ಯಾರಂಟಿ ಯೋಜನೆಗಳು ನೆರವಾಗಿವೆ. ಗ್ಯಾರಂಟಿ ಯೋಜನೆಗಳಿಗಾಗಿ ಕಾಂಗ್ರೆಸ್ ಸರ್ಕಾರ 1 ಲಕ್ಷ 36 ಸಾವಿರ ಕೋಟಿ ಹಣ ಖರ್ಚು ಮಾಡಿದೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಹೇಳಿದರು.

ನಗರದ ಎಪಿಎಂಸಿ ಮಾರುಕಟ್ಟೆ ಬಳಿ ಗ್ಯಾರಂಟಿ ಫಲಾನುಭವಿಗಳ ಜೊತೆ ಸಂವಾದ ನಡೆಸಿದ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ರಾಜ್ಯದಲ್ಲಿ ಎರಡು ಮಾಡೆಲ್ ಗಳಿವೆ. ಮೊದಲನೆಯದು ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಮಾಡೆಲ್. ಎರಡನೇಯದು ಮೋದಿ ಸರ್ಕಾರದಿಂದ ರಾಜ್ಯದ ಜನತೆಯ ಜೇಬು ಕತ್ತರಿಸುವ ಮಾಡೆಲ್. ಜನರ ಜೇಬಿಗೆ ಹಾಕುತ್ತಿರುವ ಕತ್ತರಿಯಿಂದ ಬಚಾವ್ ಆಗಲು ಗ್ಯಾರಂಟಿ ಯೋಜನೆಗಳು ಸಹಕಾರಿಯಾಗಿವೆ ಎಂದರು.

2014ರಲ್ಲಿ ಬಿಜೆಪಿ ಸರ್ಕಾರದ ಅಧಿಕಾರಕ್ಕೆ ಬರುವ ಮುನ್ನ ಗ್ಯಾಸ್ ಬೆಲೆ 400 ರೂ. ಆಸುಪಾಸಿನಲ್ಲಿತ್ತು. ಈಗ ಎಲ್ ಪಿಜಿ ಸಿಲಿಂಡರ್ ಬೆಲೆ 950 ರೂ. ದಾಟಿದೆ. ಲೀಟರ್ ಗೆ 70 ರೂಪಾಯಿಯಿದ್ದ ಪೆಟ್ರೋಲ್ ಈಗ 102ರ ಗಡಿ ದಾಟಿದೆ. ಡೀಸೆಲ್ 56 ರೂಪಾಯಿಂದ 96ಕ್ಕೆ ಜಿಗಿದಿದೆ. ಏ.1ರಿಂದ ಟೋಲ್ ದರ ಹೆಚ್ಚಳ ಮಾಡಲಾಗಿದೆ. ಕರ್ನಾಟಕದಿಂದ ವರ್ಷಕ್ಕೆ 5000 ಸಾವಿರ



ಕೋಟಿ ರೂ. ಟೋಲ್ ಟ್ಯಾಕ್ಸ್ ಸಂಗ್ರಹ ಮಾಡಲಾಗಿದೆ. ದೇಶದಾದ್ಯಂತ 2.80 ಲಕ್ಷ ಕೋಟಿ ಟೋಲ್ ಟ್ಯಾಕ್ಸ್ ಸಂಗ್ರಹವಾಗುತ್ತಿದೆ ಎಂದರು.

ಪ್ಲಾಸ್ಟಿಕ್ ಸರಕು ಸಾಮಾಗ್ರಿಗಳ ಬೆಲೆಗಳು ಶೇ. 50 ಹೆಚ್ಚಾಗಿದೆ. ಪಿವಿಸಿ ಪೈಪ್ ಗಳ ಬೆಲೆ 30%, ಏರ್ ಟಿಕೆಟ್ ದರದಲ್ಲಿ 15% ಹೆಚ್ಚಾಗಿದೆ. ಖಾಸಗಿ ಪೆಟ್ರೋಲ್ ಬಂಕ್ ಗಳಾದ ಎಸ್ಸಾರ್, ಶೆಲ್ ನಲ್ಲಿ ಪೆಟ್ರೋಲ್, ಡೀಸೆಲ್ ಬೆಲೆಗಳು 3 ರಿಂದ 20 ರೂ.ವರೆಗೆ ಹೆಚ್ಚಾಗಿದೆ. ಚುನಾವಣೆ ಬಳಿಕ ಎಲ್ ಪಿಜಿ ಸಿಲಿಂಡರ್, ಪೆಟ್ರೋಲ್, ಡೀಸೆಲ್ ಬೆಲೆ ಕೂಡ ಹೆಚ್ಚಾಗಲಿದೆ ಎಂದು ಮಾಹಿತಿ ನೀಡಿದರು.

ಬೆಲೆ ಏರಿಕೆಯಿಂದ ಬಚಾವ್ ಆಗಲು ಇರುವ ಮಾರ್ಗವೇ ಗ್ಯಾರಂಟಿ. ಪಂಚಗ್ಯಾರಂಟಿ ಯೋಜನೆಗಳಿಗಾಗಿ ಕಾಂಗ್ರೆಸ್ ಸರ್ಕಾರ ಪ್ರತಿ ವರ್ಷ 50 ಸಾವಿರ ಕೋಟಿ ರೂ. ಖರ್ಚು ಮಾಡುತ್ತಿದೆ. ಆದರೆ ಇದನ್ನು ಬಂದ್ ಮಾಡಲು ಬಿಜೆಪಿ ಶತಪ್ರಯತ್ನ ನಡೆಸುತ್ತಿದೆ. ಕಾಂಗ್ರೆಸ್ ಗೆ ಶಕ್ತಿ ತುಂಬುವ ಕೆಲಸ ಮತದಾರರ ಮೇಲಿದೆ. ಸಮರ್ಥ್ ಒಬ್ಬ ಸಮರ್ಥ ಅಭ್ಯರ್ಥಿ. ಯುವಕರಿಗೆ ಸ್ಫೂರ್ತಿದಾಯಕ. ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿ ಕಾಂಗ್ರೆಸ್ ಬಲ ಹೆಚ್ಚಿಸಿ ಎಂದು ಕರೆಕೊಟ್ಟರು.

ಸಂಸದೆ ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಪಂಚಗ್ಯಾರಂಟಿ ಯೋಜನೆಗಳಿಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ 538.81 ಕೋಟಿ ರೂ. ಖರ್ಚು ಮಾಡಿದೆ ಎಂದರು.

ಗೃಹಲಕ್ಷ್ಮಿ ಯೋಜನೆಯಡಿ ಕ್ಷೇತ್ರದ 58,684 ಮನೆಯ ಯಜಮಾನಿರಿಗೆ ಮಾಸಿಕ ಎರಡು ಸಾವಿರ ರೂಗಳಂತೆ 332 ಕೋಟಿ ರೂ. ಹಣ ನೀಡಲಾಗಿದೆ. ಶಕ್ತಿ ಯೋಜನೆಯಡಿ 2,47,50,558 ಬಾರಿ ಮಹಿಳೆಯರು ಉಚಿತವಾಗಿ ಬಸ್ ಪ್ರಯಾಣಿಸಿದ್ದು ಅದರ ಟಿಕೆಟ್ ಮೌಲ್ಯ 53.97 ಕೋಟಿ ರೂ. ಹಣವನ್ನು ಕಾಂಗ್ರೆಸ್ ಸರ್ಕಾರ ಭರಿಸಿದೆ. ಗೃಹಜ್ಯೋತಿ ಯೋಜನೆಯ 49,770 ಫಲಾನುಭವಿಗಳಿಗೆ ಉಚಿತ ವಿದ್ಯುತ್ ಸೌಲಭ್ಯ ನೀಡಿದ್ದು ಇದರ ಮೊತ್ತ 72.20 ಕೋಟಿ ರೂ. ಅನ್ನಭಾಗ್ಯ ಯೋಜನೆಯಡಿ 216.77 ಕೋಟಿ ರೂ. ಹಣ ನೀಡಲಾಗಿದೆ. ಯುವನಿಧಿ ಯೋಜನೆಯ 950 ಫಲಾನುಭವಿಗಳಿಗೆ 28.08 ಲಕ್ಷ ರೂ. ಹಣವನ್ನು ಕಾಂಗ್ರೆಸ್ ಸರ್ಕಾರ ನೀಡಿದೆ. ಎಂದು ಅಂಕಿಅಂಶಗಳ ಸಮೇತ ವಿವರಿಸಿದರು.

ಗ್ಯಾರಂಟಿ ಯೋಜನೆಗಳು ಮಹಿಳೆಯರ ಸಬಲೀಕರಣಕ್ಕೆ ನೆರವಾಗಿವೆ. ಆರ್ಥಿಕವಾಗಿ, ಸಾಮಾಜಿಕವಾಗಿ ಅವರ ಶಕ್ತಿ ವೃದ್ಧಿಸಿದೆ. ಪಂಚಗ್ಯಾರಂಟಿ ಯೋಜನೆಗಳು ಅದರಲ್ಲೂ ಗೃಹಲಕ್ಷ್ಮಿ ಯೋಜನೆ ಮಹಿಳೆಯರನ್ನು ಆರ್ಥಿಕವಾಗಿ ಶಕ್ತಿವಂತರನ್ನಾಗಿ ಮಾಡಿದೆ. ಮಲ್ಲಿಗೆನಹಳ್ಳಿಯಲ್ಲಿ ಗೃಹಲಕ್ಷ್ಮಿ ಹಣವನ್ನು ಕೂಡಿಟ್ಟು ಹನುಮಂತ ದೇವಸ್ಥಾನದ ನಿರ್ಮಾಣಕ್ಕೆ 12 ಲಕ್ಷ ರೂ. ಹಣವನ್ನು ದೇಣಿಗೆಯಾಗಿ ನೀಡಿದ್ದಾರೆ. ಒಂದಲ್ಲ ಒಂದು ರೀತಿಯಲ್ಲಿ ಗ್ಯಾರಂಟಿ ಯೋಜನೆಗಳು ಜನರಿಗೆ, ಸಮಾಜಕ್ಕೆ ನೆರವಾಗುತ್ತಿವೆ ಎಂದರು.

ಆರು ಬಾರಿ ಅಪ್ಪಾಜಿ ಶಾಮನೂರು ಶಿವಶಂಕರಪ್ಪ ಅವರನ್ನು ಗೆಲ್ಲಿಸಿದಂತೆ ಸಮರ್ಥ ಶಾಮನೂರು ಮಲ್ಲಿಕಾರ್ಜುನ ಅವರನ್ನು ಗೆಲ್ಲಿಸಬೇಕು. ಗ್ಯಾರಂಟಿ ಯೋಜನೆಗಳಿಗೆ, ಕಾಂಗ್ರೆಸ್ ಸರ್ಕಾರಕ್ಕೆ ಶಕ್ತಿ ತುಂಬಬೇಕು ಎಂದು ಮನವಿ ಮಾಡಿದರು.

ಸಂವಾದ ಕಾರ್ಯಕ್ರಮದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಹೆಚ್.ಎಂ.ರೇವಣ್ಣ, ಉಪಾಧ್ಯಕ್ಷರುಗಳಾದ ದಿನೇಶ್ ಗೂಳಿಗೌಡ, ಮೆಹರೋಜ್ ಖಾನ್, ಎಐಸಿಸಿ ಕಾರ್ಯದರ್ಶಿ ಅಭಿಷೇಕ್ ದತ್, ಗ್ಯಾರಂಟಿ ಸಮಿತಿಯ ಜಿಲ್ಲಾ, ತಾಲೂಕು ಅಧ್ಯಕ್ಷರು ಮತ್ತು ಸದಸ್ಯರು ಉಪಸ್ಥಿತರಿದ್ದರು.

# ಮನೆಮನೆ ಗಣತಿಗೆ ಸಾರ್ವಜನಿಕರ ಸಹಕಾರಕ್ಕೆ ಮನವಿ



ಬಂಗಾರಪೇಟೆ

ಭಾರತ ಸರ್ಕಾರದ 2027ರ ಜನಗಣತಿಯ ಅಂಗವಾಗಿ 'ಮನೆ ಪಟ್ಟಿ ಮತ್ತು ಮನೆ ಗಣತಿ' ಕಾರ್ಯಕ್ಕೆ ಬಂಗಾರಪೇಟೆಯಲ್ಲಿ ಶುಕ್ರವಾರ ಅಧಿಕೃತವಾಗಿ ಚಾಲನೆ ನೀಡಲಾಯಿತು. ಶಾಸಕರ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಅವರು ಚಾಲನೆ ನೀಡಿ, ಜನಗಣತಿಯ ಮಹತ್ವದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಸ್ವಯಂ ಘೋಷಣೆಗೆ ಆದ್ಯತೆ: ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಶಾಸಕರು, "ಏಪ್ರಿಲ್ 1 ರಿಂದ 15 ರವರೆಗೆ ಸಾರ್ವಜನಿಕರು ತಮ್ಮ ಮೊಬೈಲ್ ಮೂಲಕವೇ ಸ್ವಯಂ ಘೋಷಿತವಾಗಿ ಮಾಹಿತಿಯನ್ನು ದೃಢೀಕರಿಸಲು ಅವಕಾಶವಿದೆ. ಈ ಹಂತ ಮುಗಿದ 15 ದಿನಗಳ ನಂತರ ಗಣತಿ ಅಧಿಕಾರಿಗಳು ಮನೆಮನೆಗೆ ಭೇಟಿ ನೀಡಿ ಸರ್ವೆ ನಡೆಸಲಿದ್ದಾರೆ. ತಾಲ್ಲೂಕು ಆಡಳಿತವು ಈ ಕಾರ್ಯವನ್ನು ಸಮರ್ಪಕವಾಗಿ ಮತ್ತು ಸಮಯೋಚಿತವಾಗಿ ಪೂರ್ಣಗೊಳಿಸಲು ಎಲ್ಲಾ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡಿದೆ," ಎಂದು ತಿಳಿಸಿದರು.

ಅಭಿವೃದ್ಧಿ ಯೋಜನೆಗಳಿಗೆ ದಿಕ್ಸೂಚಿ: "ಗಣತಿದಾರರು ಮನೆಗೆ ಬಂದಾಗ ವಿಳಾಸ, ಜಾತಿ, ವೃತ್ತಿ ಸೇರಿದಂತೆ ಕೇಳಲಾಗುವ ಎಲ್ಲಾ ವಿವರಗಳನ್ನು ನಿಖರವಾಗಿ ನೀಡಬೇಕು. ಹೀಗೆ ದೊರೆಯುವ ನಿಖರ ಮಾಹಿತಿಯಿಂದ ಸರ್ಕಾರಕ್ಕೆ ಸಮುದಾಯವಾರು ಮತ್ತು ಪ್ರದೇಶವಾರು ವಾಸ್ತವ ಸ್ಥಿತಿ ತಿಳಿಯುತ್ತದೆ. ಇದು ಹಿಂದುಳಿದ ಪ್ರದೇಶಗಳನ್ನು ಗುರುತಿಸಲು ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಲು ಸಹಕಾರಿಯಾಗುತ್ತದೆ. ಸರ್ಕಾರದ ಸೌಲಭ್ಯಗಳು ನಿಜವಾದ ಅರ್ಹರಿಗೆ ತಲುಪಲು ಜನಗಣತಿ ಅತ್ಯಂತ ಅವಶ್ಯಕ," ಎಂದು ಶಾಸಕರು ಪ್ರತಿಪಾದಿಸಿದರು.

ಸಕ್ರಿಯ ಭಾಗವಹಿಸುವಿಕೆಗೆ ಕರೆ: ಜನಗಣತಿಯು ಕೇವಲ ಅಂಕಿ–ಅಂಶವಲ್ಲ, ಇದು ಉದ್ಯೋಗ, ವ್ಯಾಪಾರ ಹಾಗೂ ಇತರೆ ವೃತ್ತಿ ಕ್ಷೇತ್ರಗಳ ಭವಿಷ್ಯದ ಯೋಜನೆಗಳಿಗೂ ಅಡಿಪಾಯವಾಗಿದೆ. ಆದ್ದರಿಂದ ಸಾರ್ವಜನಿಕರು ಯಾವುದೇ ಹಿಂಜರಿಕೆಯಿಲ್ಲದೆ ಮಾಹಿತಿಯನ್ನು ಹಂಚಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಸುಜಾತಾ, ತಾಲ್ಲೂಕು ಪಂಚಾಯತ್ ಇಓ ರವಿಕುಮಾರ್, ನಗರಸಭೆ ಪೌರಾಯುಕ್ತ ಸತ್ಯನಾರಾಯಣ, ಪೊಲೀಸ್ ಇನ್ಸ್‌ಪೆಕ್ಟರ್ ರವಿಕುಮಾರ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ರವಿ, ಯುವರಾಜ್, ಪುರಸಭೆ ಸಿಬ್ಬಂದಿ ಸಂತೋಷ್ ಹಾಗೂ ಶಿಕ್ಷಣ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ಶಿಸ್ತು ಯಶಸ್ಸಿನ ಮೂಲಮಂತ್ರ: ಸತ್ಯಪ್ರಸಾದ್ ಅಭಿಮತ

ರಾಮನಗರ

ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಎನ್ನುವುದು ಯಶಸ್ಸಿನ ಮೂಲಮಂತ್ರವಾಗಿದ್ದು, ಸಮಯ ಮತ್ತು ನಿಯಮ ಪಾಲನೆ ಜತೆಗೆ ಉತ್ತಮ ನಡವಳಿಕೆಯನ್ನು ಒಳಗೊಂಡಿರುವ ಶಿಸ್ತಿನ ಜೀವನ ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಿ, ಉಜ್ವಲ ಭವಿಷ್ಯಕ್ಕೆ ಅಡಿಪಾಯ ಹಾಕುತ್ತದೆ ಎಂದು ನೋಬಲ್ ಹಾರ್ಟ್ಸ್ ಸಂಸ್ಥೆಯ ಮುಖ್ಯಸ್ಥ ಸತ್ಯಪ್ರಸಾದ್ ಹೇಳಿದರು.

ಬಿಡದಿ ಹೋಬಳಿ ತೊರೆದೊಡ್ಡಿ(ಅಂಗರಹಳ್ಳಿ) ಸರಕಾರಿ ಪ್ರೌಢಶಾಲೆಯಲ್ಲಿ ನಡೆದ ಪರಿಕರ ವಿತರಣೆ ಕಾರ್ಯಕ್ರಮದಲ್ಲಿ ಶಿಸ್ತಿನ ಬಗ್ಗೆ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಅಳವಡಿಸಿಕೊಳ್ಳುವ ಶಿಸ್ತು ಭವಿಷ್ಯದಲ್ಲಿ ಯಶಸ್ಸನ್ನು ನಿರ್ಧರಿಸುತ್ತದೆ ಹಾಗೂ ಸಮಯದ ಮಹತ್ವವನ್ನು ಕಲಿಸುತ್ತದೆ. ವಿದ್ಯಾರ್ಥಿಯಲ್ಲಿ ಶಿಸ್ತು ಸಕಾರಾತ್ಮಕ ವರ್ತನೆಯನ್ನು ಬೆಳೆಸುತ್ತದೆ. ಕೆಟ್ಟ ಅಭ್ಯಾಸಗಳಿಂದ ದೂರವಿರಲು ಮತ್ತು ಕಷ್ಟದ ಸಂದರ್ಭಗಳಲ್ಲಿ ಧೈರ್ಯದಿಂದಿರಲು ಕಲಿಸುತ್ತದೆ ಎಂದರು.



ಶಿಕ್ಷಕರು, ಪೋಷಕರು ಹಾಗೂ ಹಿರಿಯರನ್ನು ಗೌರವಿಸುವುದು ಕೂಡ ಶಿಸ್ತಿನ ಲಕ್ಷಣವೇ ಎಂದ ಅವರು ಶಿಸ್ತುಬದ್ಧ ವಿದ್ಯಾರ್ಥಿಯು ಆತ್ಮವಿಶ್ವಾಸವನ್ನು ಹೊಂದಿದ್ದು ಆತನು ಶೈಕ್ಷಣಿಕವಾಗಿ ಮಾತ್ರವಲ್ಲದೆ, ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲೂ ಸಾಧಕನಾಗಬಹುದು. ಆದ್ದರಿಂದ, ಪ್ರತಿಯೊಬ್ಬ ವಿದ್ಯಾರ್ಥಿಯು ಬಾಲ್ಯದಿಂದಲೇ ಶಿಸ್ತನ್ನು ಅಳವಡಿಸಿಕೊಂಡು, ಜವಾಬ್ದಾರಿಯುತ ನಾಗರಿಕರಾಗಿ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ತಿಳಿಸಿದರು.

ನಮ್ಮ ನೋಬಲ್ ಹಾರ್ಟ್ಸ್ ಸಂಸ್ಥೆಯು ಎಲ್ಲಿಯೂ ನೋಂದಾಯಿತವಾಗಿರದೆ ಜನಮನದಲ್ಲಿ ಸ್ಥಾಪಿತವಾಗಿದೆ. ಕಳೆದ ಎರಡು ದಶಕಗಳಿಂದ ಸಾಮಾಜಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ಆರ್ಥಿಕ ಮುಗ್ಗಟ್ಟು ಎದುರಿಸುತ್ತಿರುವ ಸೇವಾ ಸಂಸ್ಥೆಗಳಿಗೆ ಸುಮಾರು ಎರಡೂವರೆ ಕೋಟಿಗೂ ಮಿಗಿಲಾದ ನಿಧಿಯ ನೆರವು ನೀಡಿದೆ.

2008ರಲ್ಲಿ ಬೆಂಗಳೂರಿನ ಪ್ರೇರಣಾ ರಿಸೋರ್ಸ್ ಸೆಂಟರ್ ನಡೆಸುತ್ತಿರುವ 120 ಅನಾಥ ಹಾಗೂ ವಿಶೇಷಚೇತನ ಹೆಣ್ಣುಮಕ್ಕಳ ಊಟ ಮತ್ತು ವಸತಿ ಸೌಲಭ್ಯಕ್ಕಾಗಿ 21 ಲಕ್ಷರೂ ಸಹಾಯಧನ ನೀಡಿದೆ.

2010ರಲ್ಲಿ ಅಂತರಾಷ್ಟ್ರೀಯ ಪ್ಯಾರಾ ಒಲಂಪಿಕ್ ಕ್ರೀಡಾಪಟು ಪದ್ಮಶ್ರೀ ಡಾ.ಮಾಲತಿ ಹೊಳ್ಳರವರು ಪೋಲಿಯೋ ಪೀಡಿತ ಮಕ್ಕಳಿಗಾಗಿ ನಡೆಸುತ್ತಿರುವ ಮಾತೃ ಫೌಂಡೇಶನ್ ಸಂಸ್ಥೆಗೆ ಒಂದೂವರೆ ಕೋಟಿ ನೆರವು ನೀಡಿದೆ. 2014ರಲ್ಲಿ ಸುಭಾಷಿಣಿವಸಂತ್‌ರವರು ಹುತಾತ್ಮ ಸೈನಿಕರ ಮಕ್ಕಳಿಗಾಗಿ ನಡೆಸುತ್ತಿರುವ ವಸಂತರತ್ನ ಫೌಂಡೇಶನ್ ಫಾರ್ ಆರ್ಟ್ಸ್ ಸಂಸ್ಥೆಗೆ 21 ಲಕ್ಷರೂ. 2016ರಲ್ಲಿ ಶಂಕರ ಕ್ಯಾನ್ಸರ್ ಆಸ್ಪತ್ರೆ ಮತ್ತು ಬೆಂಗಳೂರು ಕಿಡ್ನಿ ಫೌಂಡೇಶನ್ ಸಂಸ್ಥೆಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಬಡರೋಗಿಗಳಿಗೆ 28 ಲಕ್ಷರೂ ನಿಧಿ ಪ್ರಧಾನ ಮಾಡಲಾಗಿದೆ ಎಂದು ಸಂಸ್ಥೆಯ ಸಾಮಾಜಿಕ ಕಾರ್ಯಕ್ರಮಗಳ ಬಗ್ಗೆ ಬೆಳಕು ಚಲ್ಲಿದರು.

ಇದೇ ವೇಳೆ ಸರಕಾರಿ ಪ್ರೌಢಶಾಲೆಯ ಕೊಠಡಿಗಳಿಗೆ 5 ಸೆಟ್ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಸಾಹಿತಿಗಳ ಫೋಟೋಗಳು, ಶಾಲೆಯ ಖೋಖೋ ಕ್ರೀಡಾವಿದ್ಯಾರ್ಥಿಗಳಿಗೆ ಕ್ರೀಡಾ ಸಮವಸ್ತ್ರ ಹಾಗೂ ಗ್ರಂಥಾಲಯಕ್ಕೆ ಪುಸ್ತಕಗಳ ಕೊಡುಗೆ ನೀಡಿದರು.

ನೋಬಲ್ ಹಾರ್ಟ್ಸ್ ಸಂಸ್ಥೆಯ ಸದಸ್ಯರಾದ ಗೋಪಾಲ್, ಶಶಿಕಲಾ, ರಾ.ಶಿ.ವೆಂಕಟೇಶ್, ಶೈಲಜಾ, ರಾಘವೇಂದ್ರ, ಯತೀಶ್, ಸಾವಿತ್ರಮ್ಮ, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಕೃಷ್ಣಮೂರ್ತಿ, ಶಾಲೆಯ ಪೋಷಕರಾದ ಇಟ್ಟಮಡು ಸೋಮಣ್ಣ (ಚನ್ನಪ್ಪ), ಮುಖ್ಯಶಿಕ್ಷಕಿ ಜಯಶ್ರೀ, ಸಹಶಿಕ್ಷಕರಾದ ಅನಿತಾ, ಜ್ಯೋತಿ, ರಮ್ಯ, ಮರಿಸ್ವಾಮಿ, ವಿದ್ಯಾಶ್ರೀ, ಗೌರಮ್ಮ ಮುಂತಾದವರು ಇದ್ದರು. ಶಾಲಾ ಅಭಿವೃದ್ಧಿ ಸಮಿತಿ ಹಾಗೂ ಶಿಕ್ಷಕ ಸಿಬ್ಬಂದಿ ಗಣ್ಯರನ್ನು ಅಭಿನಂದಿಸಿದರು.

# '2,809 ರೈತರ ಸಾವು; ಅಭಿವೃದ್ಧಿ ಮರೆತು ಸ್ವಾರ್ಥಕ್ಕೆ ಅಧಿಕಾರ ಬಳಕೆ'

ಬಾಗಲಕೋಟೆ

ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿರುವ ಸಿದ್ದರಾಮಯ್ಯನವರು ತಮ್ಮ ಅಧಿಕಾರವನ್ನು ಸ್ವಂತ ಹಾಗೂ ಸ್ವಾರ್ಥಕ್ಕೋಸ್ಕರ ಬಳಸುತ್ತಿದ್ದಾರೆ. ರಾಜ್ಯದ ಜನತೆಗೆ ವಂಚನೆ ಮಾಡುವ ಮೂಲಕ ಇಡೀ ಕರ್ನಾಟಕವನ್ನು ಕತ್ತಲೆಗೆ ತಳ್ಳುವ ಕೆಲಸ ಮಾಡುತ್ತಿದ್ದಾರೆ ಎಂದು ಕೇಂದ್ರ ಸಚಿವ ವಿ. ಸೋಮಣ್ಣ ಅವರು ತೀವ್ರವಾಗಿ ಆರೋಪಿಸಿದ್ದಾರೆ.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ವೈಫಲ್ಯಗಳು, ಭ್ರಷ್ಟಾಚಾರ ಮತ್ತು ರೈತರ ಸರಣಿ ಸಾವುಗಳ ಕುರಿತು ಅಂಕಿ–ಅಂಶಗಳ ಸಹಿತ ಸರ್ಕಾರದ ವಿರುದ್ಧ ಕಿಡಿಕಾರಿದರು.

"ಬೆಂಗಳೂರು ನಗರದ ಅಭಿವೃದ್ಧಿಯಲ್ಲಿ ನಮ್ಮ ಅವಧಿಯ ಪಾಲುದಾರಿಕೆ ದೊಡ್ಡದಿದೆ. ಆದರೆ ಇಂದು ಯಾವುದೇ ಶಾಸಕರು ತಮ್ಮ ಕ್ಷೇತ್ರಕ್ಕೆ ಹೋಗಿ 'ನಾನು ಒಳ್ಳೆಯ ಕೆಲಸ ಮಾಡಿದ್ದೇನೆ' ಎಂದು ಹೇಳುವ ನೈತಿಕತೆಯನ್ನು ಹೊಂದಿಲ್ಲ. ಕೇವಲ ವಿರೋಧ ಪಕ್ಷದವರಷ್ಟೇ ಅಲ್ಲ, ಆಡಳಿತ ಪಕ್ಷದ ಶಾಸಕರೂ ಈ ವಿಶ್ವಾಸ ಕಳೆದುಕೊಂಡಿದ್ದಾರೆ. ಇಡೀ ಸಚಿವ ಸಂಪುಟ ಭ್ರಷ್ಟಾಚಾರದಲ್ಲಿ ಮುಳುಗಿಹೋಗಿದೆ," ಎಂದು ಸೋಮಣ್ಣ ದೂರಿದರು. ರಾಜ್ಯದ ಕೃಷಿ ಮತ್ತು ಉದ್ಯೋಗದ ಸ್ಥಿತಿಗತಿ ಬಗ್ಗೆ ಕಳವಳ ವ್ಯಕ್ತಪಡಿಸಿದ ಸಚಿವರು ಈ ಕೆಳಗಿನ ಪ್ರಮುಖ ಅಂಶಗಳನ್ನು ಪ್ರಸ್ತಾಪಿಸಿದರು.



ರೈತರ ಆತ್ಮಹತ್ಯೆ: ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಸುಮಾರು 2,809 ರೈತರು ಸಾವನ್ನಪ್ಪಿದ್ದಾರೆ. ವಿವಿಧ ಬೆಳೆಗಳಿಗೆ ಬೆಂಬಲ ಬೆಲೆ ಘೋಷಿಸಿದರೂ ಸರ್ಕಾರ ಸ್ಪಂದಿಸುತ್ತಿಲ್ಲ.

ಉದ್ಯೋಗಾವಕಾಶ: ರಾಜ್ಯದಲ್ಲಿ 2.5 ಲಕ್ಷಕ್ಕೂ ಹೆಚ್ಚು ಸರ್ಕಾರಿ ಹುದ್ದೆಗಳು ಖಾಲಿ ಇವೆ.

ನೆರೆ ಸಂತ್ರಸ್ತರ ನಿರ್ಲಕ್ಷ್ಯ: ಉತ್ತರ ಕರ್ನಾಟಕದ ನೆರೆ ಸಂತ್ರಸ್ತರಿಗೆ ಸರ್ಕಾರ ಈವರೆಗೂ ಒಂದು ರೂಪಾಯಿ ಪರಿಹಾರವನ್ನೂ ಬಿಡುಗಡೆ ಮಾಡಿಲ್ಲ.

ಕೇಂದ್ರದ ಅನುದಾನ ಬಳಕೆಯಲ್ಲಿ ವಿಫಲ: "ಜಲಜೀವನ್ ಮಿಷನ್ ಅಡಿಯಲ್ಲಿ ಕೇಂದ್ರ ಸರ್ಕಾರ 28 ಸಾವಿರ ಕೋಟಿ ರೂಪಾಯಿ ಠೇವಣಿ ಇಟ್ಟಿದೆ. ಆದರೆ ರಾಜ್ಯ ಸರ್ಕಾರ ಕೇವಲ 11 ಸಾವಿರ ಕೋಟಿ ರೂಪಾಯಿ ಪಡೆಯುವಲ್ಲಿ ಮಾತ್ರ ಯಶಸ್ವಿಯಾಗಿದೆ. ಕೇಂದ್ರದ ಯೋಜನೆಗಳನ್ನು ಜಾರಿಗೊಳಿಸುವ ಬದಲು ಕೇವಲ ಟೀಕೆ ಮಾಡುವುದರಲ್ಲೇ ಇವರು ನಿಸ್ಸೀಮರು," ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಸಮಾಜಗಳ ನಡುವೆ ಒಡಕು: ಸಿದ್ದರಾಮಯ್ಯ ಸರ್ಕಾರವು ಒಂದು ಸಮಾಜವನ್ನು ಇನ್ನೊಂದು ಸಮಾಜದ ವಿರುದ್ಧ ಎತ್ತಿಕಟ್ಟುವ ಮೂಲಕ ಜನರ ದಿಕ್ಕು ತಪ್ಪಿಸುತ್ತಿದೆ. ವಿಕಸಿತ ಭಾರತದ ಪರಿಕಲ್ಪನೆಯೊಂದಿಗೆ ಪ್ರಧಾನಿಯವರು ದೇಶದ ಅಭಿವೃದ್ಧಿಗೆ 97 ಸಾವಿರ ಕೋಟಿ ಮೀಸಲಿಟ್ಟಿದ್ದರೆ, ಇಲ್ಲಿನ ಸರ್ಕಾರ ಬೋಗಸ್ ಕಾರ್ಡ್‌ಗಳ ಮೂಲಕ ಹಗರಣ ಮಾಡುತ್ತಿದೆ ಎಂದು ವಿ. ಸೋಮಣ್ಣ ಆರೋಪಿಸಿದರು.

# ಜಾರ್ಜ್ ಪತ್ನಿ ಸುಜಾ ಜಾರ್ಜ್‌ರಿಂದ ಯೇಸು ಕ್ರಿಸ್ತರ ಕುರಿತು ಗೀತೆ ರಚನೆ

ಬೆಂಗಳೂರು

ಲೋಕದ ಪಾಪಗಳ ವಿಮೋಚನೆಗಾಗಿ ಯೇಸು ಕ್ರಿಸ್ತರು ಶಿಲುಬೆಯ ಮೇಲೆ ಪ್ರಾಣತ್ಯಾಗ ಮಾಡಿದ 'ಗುಡ್ ಫ್ರೈಡೆ'ಯ ಪವಿತ್ರ ಸಂದರ್ಭದಲ್ಲಿ, ರಾಜ್ಯ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ಪತ್ನಿ ಸುಜಾ ಜಾರ್ಜ್ ಅವರು ಯೇಸುವಿನ ತ್ಯಾಗವನ್ನು ಕೊಂಡಾಡುವ ಭಾವಪೂರ್ಣ ಗೀತೆಯೊಂದನ್ನು ರಚಿಸಿದ್ದಾರೆ.

"ತಂದೆಯೇ ಇವರನ್ನು ಕ್ಷಮಿಸು, ತಾವು ಏನು ಮಾಡುತ್ತಿದ್ದೇವೆ ಎಂಬುದು ಇವರಿಗೆ ತಿಳಿಯದು" ಎಂಬ ಯೇಸು ಕ್ರಿಸ್ತರ ಕರುಣಾಮಯಿ ನುಡಿಗಳನ್ನು ಆಧರಿಸಿ ಈ ಹಾಡನ್ನು ಸಿದ್ಧಪಡಿಸಲಾಗಿದೆ. ಶಿಲುಬೆಯ ಮೇಲಿನ ಯಾತನೆಯ ನಡುವೆಯೂ ಮಾನವಕುಲದ ಉದ್ಧಾರಕ್ಕಾಗಿ ಕ್ರಿಸ್ತರು ಸಲ್ಲಿಸಿದ ಪ್ರಾರ್ಥನೆ ಮತ್ತು ಅವರ ಬಲಿದಾನದ ಮಹತ್ವವನ್ನು ಸುಜಾ ಜಾರ್ಜ್ ಅವರು ತಮ್ಮ ಸಾಹಿತ್ಯದಲ್ಲಿ ಮನ ಮಿಡಿಯುವಂತೆ ವಿವರಿಸಿದ್ದಾರೆ.

ಈ ವಿಶೇಷ ಗೀತೆಗೆ ದಕ್ಷಿಣ ಭಾರತದ ಖ್ಯಾತ ಸಂಗೀತ ನಿರ್ದೇಶಕ ಒಸೆಫಚನ್ ಅವರು ಸಂಗೀತ ಸಂಯೋಜನೆ ಮಾಡಿದ್ದು, ಗಾಯಕ ಲಿಯೋ ರೈಸನ್ ಅವರು ತಮ್ಮ ಕಂಠಸಿರಿಯ ಮೂಲಕ ಹಾಡಿಗೆ ಜೀವ ತುಂಬಿದ್ದಾರೆ.

ರೂಪಾಂತರ: ಮೆಗ್ಗೀ ಆಡಿಯೋಸ್‌ನ ಲೂಯಿಸ್ ಮೆನೆಸೆಜ್ ಮತ್ತು ಲಿಜೊ ಜೋಸ್.

ರೆಕಾರ್ಡಿಂಗ್: ಬೆಂಗಳೂರಿನ ಮೆಗ್ಗೀ ಆಡಿಯೋಸ್ ಸಂಸ್ಥೆ.

ಮಿಕ್ಸಿಂಗ್ ಮತ್ತು ಮಾಸ್ಟರಿಂಗ್: ಸಾಯಿ ಪ್ರಕಾಶ್.

ಕ್ರಿ.ಶ. 33ರಲ್ಲಿ ಯೇಸು ಕ್ರಿಸ್ತರು ಶಿಲುಬೆಗೇರಿದ ದಿನವನ್ನು ಸ್ಮರಿಸುವ ಗುಡ್ ಫ್ರೈಡೆಯನ್ನು ವಿಶ್ವದಾದ್ಯಂತ ಶೋಕದಿನವಾಗಿ ಆಚರಿಸಲಾಗುತ್ತದೆ. ಉಪವಾಸ, ವಿಶೇಷ ಪ್ರಾರ್ಥನೆ ಮತ್ತು ಚರ್ಚ್‌ಗಳಲ್ಲಿ ನಡೆಯುವ ಆರಾಧನೆಗಳ ಮೂಲಕ ಈ ದಿನವನ್ನು ಭಕ್ತಿಪೂರ್ವಕವಾಗಿ ಆಚರಿಸಲಾಗುತ್ತಿದ್ದು, ಈ ಸಂದರ್ಭದಲ್ಲಿ ಸುಜಾ ಜಾರ್ಜ್ ಅವರ ಈ ಗೀತೆ ಭಕ್ತರ ಗಮನ ಸೆಳೆದಿದೆ.

# ಶ್ಯಾಗತ್ತೂರಿನಲ್ಲಿ ಭಕ್ತಿ ಭಾವದ ಹಸಿ ಕರಗ ಮಹೋತ್ಸವ: ಗ್ರಾಮ ದೇವತೆಗಳಿಗೆ ತಂಬಿಟ್ಟು ದೀಪೋತ್ಸವ

ಕೋಲಾರ

ತಾಲ್ಲೂಕಿನ ಶ್ಯಾಗತ್ತೂರು ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದ್ದ ಹಸಿ ಕರಗ ಮಹೋತ್ಸವವು ಶ್ಯಾಗತ್ತೂರು ಸೇರಿದಂತೆ ಸುತ್ತಮುತ್ತಲ ಗ್ರಾಮಗಳ ಭಕ್ತಾದಿಗಳ ಸಮ್ಮುಖದಲ್ಲಿ ಅತ್ಯಂತ ವೈಭವದಿಂದ ನೆರವೇರಿತು. ಶ್ಯಾಗತ್ತೂರು, ಚಿಂತಮಾಕಲಹಳ್ಳಿ, ದಾದಿರೆಡ್ಡಿಹಳ್ಳಿ, ಮರಳುಮೆಡು ಹಾಗೂ ಮಂಜಲನಗರದ ಗ್ರಾಮಸ್ಥರು ಒಗ್ಗೂಡಿ ಈ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದರು.

ಗ್ರಾಮದ ಪ್ರಮುಖ ದೇವಸ್ಥಾನಗಳಾದ ಚೌಡೇಶ್ವರಿ ದೇವಿ, ಶ್ರೀರಾಮ ದೇವರ ಗುಡಿ, ಯಲ್ಲಮ್ಮದೇವಿ, ಗಂಗಮ್ಮದೇವಿ ಹಾಗೂ ದ್ರೌಪತಮ್ಮ ದೇವಿಯರಿಗೆ ವಿಶೇಷವಾಗಿ ದೀಪಾಲಂಕಾರ ಮಾಡಲಾಗಿತ್ತು. ಮಹಿಳೆಯರು ಮತ್ತು ಭಕ್ತಾದಿಗಳು ತಂಬಿಟ್ಟು ದೀಪಗಳನ್ನು ಹೊತ್ತು ಬರುವ ಮೂಲಕ ದೀಪೋತ್ಸವ ಕಾರ್ಯಕ್ರಮಕ್ಕೆ ಮೆರಗು ನೀಡಿದರು. ಗ್ರಾಮದ ರಥ ಬೀದಿಗಳಲ್ಲಿ ಹಸಿ ಕರಗ ಸಂಚರಿಸಿದ ವೇಳೆ ಹಾದಿಯುದ್ದಕ್ಕೂ ಭಕ್ತರು ಪೂಜೆ ಸಲ್ಲಿಸಿ ಧನ್ಯತೆ ಮೆರೆದರು. ಈ ಧಾರ್ಮಿಕ ಕಾರ್ಯಕ್ರಮವು ಶ್ಯಾಗತ್ತೂರು ಸೇರಿದಂತೆ ಐದು ಗ್ರಾಮಗಳ ವಹಿನಿಕುಲಸ್ಥರ ಮುಖಂಡತ್ವದಲ್ಲಿ ಜರುಗಿತು.

ಕಾರ್ಯಕ್ರಮದ ಉಸ್ತುವಾರಿಯನ್ನು ಶ್ಯಾಗತ್ತೂರು ಗ್ರಾಮದ ಗೌಡರಾದ ಎಸ್.ಟಿ. ಶ್ರೀನಿವಾಸಗೌಡ, ಎಂ.ಎಸ್. ನಾಗರಾಜ, ಎಸ್.ಎಂ. ಮುನಿವೆಂಕಟಸ್ವಾಮಿ ಹಾಗೂ ಎಸ್.ವಿ. ಸುಧಾಕರ ವಹಿಸಿದ್ದರು. ಯಜಮಾನ ಚಿಕ್ಕವೆಂಕಟ ರಾಮಪ್ಪ, ಗೌಡ ಈರಪ್ಪ, ಎಸ್.ಎಂ. ನಾಗರಾಜ, ಈ. ಮುನಿಸ್ವಾಮಿ, ಗಂಗಾಧರ, ಶ್ರೀನಿವಾಸ, ಯಲ್ಲಪ್ಪ, ಕೃಷ್ಣಪ್ಪ, ನಾರಾಯಣಪ್ಪ, ಸಿದ್ದಪ್ಪ, ಮುನಿಯಪ್ಪ ಮತ್ತು ವೆಂಕಟಪ್ಪ ಸೇರಿದಂತೆ ಹಲವಾರು ಗಣ್ಯರು ಹಾಗೂ ಭಕ್ತಾದಿಗಳು ಭಾಗವಹಿಸಿದ್ದರು.

# ಸ್ವಯಂ ಗಣತಿಯಲ್ಲಿ ಭಾಗವಹಿಸಿ ಅಭಿವೃದ್ಧಿಗೆ ಕೈಜೋಡಿಸಿ: ಶುಭ ಕಲ್ಯಾಣ್

ತುಮಕೂರು

ಇದೇ 1ರಿಂದ ಆರಂಭವಾಗಿರುವ ಸ್ವಯಂ ಗಣತಿಯಲ್ಲಿ ಸಾರ್ವಜನಿಕರು ಭಾಗವಹಿಸುವ ಮೂಲಕ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಶುಭಕಲ್ಯಾಣ್ ಕರೆ ನೀಡಿದ್ದಾರೆ.

ನಗರದ ವಿವಿಧ ಬಡಾವಣೆಗಳಿಗೆ ಗುರುವಾರ ಅಧಿಕಾರಿಗಳೊಂದಿಗೆ ಭೇಟಿ ನೀಡಿದ ಅವರು ಮೊಬೈಲ್ ಮೂಲಕ ನಾಗರಿಕರು ಸ್ವಯಂ ಗಣತಿ ಮಾಡುವುದು ಹೇಗೆ ಎಂಬುದನ್ನು ಖುದ್ದು ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರತಿ ಹತ್ತು ವರ್ಷಗಳಿಗೊಮ್ಮೆ ಭಾರತ ಸರ್ಕಾರ ಜನಗಣತಿ ಮಾಡುತ್ತದೆ. ಅಂತೆಯೇ ಇದೀಗ 2027ರ ಜನಗಣತಿ ಏಪ್ರಿಲ್ 1ರಿಂದ ಆರಂಭವಾಗಿದ್ದು ಏಪ್ರಿಲ್ 15ರವರೆಗೆ ಸ್ವಯಂ ಗಣತಿ ನಂತರ ಗಣತಿದಾರರು ಮನೆ ಮನೆಗೆ ಭೇಟಿ ನೀಡಿ ಗಣತಿ ಕಾರ್ಯ ಮಾಡಲಿದ್ದಾರೆ ಎಂದರು.

ದೇಶದ ಅಭಿವೃದ್ಧಿ ದೃಷ್ಟಿಯಿಂದ ಗಣತಿ ಕಾರ್ಯ ಪ್ರಮುಖ ಪಾತ್ರವಿದೆ ಎಂದ ಅವರು ದೇಶದ ಜನಸಂಖ್ಯೆ ಮಾಹಿತಿ ಪಡೆದು ಅದಕ್ಕನುಗುಣವಾಗಿ ಜನರ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿಗಳಿಗನುಸಾರ ನೀತಿಗಳನ್ನು ರೂಪಿಸಲು ಗಣತಿ ಅಂಕಿ ಅಂಶಗಳು ಮುಖ್ಯವಾಗಿದೆ. ಈ ಹಿನ್ನೆಲೆಯಲ್ಲಿ ದೇಶದ ಎಲ್ಲ ಜನರು ಜನಗಣತಿಯಲ್ಲಿ ಪಾಲ್ಗೊಳಬೇಕಿದೆ ಎಂದರು.



ಪ್ರಸ್ತುತ ಏಪ್ರಿಲ್ 1ರಿಂದ 15ರವರೆಗೆ ಸ್ವಯಂ ಗಣತಿ ಆರಂಭವಾಗಿದ್ದು ಸಾರ್ವಜನಿಕರು ತಮ್ಮ ಮೊಬೈಲ್ ಮೂಲಕ ವಿವರಗಳನ್ನು ದಾಖಲಿಸಬೇಕಿದೆ. ಈ ದಾಖಲೆಗಳು ಅತ್ಯಂತ ಗೌಪ್ಯವಾಗಿರಿಸಲಾಗುವುದು ಮತ್ತು ಇದು ಸರ್ಕಾರದ ಯೋಜನಗಳ ರೂಪಿಸುವ ಉದ್ದೇಶಕ್ಕೆ ಮಾತ್ರ ಬಳಕೆ ಆಗಲಿದೆ ಎಂದರು.

ತಮ್ಮ ಮೊಬೂಲ್ ನಲ್ಲಿ https://Se.census.gov.in ಈ ಲಿಂಕನ್ನು ತೆರೆದು ಅಲ್ಲಿ ತಮ್ಮ ಕುಟುಂಬ ಮುಖ್ಯಸ್ಥರು ವಿವರಗಳನ್ನು ದಾಖಲಿಸಬೇಕಿದೆ. ಕೇವಲ 33 ಪ್ರಶ್ನೆಗಳಿಗೆ 3 ನಿಮಿಷದಲ್ಲಿ ಉತ್ತರಿಸಿ ಗಣತಿ ಕಾರ್ಯವನ್ನು ಸುಲಭವಾಗಿ ಯಶಸ್ವಿಯಾಗಿ ಪೂರ್ಣಗೊಳಿಸಬಹುದು ಎಂದರು. ಪ್ರಕ್ರಿಯೆ ಪೂರ್ಣಗೊಳಿಸಿದ ನಂತರ ಒಂದು ಐಡಿ ನಂಬರ್ ಬರುತ್ತದೆ ಅದನ್ನು ಸ್ಕ್ರೀನ್ ಷಾಟ್ ತೆಗೆದಿಟ್ಟುಕೊಂಡು ಏಪ್ರಿಲ್16ರಿಂದ ಗಣತಿದಾರರು ಮನೆ ಮನೆಗೆ ಗಣತಿಗಾಗಿ ಆಗಮಿಸಿದಾಗ ಈ ಐಡಿ ನಂಬರನ್ನು ತೋರಿಸಿದಲ್ಲಿ ಅದನ್ನು ಒಮ್ಮೆ ಪರಿಶೀಲಿಸಿ ಆಗಿದೆ ಎಂದು ನಮೂದಿಸಿಕೊಳ್ಳುತ್ತಾರೆ. ಈಗ ಮಾಡಿಲ್ಲದವರು ಗಣತಿದಾರರಿಗೆ ಮಾಹಿತಿ ನೀಡಬೇಕಾಗುತ್ತದೆ ಎಂದು ಅವರು ತಿಳಿಸಿದರು. 1872ರಲ್ಲಿ ದೇಶದಲ್ಲಿ ಮೊದಲ ಜನಗಣತಿ ಮಾಡಲಾಗಿದ್ದು ಆ ನಂತರ ಪ್ರತಿ ಹತ್ತು ವರ್ಷಗಳಿಗೊಮ್ಮೆ ಮಾಡಲಾಗುತ್ತದೆ. ಅಲ್ಲದೆ 1948ರ ಗಣತಿ ಕಾಯ್ದೆಯಂತೆ ಈ ಪ್ರಕ್ರಿಯೆ ನಡೆಯಲಿದ್ದು ಸಾರ್ವಜನಿಕರು ಸಹಕರಿಸಬೇಕು ಹಾಗೂ ಗಣತಿ ಕಾರ್ಯದಲ್ಲಿ ಪಾಲ್ಗೊಳ್ಳಬೇಕು ಎಂದರು. ತುಮಕೂರು ಮಹಾನಗರ ಪಾಲಿಕೆ ಆಯುಕ್ತೆ ಶುಭ ಬಿ. ಮಾತನಾಡಿ, ಏಪ್ರಿಲ್ 1ರಿಂದ ತಮ್ಮ ಸಿಬ್ಬಂದಿ ಗಣತಿ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಏಪ್ರಿಲ್ 16ರಿಂದ ಗಣತಿದಾರರು ಮನೆ ಮನೆಗೆ ಭೇಟಿ ನೀಡಲಿದ್ದಾರೆ. ಐಡಿ ಕಾರ್ಡಿನೊಂದಿ ಅವರು ಬರಲಿದ್ದಾರೆ ಅದನ್ನು ಪರಿಶೀಲಿಸಿ ಸಾರ್ವಜನಿಕರು ಗಣತಿಗೆ ಮಾಹಿತಿ ನೀಡಬೇಕು ಎಂದರು. ಅಪರ ಜಿಲ್ಲಾಧಿಕಾರಿ ಡಾ.ಎನ್. ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

# ವಾಹನಗಳಿಗೆ ಕಡ್ಡಾಯವಾಗಿ ಹೆಚ್ ಎಸ್ ಆರ್ ಪಿ ಅಳವಡಿಸಿ – ಅಪರ ಸಾರಿಗೆ ಆಯುಕ್ತರು

ಬೆಂಗಳೂರು

ಕರ್ನಾಟಕ ಉಚ್ಚ ನ್ಯಾಯಾಲಯವು ನೀಡಿದ ಆದೇಶದಂತೆ ವಾಹನಗಳಿಗೆ ಹೆಚ್ ಎಸ್ ಆರ್ ಪಿ ಅಳವಡಿಕೆಯ ಬಗ್ಗೆ, ಪ್ರವರ್ತನ ನಡೆಸಲು ಸಾಧ್ಯ ವಾಗಿಲ್ಲ. ಆದರೆ, ವಾಹನಗಳಿಗೆ ಹೆಚ್ ಎಸ್ ಆರ್ ಪಿ ಅಳವಡಿಕೆಯನ್ನು ಕಡ್ಡಾಯಗೊಳಿಸಿ ಆದೇಶಿಸಿರುವ ಅಧಿಸೂಚನೆಗೆ ಯಾವುದೇ ತಡೆಯಾಜ್ಞೆ ಇರುವುದಿಲ್ಲ. ಇದರಿಂದಾಗಿ ಸಾರ್ವಜನಿಕರು ತಮ್ಮ ವಾಹನಗಳಿಗೆ ಹೆಚ್ ಎಸ್ ಆರ್ ಪಿ ಅಳವಡಿಸಿಕೊಳ್ಳಬೇಕೆಂದು ಬೆಂಗಳೂರು ದಕ್ಷಿಣ ಪ್ರವರ್ತನ ಅಪರ ಸಾರಿಗೆ ಆಯುಕ್ತರು ತಿಳಿಸಿದ್ದಾರೆ.

ಕೆಲವು ಟಿ.ವಿ. ಮತ್ತು ಇತರ ಮಾಧ್ಯಮಗಳಲ್ಲಿ ಹಳಯ ವಾಹನಗಳಿಗೆ ಎಚ್ ಎಸ್ ಆರ್ ಪಿ ಅಳವಡಿಕೆ ಕಡ್ಡಾಯವಲ್ಲ ಎಂಬ ಸುದ್ದಿಯನ್ನು ಪ್ರಸಾರ ಮಾಡುತ್ತಿರುವುದು ಸತ್ಯಕ್ಕ ದೂರವಾಗಿರುತ್ತದೆ ಎಂದ ಅವರು, ರಾಜ್ಯದಲ್ಲಿ 2019ರ ಏಪ್ರಿಲ್ 1ಕ್ಕಿಂತ ಮುಂಚಿತವಾಗಿ ನೋಂದಾಯಿಸಲ್ಪಟ್ಟ ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕಗಳನ್ನು ಅಳವಡಿಸುವ ಕುರಿತು ಸಾರಿಗೆ ಇಲಾಖೆಯ ಸ್ಪಷ್ಟಿಕರಣ ನೀಡಿದೆ. ಇತ್ತೀಚೆಗೆ ಕೆಲವು ಟಿ.ವಿ. ಮತ್ತು ಇತರೆ ಮಾಧ್ಯಮಗಳಲ್ಲಿ ಹಳೆಯ ವಾಹನಗಳಿಗೆ ಹೆಚ್ ಎಸ್ ಆರ್ ಪಿ ಅಳವಡಿಕೆ ಕಡ್ಡಾಯವಲ್ಲ ಎಂಬ ಸುದ್ದಿಯನ್ನು ಪ್ರಸಾರ ಮಾಡುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆ. ಕೇಂದ್ರ ಮೋಟಾರು ವಾಹನಗಳ ನಿಯಮಗಳು 1989ರ ನಿಯಮ 50ರಡಿ ಕೇಂದ್ರ ಸರ್ಕಾರವು 2018ರ ಡಿಸೆಂಬರ್ 4 ರಂದು ಅಧಿಸೂಚನೆ ಹೊರಡಿಸಿ, 1ನೇ ಏಪ್ರಿಲ್ 2019ಕ್ಕಿಂತ ಮುಂಚಿತವಾಗಿ ನೋಂದಣಿಯಾದ ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕಗಳನ್ನು ಅಳವಡಿಸಲು ಕಡ್ಡಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ಸರ್ಕಾರವು 2023ರ ಆಗಸ್ಟ್ 17 ರಂದು ಅಧಿಸೂಚನೆ ಹೊರಡಿಸಿ, 1ನೇ ಎಪ್ರಿಲ್ 2019ಕ್ಕಿಂತ ಮುಂಚಿತವಾಗಿ ನೋಂದಣಿಯಾದ ಎಲ್ಲಾ ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕಗಳ ಅಳವಡಿಕೆಯನ್ನು ಕಡ್ಡಾಯಗೊಳಿಸಿದೆ.

# ಇಂದಿನಿಂದ ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ಬ್ರಹ್ಮೋತ್ಸವ ಸಂಭ್ರಮ



ಕೆಜಿಎಫ್

ನಗರದ ಸ್ವಾಮಿನಾಥಪುರಂ ಮುಖ್ಯರಸ್ತೆಯ ಕೋರಮಂಡೆಲ್ ಓಟ್ ಲೈನ್ ಪ್ರದೇಶದಲ್ಲಿರುವ ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ಹಾಗೂ ಶ್ರೀ ತಿರುವೆಂಗಡ ಮುಡಯನ್ ದೇವಸ್ಥಾನಗಳಲ್ಲಿ ದ್ವಿತೀಯ ವಾರ್ಷಿಕ ಬ್ರಹ್ಮೋತ್ಸವವು ಇದೇ 4 ರಿಂದ 6 ರವರೆಗೆ ಅತ್ಯಂತ ಭಕ್ತಿ ಮತ್ತು ಸಂಭ್ರಮದಿಂದ ಜರುಗಲಿದೆ.

ಬ್ರಹ್ಮೋತ್ಸವದ ಮುನ್ನಾದಿನವಾದ ಶುಕ್ರವಾರ ಸ್ವಾತಿ ನಕ್ಷತ್ರದ ಪ್ರಯುಕ್ತ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಾಗೂ ಧಾರ್ಮಿಕ ವಿಧಿವಿಧಾನಗಳನ್ನು ಹಮ್ಮಿಕೊಳ್ಳುವ ಮೂಲಕ ಉತ್ಸವಕ್ಕೆ ನಾಂದಿ ಹಾಡಲಾಯಿತು.

ಬ್ರಹ್ಮೋತ್ಸವದ ಮೂರೂ ದಿನಗಳ ಕಾಲ ದೇವಸ್ಥಾನಕ್ಕೆ ಬರುವ ಭಕಾಧಿಗಳಿಗೆ ಬೆಳಿಗ್ಗೆ ಉಪಹಾರ, ಮಧ್ಯಾಹ್ನ ಹಾಗೂ ರಾತ್ರಿ ಅನ್ನಪ್ರಸಾದದ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನದ ಆಡಳಿತ ಮಂಡಳಿ ಅಧ್ಯಕ್ಷ ಕೆ. ಮಹೇಂದ್ರನ್ ಹಾಗೂ ಸದಸ್ಯರು ಮನವಿ ಮಾಡಿದ್ದಾರೆ.

# 'ವೃತ್ತಿ ನಿವೃತ್ತಿ ನಂತರ ಕ್ರಿಯಾಶೀಲ ಬದುಕು ರೂಪಿಸಿಕೊಳ್ಳಿ'

ತುಮಕೂರು

ವೃತ್ತಿಯಿಂದ ನಿವೃತ್ತರಾದವರು ಪ್ರವೃತ್ತಿ ರೂಢಿಸಿಕೊಂಡು ಕ್ರಿಯಾಶೀಲವಾಗಿ ಬದುಕಬೇಕು. ಆಗ ವಿಶ್ರಾಂತ ಜೀವನವು ಉತ್ಸಾಹದಿಂದ ಕೂಡಿರುತ್ತದೆ ಎಂದು ಗುಬ್ಬಿ ಶಾಸಕ ಎಸ್.ಆರ್. ಶ್ರೀನಿವಾಸ್ ಹೇಳಿದರು.

ತೋವಿನಕೆರೆಯ ಗಂಗಾಧರೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ಶಿಕ್ಷಕರಾಗಿ, ಪ್ರಭಾರ ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಹನುಮಂತರಾಯಪ್ಪ ಅವರಿಗೆ ಅವರ ಸ್ನೇಹ ಬಳಗ ಗುರುವಾರ ನಗರದಲ್ಲಿ ಏರ್ಪಡಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಹನುಮಂತರಾಯಪ್ಪ ಅವರನ್ನು ಸನ್ಮಾನಿಸಿ ಶುಭಕೋರಿ ಮಾತನಾಡಿದರು.

ವೃತ್ತಿಯಿಂದ ನಿವೃತ್ತರಾದ ಮಾತ್ರಕ್ಕೆ ಎಲ್ಲವೂ ಮುಗಿದು ಹೋಗುವುದಿಲ್ಲ, ನಿವೃತ್ತರು ಹೊಸ ಪ್ರವೃತ್ತಿ ಆರಂಭಿಸಿ ಹೊಸ ಬದುಕು ರೂಪಿಸಿಕೊಂಡು ಸಾರ್ಥಕವಾಗಿ ಬಾಳಬೇಕು. ಅವರ ಜೀವನಶೈಲಿ ಇತರರಿಗೆ ಪ್ರೇರಣೆ ಆಗುವಂತಿರಬೇಕು ಎಂದು ಶಾಸಕ ಎಸ್.ಆರ್. ಶ್ರೀನಿವಾಸ್ ಸಲಹೆ ಮಾಡಿದರು.



ಚಲನಚಿತ್ರ ನಟ ತೋವಿನಕೆರೆ ಹನುಮಂತಗೌಡ ಮಾತನಾಡಿ, ಶಿಕ್ಷಕ ವೃತ್ತಿ ಆರಂಭಿಸಿ ಆದರ್ಶ ಶಿಕ್ಷಕರಾಗಿ ಹೆಸರು ಮಾಡಿದ ಹನುಮಂತರಾಯಪ್ಪ ಅವರು ಬಹಳಷ್ಟು ವಿದ್ಯಾರ್ಥಿಗಳು ಉತ್ತಮ ಬದುಕು ಕಟ್ಟಿಕೊಳ್ಳು ನೆರವಾಗಿದ್ದಾರೆ. ನಿವೃತ್ತಿ ನಂತರವೂ ಅವರು ಕಿರಿಯರಿಗೆ ಮಾರ್ಗದರ್ಶನ ನೀಡುವಂತಹ ಕೆಲಸಗಳಲ್ಲಿ ತೊಡಗಿಕೊಂಡು ತಾವೂ ಕ್ರಿಯಾಶೀಲರಾಗಿ ನಿವೃತ್ತಿ ಜೀವನದಲ್ಲಿ ಶಾಂತಿ, ನೆಮ್ಮದಿಯಿಂದ ಬಾಳುವಂತಾಗಲಿ ಎಂದು ಆಶಿಸಿದರು.

ಡಿಸಿಸಿ ಬ್ಯಾಂಕ್ ನಿರ್ದೇಶಕ ಲಕ್ಷ್ಮೀನಾರಾಯಣ, ವಿವಿಧ ಸಂಘಸಂಸ್ಥೆಗಳ ಮುಖಂಡರಾದ ಜೆ. ಜಗದೀಶ್, ತೋವಿನಕೆರೆ ವಿಜಯಕುಮಾರ್, ಮಹಾಲಿಂಗಯ್ಯ, ಹೆಬ್ಬೂರು ಶ್ರೀನಿವಾಸಮೂರ್ತಿ, ಡೈರಿ ಪ್ರಕಾಶ್, ಗೋವಿಂದರಾಜು, ಸುರೇಶ್, ಸ್ವಾಮಿ, ರವಿ ರಾಥೋಡ್ ಮತ್ತಿತರರು ಭಾಗವಹಿಸಿದ್ದರು.

# ಕರಗ ಮಹೋತ್ಸವ, ಜಾತ್ರೆಗೆ ಸಜ್ಜಾದ ಮಾಲೂರು: ಪೌರಾಯುಕ್ತರಿಂದ ಸ್ವಚ್ಛತಾ ಕಾರ್ಯ

ಮಾಲೂರು

ಪಟ್ಟಣದಲ್ಲಿ ಇದೇ 8 ರಿಂದ 12 ರವರೆಗೆ ಅದ್ಧೂರಿಯಾಗಿ ನಡೆಯಲಿರುವ ಧರ್ಮರಾಯಸ್ವಾಮಿ ದ್ರೌಪದಮ್ಮ ಕರಗ ಮಹೋತ್ಸವ ಹಾಗೂ ಪಟಾಲಮ್ಮ–ಮುತ್ಯಾಲಮ್ಮ ಜಾತ್ರಾ ಮಹೋತ್ಸವದ ಅಂಗವಾಗಿ ನಗರಸಭೆಯಿಂದ ಸಮರೋಪಾದಿಯಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಗಿದೆ ಎಂದು ನಗರಸಭೆ ಪೌರಾಯುಕ್ತ ಎಂ.ಎಸ್. ಮಹದೇವ್ ತಿಳಿಸಿದ್ದಾರೆ.

ಜಾತ್ರಾ ಮಹೋತ್ಸವ ನಡೆಯಲಿರುವ ಪಟಾಲಮ್ಮ–ಮುತ್ಯಾಲಮ್ಮ ದೇವಾಲಯದ ಆವರಣದಲ್ಲಿ ನಗರಸಭೆ ವತಿಯಿಂದ ನಡೆಯುತ್ತಿರುವ ಸ್ವಚ್ಛತಾ ಕಾಮಗಾರಿಗಳನ್ನು ಖುದ್ದಾಗಿ ವೀಕ್ಷಿಸಿದ ಅವರು, ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪೌರಾಯುಕ್ತರು, "ಮಾಲೂರು ನಗರವು ಅತ್ಯಂತ ವೇಗವಾಗಿ ಬೆಳೆಯುತ್ತಿದ್ದು, ನಾಗರಿಕರಿಗೆ ಕುಡಿಯುವ ನೀರು, ಸ್ವಚ್ಛತೆ ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ನಗರಸಭೆಯ ಪ್ರಮುಖ ಜವಾಬ್ದಾರಿಯಾಗಿದೆ. ಪ್ರತಿ ವರ್ಷದಂತೆ ಈ ಬಾರಿಯೂ ಕರಗ ಮಹೋತ್ಸವ ಹಾಗೂ ಜಾತ್ರಾ ಮಹೋತ್ಸವವನ್ನು ವ್ಯವಸ್ಥಿತವಾಗಿ ನಡೆಸಲು ಪೂರಕವಾಗಿ ನಗರದಾದ್ಯಂತ ಸ್ವಚ್ಛತೆಗೆ ಆದ್ಯತೆ ನೀಡಲಾಗಿದೆ," ಎಂದರು.



ಜಾತ್ರೆಗೆ ಬರುವ ಭಕ್ತಾದಿಗಳಿಗೆ ತೊಂದರೆಯಾಗದಂತೆ ಸುತ್ತಮುತ್ತಲ ಪ್ರದೇಶವನ್ನು ಶುಚಿಯಾಗಿಡಲು ಕ್ರಮ ವಹಿಸಲಾಗಿದೆ. "ಸಾರ್ವಜನಿಕರು ಹಾಗೂ ಸ್ಥಳೀಯ ನಿವಾಸಿಗಳು ತಮ್ಮ ಮನೆಗಳಲ್ಲಿ ಸಂಗ್ರಹವಾಗುವ ಕಸವನ್ನು ಜಾತ್ರೆ ನಡೆಯುವ ಬಯಲು ಪ್ರದೇಶಗಳಲ್ಲಿ ಅಥವಾ ರಸ್ತೆ ಬದಿಯಲ್ಲಿ ಎಸೆಯಬಾರದು. ನಗರಸಭೆಯ ಸ್ವಚ್ಛತಾ ವಾಹನಗಳು ಮನೆಮನೆಗೆ ಬಂದಾಗ ಕಸವನ್ನು ಅವುಗಳಿಗೇ ನೀಡುವ ಮೂಲಕ ಪಟ್ಟಣದ ಅಂದವನ್ನು ಕಾಪಾಡಲು ಸಹಕರಿಸಬೇಕು," ಎಂದು ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಕ ಶ್ರೀನಿವಾಸ್, ಕಿರಿಯ ಆರೋಗ್ಯ ನಿರೀಕ್ಷಕ ರಾಜಣ್ಣ, ನಗರಸಭೆ ಸಿಬ್ಬಂದಿ ಶ್ರೀನಿವಾಸ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಭಾರತ ಸಾರಥಿ
05/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮಾಲೂರು ಕರಗೋತ್ಸವ: ಭಕ್ತಿ-ಪರಂಪರೆಯ ಸಮಾಗಮ

● ಟಿ.ಕೆ. ನಾಗರಾಜ್

ಮಾಲೂರು

ತಾಲ್ಲೂಕಿನ ಸುಪ್ರಸಿದ್ಧ ಧಾರ್ಮಿಕ ಆಚರಣೆ, ಶ್ರದ್ಧೆ ಹಾಗೂ ಸಾಂಸ್ಕೃತಿಕ ಪರಂಪರೆಯ ಸಂಕೇತವಾದ 'ಮಾಲಿಕಾಪುರದ ಕರಗೋತ್ಸವ'ವು ಈ ಬಾರಿ ಮತ್ತಷ್ಟು ಸಡಗರ-ಸಂಭ್ರಮಕ್ಕೆ ಸಾಕ್ಷಿಯಾಗುತ್ತಿದೆ. ಜಾತಿ-ಮತ, ಧರ್ಮಗಳ ಗಡಿ ಮೀರಿ ಮೂರು ರಾಜ್ಯಗಳ ಜನತೆಯನ್ನು ಒಂದುಗೂಡಿಸುವ ಈ ದೈವೀ ಉತ್ಸವವು ಮಾಲೂರಿನ ಹೆಮ್ಮೆಯ ಗುರುತಾಗಿ ಲೋಕಮಾನ್ಯವಾಗಿದೆ.

ನವವಧುವಿನಂತೆ ಶೃಂಗಾರಗೊಂಡ ಮಾಲೂರು:

ಜಾತ್ರೆಯ ಸಿದ್ಧತೆಗಳು ಆರಂಭವಾಗುತ್ತಿದ್ದಂತೆಯೇ ಇಡೀ ಊರು ನವವಧುವಿನಂತೆ ಶೃಂಗಾರಗೊಂಡಿದೆ. ಮನೆ ಮನೆಯಲ್ಲೂ ಹಬ್ಬದ ವಾತಾವರಣ ಮನೆಮಾಡಿದ್ದು, ಸಂಬಂಧಿಕರು ಹಾಗೂ ಭಕ್ತರ ಆಗಮನದಿಂದ ಪಟ್ಟಣದಲ್ಲಿ ಸಂಭ್ರಮದ ಕಳೆ ಎದ್ದಿದೆ. ಶತಮಾನಗಳ ಇತಿಹಾಸವಿರುವ ಈ ಕರಗವು ತನ್ನ ಘನತೆ ಹಾಗೂ ಗಾಂಭೀರ್ಯವನ್ನು ಇಂದಿಗೂ ಉಳಿಸಿಕೊಂಡು ಬಂದಿರುವುದು ವಿಶೇಷ.

ಅಲಗು ಸೇವೆ ಹಾಗೂ ರೋಮಾಂಚಕ ನಂಬಿಕೆಗಳು:

ಕರಗೋತ್ಸವದ ಹಿಂದೆ ಅನೇಕ ರೋಚಕ ಕಥೆ ಹಾಗೂ ಅಲಿಖಿತ ಶಾಸನಗಳಿವೆ. ವ್ರತಧಾರಿಯು ಕಂಕಣ ತೊಟ್ಟ ಕ್ಷಣದಿಂದಲೇ ಅವರ ಮಡದಿಯ ಮಂಗಳಸೂತ್ರವನ್ನು ತೆಗೆದಿಡುವ ಕಟ್ಟುನಿಟ್ಟಿನ ಪದ್ಧತಿ ಇಂದಿಗೂ ಚಾಲ್ತಿಯಲ್ಲಿದೆ. ಹಿಂದೆ ಮೆರವಣಿಗೆಯ ವೇಳೆ ಅಡೆತಡೆಗಳಾದಾಗ ವ್ರತಧಾರಿಯು ತನ್ನ ತೊಡೆಯ ರಕ್ತವನ್ನೇ ದೇವಿಗೆ ಅರ್ಪಿಸಿ ಕರಗವನ್ನು ಮುನ್ನಡೆಸಿದ್ದ ಐತಿಹ್ಯಗಳಿವೆ. ವೀರಕುಮಾರರು 'ಧಿಕ್ ಧೀ' ಎನ್ನುತ್ತಾ ಹರಿತವಾದ ಖಡ್ಗಗಳಿಂದ ಎದೆಗೆ ಬಡಿದುಕೊಳ್ಳುವ 'ಅಲಗು ಸೇವೆ'ಯು ಭಕ್ತರಲ್ಲಿ ಭಕ್ತಿ ಮತ್ತು ಭಯ ಭಕ್ತಿಯನ್ನು ಏಕಕಾಲಕ್ಕೆ ಮೂಡಿಸುತ್ತದೆ.



ಜಾತ್ರಾ ಸಪ್ತಾಹದ ಪ್ರಮುಖ ಘಟ್ಟಗಳು:

ಯುಗಾದಿ ಹಬ್ಬದ ನಂತರದ ಮೊದಲ ಶುಕ್ರವಾರದಂದು ಊರಮ್ಮ ಮಾರಮ್ಮ ಹಾಗೂ ಪಟಾಲಮ್ಮನ ಸಮ್ಮುಖದಲ್ಲಿ 'ಸಾಟು' ಹಾಕುವ ಮೂಲಕ ಜಾತ್ರೆಗೆ ಅಧಿಕೃತ ನಾಂದಿ ಹಾಡಲಾಗುತ್ತದೆ.

ಉತ್ಸವದ ವೇಳಾಪಟ್ಟಿ ಇಂತಿದೆ:

ಬುಧವಾರ: ಧ್ವಜಾರೋಹಣದೊಂದಿಗೆ ಧಾರ್ಮಿಕ ವಿಧಿ ವಿಧಾನಗಳ ಆರಂಭ.

ಗುರುವಾರ: ಹಸೆ ಕರಗ ಮಹೋತ್ಸವ.

ಶುಕ್ರವಾರ: ಗ್ರಾಮದೇವತೆಗಳಿಗೆ ಹಿಟ್ಟಿನ ಆರತಿ ದೀಪೋತ್ಸವ.

ಶನಿವಾರ: ದ್ರೌಪದಿ ದೇವಿಯ ಕಲ್ಯಾಣೋತ್ಸವ.

ಭಾನುವಾರ: ವೈಭವೋಪೇತ ಶಕ್ತ್ಯುತ್ಸವ (ಮಹೋನ್ನತ ಕರಗೋತ್ಸವ).

ಸೋಮವಾರ: ಪುರಾಣ ಗಾವು ಆಚರಣೆ.

ಮಂಗಳವಾರ: ವಸಂತೋತ್ಸವ ಹಾಗೂ ಧ್ವಜ ಅವರೋಹಣದೊಂದಿಗೆ ಸಪ್ತಾಹ ಮುಕ್ತಾಯ.

ಮಲ್ಲಿಗೆಯ ಕಂಪಿನಲ್ಲಿ ಕಣ್ಣುಮನ ಸೆಳೆಯುವ ಅಮ್ಮ:

ಮುಡಿಯಿಂದ ಅಡಿಯವರೆಗೆ ಮಲ್ಲಿಗೆಯ ಉಡುಗೆಯನ್ನುಟ್ಟು, ಕಾಲದಂಡ ಹಾಗೂ ಕರವಾಳ ಹಿಡಿದು ಆವೇಶಭರಿತರಾಗಿ ಬರುವ ಅಮ್ಮನ ದಿವ್ಯ ರೂಪವನ್ನು ನೋಡಲು ಎರಡು ಕಣ್ಣು ಸಾಲದು. ಪಂಬೆಯ ನಾದ, ಘಂಟೆಯ ತಾಳ ಹಾಗೂ ಮುಖವೀಣೆಯ ಓಘಕ್ಕೆ ಹೆಜ್ಜೆ ಹಾಕುತ್ತಾ ಬರುವ ಕರಗವು ಭಕ್ತರ ಪಾಲಿಗೆ ಒಂದು ದಿವ್ಯ ಅನುಭೂತಿ. ಬದುಕಿನಲ್ಲಿ ಒಮ್ಮೆಯಾದರೂ ಈ ಮಹೋತ್ಸವವನ್ನು ಕಣ್ತುಂಬಿಕೊಂಡು ಸಾರ್ಥಕ್ಯ ಪಡೆಯಬೇಕೆಂಬುದು ಭಕ್ತರ ಆಶಯ.



## ದ್ರೌಪದಿಯ ರೌದ್ರಾವತಾರಕ್ಕೆ ಭಕ್ತಸಾಗರ ಶರಣು!

ಮಾಲೂರು

ಅಧರ್ಮದ ಸಂಹಾರವಾಗಿ ಧರ್ಮವು ಗೆದ್ದ ಸಂಭ್ರಮ, ಬಿಚ್ಚಿದ ಮುಡಿಯನ್ನೇರಿ ಕುಳಿತ ಆದಿಶಕ್ತಿಯ ವಿಜಯೋತ್ಸವಅದೇ ಮಾಲೂರಿನ ಐತಿಹಾಸಿಕ ಕರಗೋತ್ಸವ. ದ್ವಾಪರ ಯುಗದ ಅಂತ್ಯದಲ್ಲಿ ಧರೆಗಿಳಿದ ಆದಿಶಕ್ತಿಯ ಅಪರಾವತಾರಿಣಿ ದೇವಿ ದ್ರೌಪದಿಯ ಶೌರ್ಯವನ್ನು ಸಾರುವ ಈ ಉತ್ಸವವು ಮಾಲೂರಿನಲ್ಲಿ ಭಕ್ತಿ ಮತ್ತು ಶೌರ್ಯದ ಸಂಕೇತವಾಗಿ ಮೂಡಿಬಂದಿದೆ.

ನಭೋಮಂಡಲ ಮುಟ್ಟಿದ ಗೋವಿಂದ ನಾಮಸ್ಮರಣೆ: ಕರಗವು ಮಹಾದ್ವಾರದಿಂದ ಹೊರಬರುತ್ತಿದ್ದಂತೆ ಕೊಂಬು-ಕಹಳೆಗಳ ನಾದ ಮಾರ್ದನಿಸಿತು. ಬಾಣಬಿರುಸುಗಳ ನಕ್ಷತ್ರ ಮಳೆಯ ನಡುವೆ 'ಅಲಲಲ ಲಲಲೋ... ಕಿಲಿಲಿಲಿ ಲಿಲಿಲೀ' ಎಂಬ ಬಲಿಕೂಗು ಕೇಳುತ್ತಿದ್ದಂತೆ ಭಕ್ತರ ಉದ್ವೇಗ ಮುಗಿಲುಮುಟ್ಟಿತ್ತು. ಸಾವಿರಾರು ಕಂಠಗಳಿಂದ ಹೊರಹೊಮ್ಮಿದ 'ಗೋವಿಂದಾ ಗೋವಿಂದಾ' ಎಂಬ ನಾಮಸ್ಮರಣೆಯು ಇಡೀ ಮಾಲೂರು ಪಟ್ಟಣವನ್ನು ದೈವೀ ಲೋಕವಾಗಿಸಿತ್ತು.

ರುಧಿರಾಕ್ಷಿಯ ಅವತಾರದಲ್ಲಿ ಸೃಷ್ಟಿದೇವತೆ: ಮುಡಿಯಿಂದ ಅಡಿಯವರೆಗೆ ಮಲ್ಲಿಗೆಯ ಉಡುಗೆ ತೊಟ್ಟು, ಕಾಲದಂಡ-ಕರವಾಳ ಹಿಡಿದು ರುಧಿರಾಕ್ಷಿಯಾಗಿ ಆವಾಹಿಸಿಕೊಂಡ ದೇವಿಯ ದರ್ಶನ ಭಕ್ತರನ್ನು ಪುಳಕಿತಗೊಳಿಸಿತು. ಭಕ್ತಿಯಲ್ಲಿ ಮೈಮರೆತ ವೀರಕುಮಾರರು 'ಧಿಕ್ ಧೀ' ಎನ್ನುತ್ತಾ ಕತ್ತಿಗಳಿಂದ ಎದೆಗೆ ಬಡಿದುಕೊಳ್ಳುವ 'ಅಲಗು ಸೇವೆ'ಯು ಉತ್ಸವಕ್ಕೆ ರೋಮಾಂಚನಕಾರಿ ಸ್ಪರ್ಶ ನೀಡಿತು. ದೇವಿಯು ಮುಖವೀಣೆ, ಪಂಬೆ ಹಾಗೂ ಘಂಟಾನಾದಕ್ಕೆ ತಕ್ಕಂತೆ ಹೆಜ್ಜೆ ಹಾಕುತ್ತಿದ್ದರೆ, ಕರಗದ ಶಿಖರದ ಮೇಲಿನ ರತ್ನಖಚಿತ ಛತ್ರಿಯು ಆಡುವ ಸೌಂದರ್ಯವು ಸಾಕ್ಷಾತ್ ಸುರಲೋಕದ ದೇವತೆಯೇ ಧರೆಗಿಳಿದಂತೆ ಭಾಸವಾಗುತ್ತಿತ್ತು.

ಪೌರಾಣಿಕ ಹಿನ್ನೆಲೆ ಧರ್ಮದ ಜಯದ ಪ್ರತಿರೂಪ: ಭೂದೇವಿಯ ಸಂಕಷ್ಟವನ್ನು ತೀರಿಸಲು ಆದಿಶಕ್ತಿಯು ಕೃಷ್ಣನ ಸೋದರಿಯಾಗಿ, ಅಗ್ನಿ ಕುಂಡದಲ್ಲಿ ದ್ರೌಪದಿಯಾಗಿ ಅವತರಿಸಿದ ಪೌರಾಣಿಕ



ಹಿನ್ನೆಲೆಯನ್ನು ಈ ಉತ್ಸವ ಸ್ಮರಿಸುತ್ತದೆ. ಕೌರವರ ಸಭೆಯಲ್ಲಿ ಅಪಮಾನಿತಳಾದ ದ್ರೌಪದಿಯು ತನ್ನ ಬಿಚ್ಚಿದ ಮುಡಿಯನ್ನು ಕಟ್ಟುವುದಿಲ್ಲವೆಂದು ಮಾಡಿದ ಪ್ರತಿಜ್ಞೆ, ಭೀಮನಿಂದ ದುಶ್ಯಾಸನನ ಎದೆಯ ರಕ್ತದ ಅಭಿಷೇಕ ಹಾಗೂ ದುರ್ಯೋಧನನ ಅಂತ್ಯದ ನಂತರ ಚೈತ್ರ ಹುಣ್ಣಿಮೆಯ ನಡುರಾತ್ರಿಯಲ್ಲಿ ದೇವಿಯು ಧರಿಸಿದ ವಿಜಯೋತ್ಸವದ ರೂಪವೇ ಈ 'ಶಕ್ತ್ಯುತ್ಸವ'.

ಕಣ್ತುಂಬಿಕೊಂಡರೆ ಜನ್ಮ ಸಾರ್ಥಕ: ಸರ್ವಾಭರಣ ಭೂಷಿತಳಾಗಿ, ಸರ್ವಾಯುಧ ಪಾಣಿಯಾಗಿ ವಿಜೃಂಭಿಸುವ ದೇವಿಯ ಈ ದಿವ್ಯ ಮಂಗಳ ರೂಪವನ್ನು ನೋಡಲು ಎರಡು ಕಣ್ಣುಗಳು ಸಾಲವು. ಕರಗದ ಆರಾಧನೆಯು ಕೇವಲ ಒಂದು ಆಚರಣೆಯಲ್ಲ, ಅದು ಅಧರ್ಮದ ಮೇಲೆ ಧರ್ಮದ ಜಯವನ್ನು ಸಾರುವ ಸಾಂಸ್ಕೃತಿಕ ಪರಂಪರೆಯಾಗಿದೆ ಎಂದು ಭಕ್ತಾಧಿಗಳು ಹರ್ಷ ವ್ಯಕ್ತಪಡಿಸಿದರು.

## ಸಡಗರದ ಹನುಮೋತ್ಸವ: ತಂಬಿಟ್ಟು ದೀಪೋತ್ಸವ ಸಮರ್ಪಣೆ



ವೈ.ಎನ್. ಹೊಸಕೋಟೆ

ಹೋಬಳಿಯಾದ್ಯಂತ ಗುರುವಾರ ಹನುಮ ಜಯಂತಿಯನ್ನು ಅತ್ಯಂತ ಶ್ರದ್ಧಾಭಕ್ತಿ ಹಾಗೂ ಸಡಗರದಿಂದ ಆಚರಿಸಲಾಯಿತು. ವಿವಿಧ ಗ್ರಾಮಗಳ ಆಂಜನೇಯ ಸ್ವಾಮಿ ದೇವಸ್ಥಾನಗಳಲ್ಲಿ ಬೆಳಿಗ್ಗೆಯಿಂದಲೇ ವಿಶೇಷ ಪೂಜಾ ವಿಧಿವಿಧಾನಗಳು ನೆರವೇರಿದವು.

ಸಿದ್ದಾಪುರದ ಪ್ರಸಿದ್ಧ ಅಲಕೂರು ಆಂಜನೇಯಸ್ವಾಮಿ ದೇವಾಲಯದದಲ್ಲಿ ಹನುಮ ಜಯಂತಿ ಪ್ರಯುಕ್ತ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು ನಡೆದವು. ಗ್ರಾಮ ದೇವತೆಯಾದ ಕರಿಯಮ್ಮ ದೇವಿಯೊಂದಿಗೆ ಸಿದ್ದಾಪುರ ಗ್ರಾಮಸ್ಥರು ಸಾಂಪ್ರದಾಯಿಕವಾಗಿ ತಂಬಿಟ್ಟು ಜ್ಯೋತಿಗಳನ್ನು ಹೊತ್ತು ಮೆರವಣಿಗೆಯ ಮೂಲಕ ದೇವಾಲಯಕ್ಕೆ ಆಗಮಿಸಿದರು. ಆಂಜನೇಯ ಸ್ವಾಮಿಗೆ ಆರತಿ ಬೆಳಗಿ, ಮೇಲುದೀಪ ಹಚ್ಚುವ ಮೂಲಕ ಭಕ್ತಿ ಸಮರ್ಪಿಸಿದರು.

ದೇವಾಲಯದ ಆವರಣದಲ್ಲಿ ಹನುಮ ದೇವರ ಉತ್ಸವ ಮೂರ್ತಿಯ ಪಲ್ಲಕಿ ಉತ್ಸವವು ವೈಭವದಿಂದ ಜರುಗಿತು. ಭಕ್ತಾದಿಗಳು ರಾಮನಾಮ ಸ್ಮರಣೆ ಹಾಗೂ ಭಜನೆ ಮಾಡುತ್ತಾ ಪಲ್ಲಕಿಯೊಂದಿಗೆ ಪ್ರದಕ್ಷಿಣೆ ಹಾಕಿ ಪುನೀತರಾದರು.

ಹೋಬಳಿಯ ಪ್ರಮುಖ ಗ್ರಾಮಗಳಾದ ಬೂದಿಬೆಟ್ಟ, ಇಂದ್ರಬೆಟ್ಟ, ಹೊಸದುರ್ಗ, ಪೋಲೇನಹಳ್ಳಿ, ಸಾಸಲಕುಂಟೆ ಹಾಗೂ ದಳವಾಯಿಹಳ್ಳಿ ಸೇರಿದಂತೆ ಸುತ್ತಮುತ್ತಲ ಗ್ರಾಮಗಳ ಆಂಜನೇಯ ಸ್ವಾಮಿ ದೇವಸ್ಥಾನಗಳಲ್ಲಿ ಮಾರುತಿಗೆ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು. ಮುಂಜಾನೆಯಿಂದಲೇ ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಅನೇಕ ಕಡೆಗಳಲ್ಲಿ ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ ಹಾಗೂ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

## ಕುಡುಕರ ಅಡ್ಡೆಯಾಗಿತ್ತಿದೆ ಶಾಲಾ ಆವರಣ

ವೈ.ಎನ್.ಹೊಸಕೋಟೆ

ಗ್ರಾಮದ ಹೃದಯ ಭಾಗದಲ್ಲಿರುವ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಬಾಲಕರ ಶಾಲೆ ಆವರಣವು ಇತ್ತೀಚೆಗೆ ಕುಡುಕರ ಅಡ್ಡೆಯಾಗುತ್ತಿದ್ದು, ಹಲವು ಆತಂಕಕ್ಕೆ ಕಾರಣವಾಗಿದೆ.

ಶಾಲೆಯ ಆವರಣದಲ್ಲಿ ಪ್ರತಿನಿತ್ಯ ಕುಡುಕರು ರಾತ್ರಿ ಸಮಯದಲ್ಲಿ ಮದ್ಯ ಸೇವಿಸಿ ಮದ್ಯದ ಬಾಟಲಿಗಳನ್ನು ಎಲ್ಲೆಂದರಲ್ಲಿ ಬಿಟ್ಟು ಹೋಗುತ್ತಿದ್ದಾರೆ. ಗುಟ್ಕಾ ತ್ಯಾಜ್ಯಗಳು ಎಲ್ಲೆಂದರಲ್ಲಿ ರಾರಾಜಿಸುತ್ತಿರುತ್ತವೆ. ಶಾಲೆಗೆ ಬಂದ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಇವುಗಳನ್ನು ಶಾಲಾ ಆವರಣದಿಂದ ತೆಗೆಯುವ ಕೆಲಸ ಮಾಡಬೇಕಾಗಿದೆ.

ಈ ಆವರಣದಲ್ಲಿ ಉರ್ದು ಶಾಲೆ, ಸಾರ್ವಜನಿಕ ಗ್ರಂಥಾಲಯ ಮತ್ತು ವಾಲೀಬಾಲ್ ಕ್ರೀಡಾಂಗಣಗಳಿದ್ದು, ಬೆಳಗಿನ ಸಮಯದಲ್ಲಿ ವಿದ್ಯಾರ್ಥಿಗಳು, ಪೋಷಕರು ಹಾಗೂ ಓದುಗರು ಇಲ್ಲಿ ಬಂದು ಹೋಗುತ್ತಿರುತ್ತಾರೆ. ಸುತ್ತಲೂ ಕಾಂಪೌಂಡ್ ವ್ಯವಸ್ಥೆ ಇದ್ದಾಗ್ಯೂ, ಕೆಲವು ಕಿಡಿಗೇಡಿಗಳು ಸಂಜೆಯಾದರೆ ಗೇಟ್ ಮತ್ತು ಕಾಂಪೌಂಡ್ ಗೋಡೆಗಳನ್ನು ಹಾರಿ ಬಂದು ರಂಗಮಂದಿರ ಮತ್ತು ಕಾರ್ಯಕ್ರಮಗಳ ವೇದಿಕೆಗಳಲ್ಲಿ ರಾಜಾರೋಷವಾಗಿ ಕೂತು ಮಧ್ಯಪಾನ ದೂಮಪಾನ ಇನ್ನಿತರೆ ಚಟುವಟಿಕೆಗಳನ್ನು ಇಲ್ಲಿ ನಡೆಸುತ್ತಿದ್ದಾರೆ.

ಹಲವು ಬಾರಿ ಮಧ್ಯದ ಬಾಟಲಿಗಳನ್ನು ಕ್ರೀಡಾಂಗಣದಲ್ಲಿ ಒಡೆದು ಹಾಕಿದ್ದ ಉದಾಹರಣೆಗಳು ಇವೆ. ಈ ಬಗ್ಗೆ ಪೋಲೀಸ್ ಇಲಾಖೆಗೆ ತಿಳಿಸಿಲಾಗಿತ್ತು. ಕೆಲವು ದಿನ ನಿಂತಿದ್ದ ಈ ಚಟುವಟಿಕೆಗಳು ಮತ್ತೆ ಮುಂದುವರೆಯುತ್ತಿದ್ದು, ಶಾಲಾ ಶೈಕ್ಷಣಿಕ ಪರಿಸರದಲ್ಲಿ ದುಶ್ಪರಿಣಾಮ ಬೀರುತ್ತಿವೆ ಎನ್ನುತ್ತಾರೆ ಮುಖ್ಯ ಶಿಕ್ಷಕ ಐ.ಎ.ನಾರಾಯಣಪ್ಪ. ಶಾಲಾ ಆವರಣ ಮತ್ತು ಇನ್ನಿತರೆ ಭಾಗಗಳಲ್ಲಿ ನಡೆಯುತ್ತಿರುವ ಈ ರೀತಿಯ ಅನಿಷ್ಟ ಚಟುವಟಿಕೆಗಳು ನಿಲ್ಲಲು ಸಂಬಂಧಿಸಿದ ಇಲಾಖೆಯವರು ಈ ಬಗ್ಗೆ ಸೂಕ್ತ ಕ್ರಮ ಕೈಗೊಂಡು ಶಾಲಾ ಪರಿಸರವನ್ನು ಕಾಪಾಡಬೇಕಾಗಿದೆ ಎಂದು ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಎ.ಓ.ನಾಗರಾಜು ಕೋರಿದ್ದಾರೆ.


# ಫೋನ್-ಇನ್ ಕಾರ್ಯಕ್ರಮ ಯಶಸ್ವಿ: 1,110 ಸಮಸ್ಯೆಗಳಿಗೆ ಮುಕ್ತಿ

ಬೆಂಗಳೂರು

ಇಲ್ಲಿನ ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿನ ನಾಗರಿಕರ ಸಮಸ್ಯೆಗಳನ್ನು ಆಲಿಸಿ, ತ್ವರಿತ ಪರಿಹಾರ ಕಲ್ಪಿಸುವ ಉದ್ದೇಶದಿಂದ, ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ರವರು ಇಂದು ಬೆಳಿಗ್ಗೆ 7.00 ಗಂಟೆಯಿಂದ ಅಮೃತಹಳ್ಳಿ ಮುಖ್ಯರಸ್ತೆಯಲ್ಲಿರುವ ನಗರ ಪಾಲಿಕೆಯ ಆಯುಕ್ತರ ಕಚೇರಿಯ ಸಭಾಂಗಣದಲ್ಲಿ ಫೋನ್-ಇನ್ ಕಾರ್ಯಕ್ರಮವನ್ನು ಆಯೋಜಿಸಿ, ನಾಗರಿಕರಿಂದ ನೇರವಾಗಿ ಅಹವಾಲುಗಳನ್ನು ಸ್ವೀಕರಿಸಿದರು.

ಈ ಕಾರ್ಯಕ್ರಮದ ವೇಳೆ ವಿವಿಧ ವಾರ್ಡ್‌ಗಳಿಂದ ಬಂದ ಹಲವು ದೂರಗಳನ್ನು ಆಲಿಸಿ, ಅವುಗಳ ತ್ವರಿತ ಪರಿಹಾರಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ಫೋನ್-ಇನ್ ಕಾರ್ಯಕ್ರಮದ ಪ್ರಗತಿ: ಸೆಪ್ಟೆಂಬರ್ 26ರಿಂದ ಆರಂಭಗೊಂಡ ಈ ಸಾರ್ವಜನಿಕ ಸಂಪರ್ಕ ಕಾರ್ಯಕ್ರಮದ ಮೂಲಕ ಕಳೆದ 27 ವಾರಗಳಲ್ಲಿ ಒಟ್ಟು 1563 ಅಹವಾಲುಗಳು ದಾಖಲಾಗಿದ್ದು, ಅವುಗಳಲ್ಲಿ 1110 ಅಹವಾಲುಗಳಿಗೆ



ಈಗಾಗಲೇ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.

ಉತ್ತರ ನಗರ ಪಾಲಿಕೆ ವ್ಯಾಪ್ತಿಗೆ ಸೇರದ 93 ಅಹವಾಲುಗಳನ್ನು ಸಂಬಂಧಪಟ್ಟ ಇತರೆ ನಗರ ಪಾಲಿಕೆಗಳು ಹಾಗೂ ಇಲಾಖೆಗಳಿಗೂ ವರ್ಗಾಯಿಸಲಾಗಿದ್ದು, ಉಳಿದ 316 ಅಹವಾಲುಗಳ ಕುರಿತು ತ್ವರಿತ ಕ್ರಮ ಜರುಗಿಸುವಂತೆ ಆಯುಕ್ತರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಇಂದಿನ ಕಾರ್ಯಕ್ರಮದ ವಿವರ: ಇಂದು ನಡೆದ ಫೋನ್-ಇನ್ ಕಾರ್ಯಕ್ರಮದಲ್ಲಿ ಒಟ್ಟು 47 ಕರೆಗಳನ್ನು ಸ್ವೀಕರಿಸಲಾಗಿದ್ದು, ಅವುಗಳ ಮೂಲಕ ಒಟ್ಟು 63 ಅಹವಾಲುಗಳು ದಾಖಲಾಗಿವೆ. ಎಲ್ಲಾ ಅಹವಾಲುಗಳನ್ನು ಪರಿಶೀಲಿಸಿ, ತಕ್ಷಣ ಸ್ಪಂದಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಯಿತು.

ರಸ್ತೆಗಳ ಸಮರ್ಪಕ ನಿರ್ವಹಣೆಗೆ ಆದ್ಯತೆ: ರಸ್ತೆ ನಿರ್ವಹಣೆಗೆ ಸಂಬಂಧಿಸಿದಂತೆ 29 ಅಹವಾಲುಗಳು ಬಂದಿರುವ ಹಿನ್ನೆಲೆಯಲ್ಲಿ ದುರಸ್ತಿ ಕಾರ್ಯಗಳಲ್ಲಿ ಗುಣಮಟ್ಟ ಕಾಪಾಡಿಕೊಂಡು, ಆದ್ಯತೆಯ ಆಧಾರದಲ್ಲಿ ಕೆಲಸಗಳನ್ನು ವೇಗಗೊಳಿಸಿ ಸಾರ್ವಜನಿಕರಿಗೆ ಸುರಕ್ಷಿತ ಸಂಚಾರ ವ್ಯವಸ್ಥೆ ಒದಗಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ತ್ಯಾಜ್ಯ ನಿರ್ವಹಣೆಗೆ ಒತ್ತು: ತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಸಂಬಂಧಿಸಿದಂತೆ 11 ಅಹವಾಲುಗಳು ದಾಖಲಾಗಿದ್ದು, ಎಲ್ಲಾ ವಾರ್ಡ್‌ಗಳಲ್ಲಿ ಸಮಯಪಾಲನೆಯೊಂದಿಗೆ ತ್ಯಾಜ್ಯ ಸಂಗ್ರಹಣೆ ನಡೆಯುವಂತೆ ಹಾಗೂ ವೈಜ್ಞಾನಿಕ ವಿಲೇವಾರಿ ವ್ಯವಸ್ಥೆ ಜಾರಿಗೊಳಿಸುವಂತೆ ಸಂಬಂಧಪಟ್ಟ ವಿಭಾಗಗಳಿಗೆ ಸೂಚಿಸಲಾಯಿತು. ಉಳಿದಂತೆ ಅಪಾಯ ಸ್ಥಿತಿಯಲ್ಲಿರುವ ಮರಗಳ ರೆಂಬೆ ಕೊಂಬೆಗಳ ತೆರವು ಸಂಬಂಧಿಸಿದಂತೆ 3 ಹಾಗೂ ಆರೋಗ್ಯ



ವಿಭಾಗಕ್ಕೆ ಸಂಬಂಧಿಸಿದಂತೆ 3 ಮತ್ತು ಖಾತಾ ಸೇವೆಗೆ ಸಂಬಂಧಿಸಿದಂತೆ 2 ಅಹವಾಲುಗಳು ದಾಖಲಾಗಿದ್ದು, ಸಂಬಂಧಿಸಿದ ಅಧಿಕಾರಿ ಗಳಿಗೆ ತ್ವರಿತ ಕ್ರಮಕ್ಕೆ ಸೂಚನೆ ನೀಡಿದರು. ಹೆಚ್ಚಿನ ಮಾಹಿತಿಗೆ ಕಳೆದ 27 ವಾರಗಳಲ್ಲಿ ಹಾಗೂ ಶುಕ್ರವಾರ ಸ್ವೀಕರಿಸಲಾದ ಅಹವಾಲುಗಳ ಪ್ರಗತಿ ವಿವರವುಳ್ಳ ಪಟ್ಟಿ ಲಗತ್ತಿಸಲಾಗಿದೆ. ನಾಗರಿಕರ ಸಮಸ್ಯೆಗಳಿಗೆ ನೇರ ಪರಿಹಾರ ಒದಗಿಸುವ ಹಾಗೂ ಅಭಿವೃದ್ಧಿ ಕಾಮಗಾರಿಗಳ ಸ್ಥಿತಿಗತಿಯನ್ನು ಪರಿಶೀಲಿಸುವ ಉದ್ದೇಶದಿಂದ ಆಯುಕ್ತರ ಕಾರ್ಯಕ್ರಮವು ಪ್ರತಿ ಶುಕ್ರವಾರವೂ ನಿಯಮಿತವಾಗಿ ನಡೆಯಲಿದೆ.


# ದ್ರಾವಿಡ ಕೋಟೆಗೆ ಯಾರಾಗಲಿದ್ದಾರೆ... ದಳಪತಿ?

ಚನ್ನೈ

ತಮಿಳುನಾಡಿನ 2026 ಚುನಾವಣೆಯಲ್ಲಿ ವಿಜಯ್ ಅವರ ಟಿವಿಕೆ ಎಷ್ಟು ಪರಿಣಾಮ ಬೀರುತ್ತದೆ ಎಂಬ ಪ್ರಶ್ನೆ ಈಗ ರಾಜ್ಯ ರಾಜಕೀಯದ ಕೇಂದ್ರ ಚರ್ಚೆಯಾಗಿದೆ. ಹಲವು ದಶಕಗಳಿಂದ ಡಿಎಂಕೆ ಮತ್ತು ಎಐಡಿಎಂಕೆ ನಡುವಿನ ದ್ವಿಧ್ರುವೀಯ ರಾಜಕೀಯಕ್ಕೆ ಜನರು ಅಭ್ಯಾಸವಾಗಿದ್ದರೆ, ವಿಜಯ್ ಅವರ ಪ್ರವೇಶ ಈ ಲೆಕ್ಕಾಚಾರವನ್ನು ಮೂರುಮುಖ ಸ್ಪರ್ಧೆಯಾಗಿ ತಿರುಗಿಸಿದೆ. ಟಿವಿಕೆ ಯ ನಿಜವಾದ ಬಲ ಅದು ಎಷ್ಟು ಸೀಟು ಗೆಲ್ಲುತ್ತದೆ ಎಂಬುದಕ್ಕಿಂತ, ಯಾರ ಮತವನ್ನು ಎಷ್ಟು ಕತ್ತರಿಸುತ್ತದೆ ಎಂಬುದ 'ರಲ್ಲಿ ಇದೆ. ಇತ್ತೀಚಿನ ವಿಶ್ಲೇಷಣೆಗಳು ಮತ್ತು ನೆಲಮಟ್ಟದ ವರದಿಗಳು ಟಿವಿಕೆ ಸ್ವತಂತ್ರವಾಗಿ ಸ್ಪರ್ಧಿಸುವುದರಿಂದ ಚುನಾವಣೆಯ ಮನೋಭಾವವೇ ಬದಲಾಗುತ್ತಿದೆ ಎಂದು ಸೂಚಿಸುತ್ತಿವೆ.

ವಿಜಯ್ ಅವರ ಅತ್ಯಂತ ದೊಡ್ಡ ಬಲ ಯುವ ಮತದಾರರು. ಸಿನಿಮಾ ಅಭಿಮಾನಿ ಬಳಗವೇ ಈಗ ರಾಜಕೀಯ ಸ್ವಯಂಸೇವಕ ನೆಟ್‌ವರ್ಕ್ ಆಗಿ ರೂಪುಗೊಳ್ಳುತ್ತಿದೆ. ಮೊದಲ ಬಾರಿಗೆ ಮತಹಾಕುವವರು, ನಗರ ಮಧ್ಯಮವರ್ಗ, ಮತ್ತು ಪರಂಪರೆಯ ಪಕ್ಷಗಳಿಂದ ಬೇಸತ್ತ "ಪರ್ಯಾಯ" ಮತದಾರರು ಟಿವಿಕೆ ಕಡೆ ತಿರುಗುವ ಲಕ್ಷಣಗಳು ಕಾಣಿಸುತ್ತಿವೆ. ವಿಶೇಷವಾಗಿ ಚೆನ್ನೈ ಕೊಯಂಬತ್ತೂರು, ಮದುರೈ ಮತ್ತು ಇತರ ನಗರ ಕೇಂದ್ರಗಳಲ್ಲಿ ಟಿವಿಕೆ ಗೆ ಉತ್ತಮ ಸ್ಪಂದನೆ ಇದೆ ಎನ್ನುವ ವರದಿಗಳು ಬರುತ್ತಿವೆ. ಡಿಎಂಕೆ ಗೆ ನಗರ ಪ್ರದೇಶಗಳಲ್ಲಿ ಇದು ಒಂದು ಸವಾಲಾದರೂ, ಎಐಡಿಎಂಕೆ ಗೆ ಇದು ಇನ್ನೂ ದೊಡ್ಡ ಅಪಾಯ, ಯಾಕೆಂದರೆ ಡಿಎಂಕೆ ವಿರೋಧಿ ಮತದ ಒಂದು ಭಾಗ ವಿಜಯ್ ಕಡೆ ಹೋಗುವ ಸಾಧ್ಯತೆ ಹೆಚ್ಚು.

ರಾಜಕೀಯವಾಗಿ ನೋಡಿದರೆ ಟಿವಿಕೆ ಯ ಪ್ರಭಾವ "ಸ್ಪಾಯ್ಲರ್ ಪರಿಣಾಮ" ಮೂಲಕ ಹೆಚ್ಚು ಗೋಚರಿಸಬಹುದು. ಅಂದರೆ ವಿಜಯ್ ಬಹುಸಂಖ್ಯೆ ಕ್ಷೇತ್ರಗಳಲ್ಲಿ ಗೆಲ್ಲದಿದ್ದರೂ, 10–20%



ಮತಗಳನ್ನು ಸೆಳೆಯುವ ಮೂಲಕ ಎರಡನೇ ಸ್ಥಾನದಲ್ಲಿದ್ದ ಎಐಡಿಎಂಕೆ ಅಥವಾ ಕೆಲವು ಕಡೆ ಡಿಎಂಕೆ ಅಭ್ಯರ್ಥಿಗಳ ಗೆಲುವಿನ ಅಂತರವನ್ನು ಬದಲಾಯಿಸಬಹುದು.

ವಿಶೇಷವಾಗಿ ನಗರ ಮತ್ತು ಅರ್ಧನಗರ ಕ್ಷೇತ್ರಗಳಲ್ಲಿ ಕೆಲ ಸಾವಿರ ಮತಗಳ ವ್ಯತ್ಯಾಸವೇ ಫಲಿತಾಂಶವನ್ನು ತೀರ್ಮಾನಿಸುವುದರಿಂದ ಟಿವಿಕೆ ಯ ಪ್ರವೇಶ ದೊಡ್ಡ ಸಮೀಕರಣ ಬದಲಾವಣೆ ತರಬಹುದು. ಕೆಲವು ವಿಶ್ಲೇಷಣಾ ಲೇಖನಗಳು ಇದನ್ನೇ ಡಿಎಂಕೆ ಗೆ ಅಪ್ರತ್ಯಕ್ಷ ಲಾಭ, ಎಐಡಿಎಂಕೆ ಗೆ ನೇರ ನಷ್ಟ ಎಂದು ವಿವರಿಸುತ್ತಿವೆ. ಇನ್ನೊಂದು ಪ್ರಮುಖ ಅಂಶವೆಂದರೆ ವಿಜಯ್ ಅವರ ಪ್ರಚಾರ ಶೈಲಿ. ಪರಂಪರೆಯ ರಾಜಕೀಯ ಭಾಷಣಗಳ ಬದಲು, ಅವರ ಪ್ರಚಾರವು ಭಾವನಾತ್ಮಕ ಸಂಪರ್ಕ ಮತ್ತು ಸ್ಟಾರ್ ಆಕರ್ಷಣೆ ಹಾಗು ಡಿಜಿಟಲ್ ವೈರಲ್ ಮೊಬೈಲೈಸೇಶನ್ ಮೇಲೆ ಸಾಗುತ್ತಿದೆ. ಭಾರೀ ಜನಸ್ತೋಮ, ಭದ್ರತಾ ಸಮಸ್ಯೆಗಳ ಮಟ್ಟಿಗೆ ಏರಿದ ರ್ಯಾಲಿಗಳು, ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸಕ್ರಿಯ ಯುವ ಕಾರ್ಯಕರ್ತರು ಇವು ಟಿವಿಕೆಗೆ ಮನೋವೈಜ್ಞಾನಿಕ ಮುನ್ನಡೆ ನೀಡುತ್ತಿವೆ. ಮತದಾರರಲ್ಲಿ "ಈ ಬಾರಿ ಏನಾದರೂ ಹೊಸದು ಆಗಬಹುದು" ಎಂಬ ಭಾವನೆ ಸೃಷ್ಟಿಯಾಗುವುದು ಟಿವಿಕೆ ಯ ದೊಡ್ಡ ರಾಜಕೀಯ ಸಾಧನೆ. ಆದರೆ ಟಿವಿಕೆ ಯ ಸವಾಲು ಅಭಿಮಾನಿ ಅಲೆಯನ್ನು ಮತಗಳಲ್ಲಿ ಪರಿವರ್ತಿಸುವುದು. ತಮಿಳುನಾಡಿನ ಇತಿಹಾಸದಲ್ಲಿ ವಿಜಯಕಾಂತ್ ಅವರ ಡಿಎಂಡಿಕೆ ಒಂದು ಹಂತದಲ್ಲಿ ದೊಡ್ಡ ಪ್ರಭಾವ ಬೀರಿದರೂ, ಅದನ್ನು ದೀರ್ಘಕಾಲಿಕ ಸಂಘಟನೆಯಾಗಿ ಉಳಿಸಿಕೊಳ್ಳಲು ಸಾಧ್ಯವಾಗಲಿಲ್ಲ. ಅದೇ ಪಾಠ ಈಗ ವಿಜಯ್ ಎದುರಿಸುತ್ತಿದ್ದಾರೆ. ಅಭಿಮಾನಿ ನೆಟ್‌ವರ್ಕ್ ಇದ್ದರೂ, ಬೂತ್ ಮಟ್ಟದ ಸಂಘಟನೆ, ಸ್ಥಳೀಯ ಅಭ್ಯರ್ಥಿಗಳ ವಿಶ್ವಾಸಾರ್ಹತೆ, ಜಾತಿ ಸಮೀಕರಣಗಳ ಅರಿವು ಮತ್ತು ಗ್ರಾಮೀಣ ತಲುಪುವಿಕೆ ಇವು ಇನ್ನೂ ಪರೀಕ್ಷೆಯಲ್ಲಿವೆ. ಆದ್ದರಿಂದ ಟಿವಿಕೆ ಯ ನಿಜವಾದ ಯಶಸ್ಸು ಈ ಚುನಾವಣೆಯಲ್ಲಿ ಸರ್ಕಾರ ರಚನೆಗಿಂತ, ತಾನು ಮೂರನೇ ಶಕ್ತಿಯಾಗಿ ಸ್ಥಿರವಾಗಬಹುದೇ? ಎಂಬುದರಲ್ಲಿ ಅಡಕವಾಗಿದೆ.ಆಒಟ್ಟಾರೆ ವಿಜಯ್ ಅವರ ಟಿವಿಕೆ ಈ ಚುನಾವಣೆಯಲ್ಲಿ "ಕಿಂಗ್" ಆಗದಿದ್ದರೂ "ಕಿಂಗ್‌ಮೇಕರ್" ಅಥವಾ ಕನಿಷ್ಠ ಗೇಮ್ ಚೇಂಜರ್ ಆಗಿ ಹೊರಹೊಮ್ಮುವ ಸಾಧ್ಯತೆ ಬಹಳ ಹೆಚ್ಚು. ಅದು 15–20% ಮಟ್ಟದ ಮತಶೇರ್ ಪಡೆದುಕೊಂಡರೆ, ತಮಿಳುನಾಡಿನ ದ್ರಾವಿಡ ರಾಜಕೀಯದ ಹಳೆಯ ಎರಡು ಕಂಬಗಳ ಮಧ್ಯೆ ಹೊಸ ಮೂರನೇ ಕಂಬ ಸ್ಥಾಪನೆಯಾಗಬಹುದು. ಈ ಬಾರಿ ವಿಜಯ್ ಗೆಲ್ಲುತ್ತಾರೆಯೇ ಎಂಬುದಕ್ಕಿಂತ, ಅವರು ಡಿಎಂಕೆ ಮತ್ತು ಎಐಡಿಎಂಕೆ ಯುಗದ ನಂತರದ ರಾಜಕೀಯದ ಹೊಸ ಅಧ್ಯಾಯವನ್ನು ಆರಂಭಿಸುತ್ತಾರೆಯೇ? ಎಂಬುದೇ ದೊಡ್ಡ ಪ್ರಶ್ನೆ.

ಸಂಕ್ಷಿಪ್ತವಾಗಿ ಹೇಳುವುದಾದರೆ, ಮುಖ್ಯ ನೇರ ಹಣಾಹಣಿ ಡಿಎಂಕೆ ಮತ್ತು ಎಐಡಿಎಂಕೆ ನೇತೃತ್ವದ ಎನ್.ಡಿ.ಎ ನಡುವೆ ಇದೆ. ಡಿಎಂಕೆ ಆಡಳಿತದ ಕಲ್ಯಾಣ ಯೋಜನೆಗಳ ಬಲದ ಮೇಲೆ ಕಣಕ್ಕಿಳಿದರೆ, ಎಐಡಿಎಂಕೆ ವಿರೋಧಿ ಮತಗಳನ್ನು ಒಗ್ಗೂಡಿಸಿ ಗಟ್ಟಿಯಾದ ಸವಾಲು ನೀಡುತ್ತಿದೆ. ಟಿವಿಕೆ ವಿಜಯ್ ಅವರ ಪಕ್ಷ ಈ ಸಮರದಲ್ಲಿ ಮೂರನೇ ಶಕ್ತಿಯಾಗಿ ಇದ್ದರೂ, ಅದು ಹೆಚ್ಚು ಮತ ವಿಭಜನೆ ಮಾಡುವ " ವೈಲ್ಡ್ ಕಾರ್ಡ್ " ಆಗಿ ಪರಿಣಾಮ ಬೀರುವ ಸಾಧ್ಯತೆ ಇದೆ. ಹೀಗಾಗಿ ಮುಖ್ಯ ಫೈಟ್ ಡಿಎಂಕೆ ಮತ್ತು ಎನ್.ಡಿ.ಎ ಮಿತ್ರ ಕೂಟದ ಮಧ್ಯೆ ಕಂಡು ಬರುತ್ತಿದ್ದರೂ, ಟಿವಿಕೆ ಫಲಿತಾಂಶ ಬದಲಾಯಿಸುವ ಅಂಶವನ್ನು ಗಮನಿಸಬೇಕಾಗಿದೆ.

ಡಿಎಂಕೆ ನೇತೃತ್ವದ ಎಸ್.ಪಿ.ಎ ಮೈತ್ರಿ;

ಡಿಎಂಕೆ 164, ಕಾಂಗ್ರೆಸ್ 28, ಸಿಪಿಐ 6, ಸಿಪಿಐ (ಎಂ) 6, ವಿಸಿಕೆ 6,

ಎಂಡಿಎಂಕೆ 4,ಇತರೆ ಸಣ್ಣ ಮಿತ್ರಪಕ್ಷಗಳು ಒಟ್ಟು 20 ಸೇರು 234 ಸ್ಥಾನಗಳಿಗೆ ಸ್ಪರ್ಧಿಸಿದೆ.

ಎಐಡಿಎಂಕೆ ನೇತೃತ್ವದ ಎನ್.ಡಿ.ಎ ಮೈತ್ರಿ;

ಎಐಡಿಎಂಕೆ 178, ಬಿಜೆಪಿ 27, ಪಿಎಂಕೆ18, ಎಎಂಎಂಕೆ (ಟಿಟಿವಿ ಧಿನಕರನ್ ) 11 ಸೇರಿ ಒಟ್ಟು 234 ಸ್ಥಾನಗಳಲ್ಲಿ ಪೋಟಿ ಮಾಡುತ್ತಿದೆ.

ಟಿವಿಕೆ (ವಿಜಯ್) ಪಕ್ಷದಿಂದ ಬಹುತೇಕ ಸ್ವತಂತ್ರವಾಗಿ ಹೆಚ್ಚಿನ ಕ್ಷೇತ್ರಗಳಲ್ಲಿ ಸ್ಪರ್ಧಿಸುತ್ತಿದೆ, 200 ಕ್ಕೂ ಕ್ಷೇತ್ರಗಳಲ್ಲಿ ಯಾವ ಪಕ್ಷದೊಂದಿಗೆ ಮೈತ್ರಿ ಇಲ್ಲದೆ ಸ್ಪರ್ಧೆಗೆ ಇಳಿದಿದೆ.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

05/04/2026

ಭಾರತ ಸಾರಥಿ

# ಗ್ಯಾಸ್ ಹಾಹಾಕಾರ: ಏಜೆನ್ಸಿ ಮುಂದೆ 'ನೋ ಸ್ಟಾಕ್' ಬೋರ್ಡ್, ಗ್ರಾಹಕರ ಕಣ್ಣೀರು!

ಬಂಗಾರಪೇಟೆ

ತಾಲೂಕಿನಲ್ಲಿ ಗೃಹ ಬಳಕೆ ಗ್ಯಾಸ್ ಸಿಲಿಂಡರ್ ಕೊರತೆ ದಿನದಿಂದ ದಿನಕ್ಕೆ ಉಲ್ಬಣಿಸುತ್ತಿದ್ದು, ಸಾಮಾನ್ಯ ಗ್ರಾಹಕರು ಅಕ್ಷರಶಃ ಬೀದಿಗೆ ಬೀಳುವಂತಾಗಿದೆ. ಇಲ್ಲಿನ ಭಾರತ್ ಗ್ಯಾಸ್ ಏಜೆನ್ಸಿಗಳ ಮುಂದೆ ಸಿಲಿಂಡರ್‌ಗಾಗಿ ನೂರಾರು ಜನ ಮುಂಜಾನೆಯಿಂದಲೇ ಸರತಿ ಸಾಲಿನಲ್ಲಿ ನಿಲ್ಲುತ್ತಿದ್ದರೂ, ಸಿಲಿಂಡರ್ ಸಿಗದೆ ಬರಿಗೈಲಿ ಹಿಂದಿರುಗುವ ಪರಿಸ್ಥಿತಿ ನಿರ್ಮಾಣವಾಗಿದೆ.



ಬೆಳ್ಳಂಬೆಳಿಗ್ಗೆ ಸಾಲು ಸಾಲು ಜನ: ಶುಕ್ರವಾರ ಬೆಳಿಗ್ಗೆ 7 ಗಂಟೆಯ ಮೊದಲೇ ಭಾರತ್ ಗ್ಯಾಸ್ ಏಜೆನ್ಸಿ ಮುಂದೆ ಗ್ರಾಹಕರು ಜಮಾಯಿಸಿದ್ದರು. ಇವರಲ್ಲಿ ಗೃಹಿಣಿಯರು, ವಯೋವೃದ್ಧರು ಮಾತ್ರವಲ್ಲದೆ, ದಿನಗೂಲಿಗೆ ತೆರಳಬೇಕಿದ್ದ ಕಾರ್ಮಿಕರೂ ಇದ್ದರು. ದಿನದ ದುಡಿಮೆ ಬಿಟ್ಟು ಸಿಲಿಂಡರ್‌ಗಾಗಿ ಕಾಯುತ್ತಿದ್ದರೂ, ಏಜೆನ್ಸಿ ಸಿಬ್ಬಂದಿ ಮಾತ್ರ "ನೋ ಸ್ಟಾಕ್" ಎಂಬ ಪೇಪರ್ ಅಂಟಿಸಿ ಅಸಹಾಯಕತೆ ವ್ಯಕ್ತಪಡಿಸುತ್ತಿದ್ದಾರೆ. ಇದು ಗ್ರಾಹಕರ ಆಕ್ರೋಶಕ್ಕೆ ಕಾರಣವಾಗಿದೆ.

ಬುಕ್ಕಿಂಗ್ ಆದವರಿಗೂ ಇಲ್ಲ ಸಿಲಿಂಡರ್!

"ವಾರದ ಮುಂಚೆಯೇ ಬುಕ್ಕಿಂಗ್ ಮಾಡಿದ್ದರೂ ಸಿಲಿಂಡರ್ ಸಿಗುತ್ತಿಲ್ಲ. ಏಜೆನ್ಸಿಗೆ ಬಂದರೆ ಸ್ಟಾಕ್ ಇಲ್ಲ ಎನ್ನುತ್ತಾರೆ. ಮನೆಯಲ್ಲಿ ಅಡುಗೆ ಮಾಡಲು ಗ್ಯಾಸ್ ಇಲ್ಲದೆ ಹೋಟೆಲ್ ಊಟ ನೆಚ್ಚಿಕೊಳ್ಳಬೇಕಾಗಿದೆ" ಎಂದು ಸಂಕಷ್ಟಕ್ಕೊಳಗಾದ ಮಹಿಳೆಯೊಬ್ಬರು ನೋವು ತೋಡಿಕೊಂಡಿದ್ದಾರೆ. ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳು ಈ ಸಮಸ್ಯೆಯಿಂದಾಗಿ ಹೈರಾಣಾಗಿವೆ.

ಹೆಸರಿಗಷ್ಟೇ ಅಧಿಕಾರಿಗಳ ಭೇಟಿ: ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿರುವ ಅತಿ ದೊಡ್ಡ ದೂರು ಎಂದರೆ ಅದು ಅಧಿಕಾರಿಗಳ ನಿರ್ಲಕ್ಷ್ಯ. ಗ್ಯಾಸ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾದಾಗಲೆಲ್ಲಾ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಏಜೆನ್ಸಿಗೆ ಭೇಟಿ ನೀಡುತ್ತಾರೆ. ಆದರೆ, ಅದು ಕೇವಲ ಭೇಟಿ ಶಾಸ್ತ್ರಕ್ಕೆ ಮಾತ್ರ ಸೀಮಿತವಾಗುತ್ತಿದೆ ಎಂಬ ಟೀಕೆ ವ್ಯಕ್ತವಾಗಿದೆ.

"ಜನರಿಂದ ದೂರು ಬಂದಾಗ ಅಧಿಕಾರಿಗಳು ಬರುತ್ತಾರೆ, ಸೂಚನೆ ನೀಡಿದಂತೆ ನಟಿಸುತ್ತಾರೆ, ನಂತರ ಮಾಯವಾಗುತ್ತಾರೆ. ಸಮಸ್ಯೆಗೆ ಶಾಶ್ವತ ಪರಿಹಾರ ಮಾತ್ರ ಮರೀಚಿಕೆಯಾಗಿದೆ" ಎಂದು ಸ್ಥಳೀಯರು ಆರೋಪಿಸಿದ್ದಾರೆ.


ಯುದ್ಧದ ನೆಪ, ಜನರಿಗೆ ತಾಪ: ಜಾಗತಿಕ ಮಟ್ಟದ ಯುದ್ಧದ ಸನ್ನಿವೇಶಗಳಿಂದ ಪೂರೈಕೆಯಲ್ಲಿ ವ್ಯತ್ಯಯವಾಗಿದೆ ಎಂಬ ಸಬೂಬುಗಳನ್ನು ನೀಡಲಾಗುತ್ತಿದೆ. ಆದರೆ, ನೆರೆಯ ತಾಲ್ಲೂಕುಗಳಲ್ಲಿ ಇಲ್ಲದ ಸಮಸ್ಯೆ ಬಂಗಾರಪೇಟೆಯಲ್ಲಿ ಮಾತ್ರ ಏಕೆ ಪದೇ ಪದೇ ಮರುಕಳಿಸುತ್ತಿದೆ ಎಂಬುದು ಸಾರ್ವಜನಿಕರ ಪ್ರಶ್ನೆಯಾಗಿದೆ.

ನಾಗರಿಕರ ಆಗ್ರಹ: ಜಿಲ್ಲಾಡಳಿತ ಹಾಗೂ ಆಹಾರ ಇಲಾಖೆಯು ಈ ಕೂಡಲೇ ಮಧ್ಯಪ್ರವೇಶಿಸಿ, ಗ್ಯಾಸ್ ಏಜೆನ್ಸಿಗಳಿಗೆ ಸಮರ್ಪಕ ಸ್ಟಾಕ್ ಪೂರೈಸಲು ಕ್ರಮ ಕೈಗೊಳ್ಳಬೇಕು. ಬುಕ್ಕಿಂಗ್ ಮಾಡಿದ ತಕ್ಷಣ ಮನೆಬಾಗಿಲಿಗೆ ಸಿಲಿಂಡರ್ ತಲುಪುವಂತೆ ಕಟ್ಟುನಿಟ್ಟಿನ ನಿಯಮ ಜಾರಿಗೊಳಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ದೊಡ್ಡಬಳ್ಳಾಪುರ ನಗರಸಭೆಗೆ ರೂ. 1.62 ಕೋಟಿ ಉಳಿತಾಯ ಬಜೆಟ್

ದೊಡ್ಡಬಳ್ಳಾಪುರ

ನಗರಸಭೆ ಅಧ್ಯಕ್ಷೆ ಕೆ. ಸುಮಿತ್ರಾ ಅವರು ಮಂಗಳವಾರ 2026– 27ನೇ ಸಾಲಿನ ರೂ. 1.62 ಕೋಟಿ ಉಳಿತಾಯದ ಬಜೆಟ್ ಮಂಡಿಸಿದ್ದಾರೆ. ಒಟ್ಟು ರೂ. 87.83 ಕೋಟಿ ಆದಾಯದ ನಿರೀಕ್ಷೆಯೊಂದಿಗೆ, ರೂ. 86.20 ಕೋಟಿ ವೆಚ್ಚದ ಅಂದಾಜನ್ನು ಪಟ್ಟಿಯಲ್ಲಿ ವಿವರಿಸಲಾಗಿದೆ. ನಗರದ ಸ್ವಂತ ಆದಾಯದಿಂದ ರೂ.22.15 ಕೋಟಿ ಹಾಗೂ ಕೇಂದ್ರ–ರಾಜ್ಯ ಸರ್ಕಾರಗಳ ಅನುದಾನದಿಂದ ರೂ. 56.87 ಕೋಟಿ ಕ್ರೋಢೀಕರಿಸುವ ಗುರಿ ಹೊಂದಲಾಗಿದೆ.



ಸ್ವಚ್ಛತೆ ಮತ್ತು ಪರಿಸರಕ್ಕೆ ಹೆಚ್ಚಿನ ಒತ್ತು: ನಗರವನ್ನು ಪ್ಲಾಸ್ಟಿಕ್ ಮುಕ್ತಗೊಳಿಸಲು ಮತ್ತು ಉದ್ಯಾನವನಗಳ ಅಭಿವೃದ್ಧಿಗಾಗಿ ರೂ. 2 ಕೋಟಿ ಮೀಸಲಿಡಲಾಗಿದೆ. ಘನತ್ಯಾಜ್ಯ ನಿರ್ವಹಣೆ ಮತ್ತು ನೈರ್ಮಲ್ಯ ಕಾಮಗಾರಿಗಳಿಗಾಗಿ ರೂ. 4.10 ಕೋಟಿ ನಿಗದಿಪಡಿಸಲಾಗಿದ್ದು, ವಡ್ಡರಪಾಳ್ಯದಲ್ಲಿ ಸಂಗ್ರಹವಾಗಿರುವ 46,000 ಟನ್ ಪಾರಂಪರಿಕ ತ್ಯಾಜ್ಯ ವಿಲೇವಾರಿಗೆ ರೂ. 4.77 ಕೋಟಿ ಅನುದಾನ ಮೀಸಲಿರಿಸಲಾಗಿದೆ.

ಮೂಲಸೌಕರ್ಯ ಮತ್ತು ಡಿಜಿಟಲ್ ಕಣ್ಗಾವಲು:

ನಳ ಸಂಪರ್ಕ: ಅಮೃತ 2.0 ಯೋಜನೆಯಡಿ ಮುಂದಿನ ಎರಡು ವರ್ಷಗಳಲ್ಲಿ 10,000 ಮನೆಗಳಿಗೆ ಕುಡಿಯುವ ನೀರಿನ ನಳ ಸಂಪರ್ಕ ಒದಗಿಸಲು ರೂ. 10 ಕೋಟಿ ವೆಚ್ಚ ಮಾಡಲಾಗುವುದು.

ಸಿಸಿಟಿವಿ ಕಣ್ಗಾವಲು: ಎಲ್ಲೆಂದರಲ್ಲಿ ಕಸ ಸುರಿಯುವುದನ್ನು ತಡೆಯಲು ಮತ್ತು ಅಪರಾಧ ಚಟುವಟಿಕೆಗಳ ನಿಯಂತ್ರಣಕ್ಕಾಗಿ ನಗರದ ಪ್ರಮುಖ ಸ್ಥಳಗಳಲ್ಲಿ 100 ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗುವುದು.

ಸೌರಶಕ್ತಿ: ನಗರಸಭೆ ಕಚೇರಿ ಹಾಗೂ ಡಾ. ರಾಜ್‌ಕುಮಾರ್ ಕಲಾಮಂದಿರದ ಮೇಲೆ ಸೋಲಾರ್ ಅಳವಡಿಸಲು ರೂ. 60 ಲಕ್ಷ ಮೀಸಲಿಡಲಾಗಿದೆ.

ಮಾರುಕಟ್ಟೆ ಮತ್ತು ಸಮುದಾಯ ಅಭಿವೃದ್ಧಿ: ಕೆ.ಆರ್. ಮಾರುಕಟ್ಟೆಯಲ್ಲಿ ಮಳಿಗೆಗಳ ನಿರ್ಮಾಣಕ್ಕೆ ರೂ. 3 ಕೋಟಿ, ಸ್ಮಾರ್ಟ್ ಮಾರುಕಟ್ಟೆ ಮತ್ತು ಫುಡ್ ಕೋರ್ಟ್‌ಗಳ ನಿರ್ಮಾಣಕ್ಕೆ ರೂ. 3 ಕೋಟಿ ಹಾಗೂ ನೇಕಾರರ ಭವನ ನಿರ್ಮಾಣಕ್ಕೆ ರೂ. 10 ಲಕ್ಷ ಅನುದಾನ ಘೋಷಿಸಲಾಗಿದೆ. ಇದರೊಂದಿಗೆ ಒಳಚರಂಡಿ ನೀರು ಸಂಸ್ಕರಣಾ ಘಟಕ ನಿರ್ಮಾಣಕ್ಕೆ ರೂ. 4.77 ಕೋಟಿ ಮತ್ತು ಭೂಸ್ವಾಧೀನಕ್ಕಾಗಿ ರೂ. 2.50 ಕೋಟಿ ಕಾಯ್ದಿರಿಸಲಾಗಿದೆ.

ಬಜೆಟ್ ಕುರಿತು ಮಿಶ್ರ ಪ್ರತಿಕ್ರಿಯೆ:

ಬಜೆಟ್ ಕುರಿತು ನಗರಸಭೆಯ ಸದಸ್ಯರಿಂದ ಭಿನ್ನಾಭಿಪ್ರಾಯಗಳು ವ್ಯಕ್ತವಾಗಿವೆ.

ನಮ್ಮ ವಾರ್ಡ್ ಅಭಿವೃದ್ಧಿಗೆ ಶೇ. 24.10 ರಷ್ಟು ಅನುದಾನದಲ್ಲಿ ಹೆಚ್ಚಿನ ಹಣ ಬಿಡುಗಡೆ ಮಾಡಿ ಸಹಕರಿಸಬೇಕು ಎಂದು ಕಾಂಗ್ರೆಸ್ ಸದಸ್ಯೆ ರೂಪಿಣಿ ಮಂಜುನಾಥ್ ಹೇಳಿದರು.

ಇದು ವಾಸ್ತವಕ್ಕೆ ದೂರವಾದ ಮತ್ತು ದೂರದೃಷ್ಟಿ ಇಲ್ಲದ ಬಜೆಟ್. ಹಿಂದಿನ ವರ್ಷದ ಘೋಷಣೆಗಳೇ ಇನ್ನೂ ಜಾರಿಯಾಗಿಲ್ಲ ಎಂದು ಕಾಂಗ್ರೆಸ್ ಸದಸ್ಯ ಚಂದ್ರಮೋಹನ್ ತಿಳಿಸಿದರು.

87 ಕೋಟಿ ಮೊತ್ತದ ಬಜೆಟ್ ತೃಪ್ತಿಕರವಾಗಿದೆ. ತೆರಿಗೆಯನ್ನು ಸಮರ್ಪಕವಾಗಿ ಸಂಗ್ರಹಿಸಿ ಅಭಿವೃದ್ಧಿಗೆ ಬಳಸಬೇಕು ಉಪಾಧ್ಯಕ್ಷರು ಮಲ್ಲೇಶ್ ಹೇಳಿದರು.

ಬಜೆಟ್ ಮಂಡನೆಗೂ ಮುನ್ನ ಅಧ್ಯಕ್ಷೆ ಸುಮಿತ್ರಾ ಅವರು ಸದಸ್ಯರೊಂದಿಗೆ ಪ್ರತಿಯನ್ನು ಪ್ರದರ್ಶಿಸಿದರು. ಸಭೆಯಲ್ಲಿ ಪೌರಾಯುಕ್ತ ಕಾರ್ತಿಕೇಶ್ವರ ಹಾಗೂ ನಗರಸಭೆಯ ಬಹುತೇಕ ಸದಸ್ಯರು ಉಪಸ್ಥಿತರಿದ್ದರು.

## 'ದೊಡ್ಡಗೌಡರ ಹುಟ್ಟುಹಬ್ಬಕ್ಕೆ ಎನ್‌ಡಿಎ ಮೈತ್ರಿಕೂಟದಿಂದ ಬೃಹತ್ ಆಚರಣೆಗೆ ಸಿದ್ಧತೆ'

ಕನಕಪುರ

ಕನ್ನಡನಾಡಿನ ಹೆಮ್ಮೆಯ ಪುತ್ರ, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ 94ನೇ ವರ್ಷದ ಹುಟ್ಟುಹಬ್ಬವನ್ನು ಈ ಬಾರಿ ಕನಕಪುರ ತಾಲ್ಲೂಕಿನಲ್ಲಿ ಅತ್ಯಂತ ಅದ್ದೂರಿಯಾಗಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಎನ್‌ಡಿಎ ಮೈತ್ರಿ ಪಕ್ಷಗಳ ಮುಖಂಡರು ಹಾಗೂ ಕಾರ್ಯಕರ್ತರು ನಿರ್ಧರಿಸಿದ್ದಾರೆ.

ನಗರದ ಹೊರವಲಯದ ಶಿವನಹಳ್ಳಿ ಬಳಿಯ ಖಾಸಗಿ ರೆಸಾರ್ಟ್‌ನಲ್ಲಿ ನಡೆದ ಜೆಡಿಎಸ್ ಮತ್ತು ಬಿಜೆಪಿ ಮುಖಂಡರ ಪೂರ್ವಭಾವಿ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ. ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಬಿ. ನಾಗರಾಜು ಸಭೆಯ ಅಧ್ಯಕ್ಷತೆ ವಹಿಸಿ ಆಚರಣೆಯ ರೂಪುರೇಷೆಗಳನ್ನು ಹಂಚಿಕೊಂಡರು.

ತಾಲ್ಲೂಕು ಕ್ರೀಡಾಂಗಣದಲ್ಲಿ ಸಂಭ್ರಮದ ಸಾರಥ್ಯ: ನಗರದ ತಾಲ್ಲೂಕು ಕ್ರೀಡಾಂಗಣದಲ್ಲಿ ಸತತ ಮೂರು ದಿನಗಳ ಕಾಲ ಈ ಸಂಭ್ರಮಾಚರಣೆ ನಡೆಯಲಿದೆ. ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಆರೋಗ್ಯ ಶಿಬಿರ, ಕ್ರೀಡಾಕೂಟ ಹಾಗೂ ಕಲ್ಯಾಣ ಉತ್ಸವಗಳನ್ನು ಆಯೋಜಿಸಲಾಗಿದೆ. ಇದರೊಂದಿಗೆ ಜನಮನ ರಂಜಿಸಲು ರಸಮಂಜರಿ ಕಾರ್ಯಕ್ರಮವನ್ನೂ ಹಮ್ಮಿಕೊಳ್ಳಲಾಗಿದೆ. ಈ ಸಂದರ್ಭದಲ್ಲಿ ಇನ್ಫೋಸಿಸ್ ಫೌಂಡೇಶನ್‌ನ ಸುಧಾಮೂರ್ತಿ ಸೇರಿದಂತೆ ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಲು ನಿರ್ಧರಿಸಲಾಗಿದೆ.

ರಾಷ್ಟ್ರ ಮಟ್ಟದ ನಾಯಕರ ದಂಡು: ಈ ಜನ್ಮದಿನಾಚರಣೆಯನ್ನು ರಾಷ್ಟ್ರೀಯ ಮಟ್ಟದ ಉತ್ಸವವನ್ನಾಗಿ ರೂಪಿಸಲು ಮೈತ್ರಿಕೂಟ ಸಜ್ಜಾಗಿದೆ. ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರೊಂದಿಗೆ ಚರ್ಚಿಸಿ ದಿನಾಂಕ ನಿಗದಿಪಡಿಸಲಾಗುವುದು. ಸಮಾರಂಭಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಸೇರಿದಂತೆ ರಾಜ್ಯ ಮತ್ತು ರಾಷ್ಟ್ರ ಮಟ್ಟದ ಹಲವು ಗಣ್ಯರನ್ನು ಆಹ್ವಾನಿಸಲಾಗುವುದು ಎಂದು ರಾಜ್ಯ ಯುವ ಜನತಾದಳ ಉಪಾಧ್ಯಕ್ಷ ಚಿನ್ನಸ್ವಾಮಿ ತಿಳಿಸಿದರು.

ಪಕ್ಷ ಸಂಘಟನೆಗೆ ಒತ್ತು: ಕೇವಲ ಆಚರಣೆಯಷ್ಟೇ ಅಲ್ಲದೆ, ತಳಮಟ್ಟದಲ್ಲಿ ಪಕ್ಷವನ್ನು ಬಲಪಡಿಸಲು ಈ ವೇದಿಕೆಯನ್ನು ಬಳಸಿಕೊಳ್ಳಲಾಗುತ್ತಿದೆ.

ಬೂತ್ ಏಜೆಂಟ್ ನೇಮಕ: ತಾಲ್ಲೂಕಿನ 299 ಬೂತ್‌ಗಳಿಗೆ ಏಜೆಂಟ್‌ಗಳ ನೇಮಕ.

ಪಟ್ಟಿಯಲ್ಲಿರುವ ಲೋಪದೋಷಗಳನ್ನು ಸರಿಪಡಿಸಲು ಕಾರ್ಯಕರ್ತರಿಗೆ ಸೂಚನೆ.

ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಒಟ್ಟಾಗಿ ಕೆಲಸ ಮಾಡುವ ಮೂಲಕ ಮೈತ್ರಿಯನ್ನು ಗಟ್ಟಿಗೊಳಿಸಲು ಈ ಸಭೆಯಲ್ಲಿ ಕರೆ ನೀಡಲಾಯಿತು. ಸಭೆಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಜಯಮುತ್ತು, ಬಿಜೆಪಿ ತಾಲ್ಲೂಕು ಅಧ್ಯಕ್ಷ ಕೆ.ಪಿ. ಕುಮಾರ್, ನಗರಾಧ್ಯಕ್ಷ ಕೋಟೆ ಮಂಜು ಸೇರಿದಂತೆ ನೂರಾರು ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿ ತಮ್ಮ ಸಲಹೆಗಳನ್ನು ನೀಡಿದರು.

## ಮಾಲೂರು ಕಾಲೇಜಿಗೆ ಪವರ್‌ಲಿಫ್ಟಿಂಗ್ ಟೀಂ ಚಾಂಪಿಯನ್ ಕಿರೀಟ



ಮಾಲೂರು

ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಆಯೋಜಿಸಿದ್ದ ಅಂತರ ಕಾಲೇಜು ಪುರುಷರ ಮತ್ತು ಮಹಿಳೆಯರ ಪವರ್‌ಲಿಫ್ಟಿಂಗ್ ಸ್ಪರ್ಧೆಯಲ್ಲಿ ಮಾಲೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಅಭೂತಪೂರ್ವ ಸಾಧನೆ ಮಾಡಿದ್ದಾರೆ. ಮಹಿಳಾ ವಿಭಾಗದಲ್ಲಿ ಕಾಲೇಜಿನ ವಿದ್ಯಾರ್ಥಿನಿಯರು ಭರ್ಜರಿ ಪದಕ ಬೇಟೆಯಾಡುವ ಮೂಲಕ 'ಟೀಂ ಚಾಂಪಿಯನ್' ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ.

ಪದಕಗಳ ವಿವರ: ಕಾಲೇಜಿನಿಂದ ಭಾಗವಹಿಸಿದ್ದ ಎಲ್ಲಾ ಆರು ವಿದ್ಯಾರ್ಥಿನಿಯರು ಪದಕ ಗೆಲ್ಲುವ ಮೂಲಕ ಶೇ. 100ರಷ್ಟು ಸಾಧನೆ ಮಾಡಿರುವುದು ಈ ಬಾರಿಯ ವಿಶೇಷ.

ಮಹಿಳಾ ವಿಭಾಗ: 1 ಚಿನ್ನದ ಪದಕ, 4 ಬೆಳ್ಳಿ ಪದಕ ಹಾಗೂ 1 ಕಂಚಿನ ಪದಕ.

ಪುರುಷರ ವಿಭಾಗ: 2 ಕಂಚಿನ ಪದಕಗಳು.

ಒಟ್ಟಾರೆಯಾಗಿ ಕಾಲೇಜಿನ ಕ್ರೀಡಾಪಟುಗಳು ವಿಶ್ವವಿದ್ಯಾಲಯ ಮಟ್ಟದಲ್ಲಿ ತಮ್ಮ ಶಕ್ತಿಯನ್ನು ಪ್ರದರ್ಶಿಸಿ ಕಾಲೇಜಿನ ಕೀರ್ತಿ ಪತಾಕೆಯನ್ನು ಹಾರಿಸಿದ್ದಾರೆ.

ಗ್ರಾಮೀಣ ಪ್ರತಿಭೆಗಳಿಗೆ ತರಬೇತಿಯ ಫಲ: ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕರಾದ ಡಾ. ರವೀಂದ್ರನಾಥ್ ಅವರು ಗ್ರಾಮೀಣ ಭಾಗದ ಈ ವಿದ್ಯಾರ್ಥಿಗಳನ್ನು ಗುರುತಿಸಿ, ಅವರಿಗೆ ವಿಶೇಷ ತರಬೇತಿ ನೀಡುವ ಮೂಲಕ ಈ ಸಾಧನೆಗೆ ನಾಂದಿ ಹಾಡಿದ್ದಾರೆ. ಕ್ರೀಡಾಪಟುಗಳ ಕಠಿಣ ಪರಿಶ್ರಮ ಮತ್ತು ತರಬೇತುದಾರರ ಮಾರ್ಗದರ್ಶನದಿಂದಾಗಿ ಇಂದು ಕಾಲೇಜಿಗೆ ಚಾಂಪಿಯನ್ ಪಟ್ಟ ಲಭಿಸಿದೆ ಎಂದು ಪ್ರಾಂಶುಪಾಲರು ಹರ್ಷ ವ್ಯಕ್ತಪಡಿಸಿದ್ದಾರೆ.

ಅಭಿನಂದನಾ ಮಹಾಪೂರ: ಪದಕ ವಿಜೇತ ವಿದ್ಯಾರ್ಥಿಗಳಾದ ಅರುಣ್, ಅಮೂಲ್ಯ, ರೇಖಶ್ರೀ, ವರ್ಷಿಣಿ, ಜೀವಿತ, ವಿನುತ, ಪ್ರೀತಿ ಮತ್ತು ಕಲ್ಯಾಣ್ ಅವರನ್ನು ಕಾಲೇಜು ಅಭಿವೃದ್ಧಿ ಸಮಿತಿ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

ಈ ಸಂದರ್ಭದಲ್ಲಿ ಪ್ರಾಂಶುಪಾಲ ಜಿ. ಅಶ್ವಥನಾರಾಯಣ, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಆಂಜಿನಪ್ಪ, ಉಪನ್ಯಾಸಕರಾದ ಪ್ರೊ. ಶ್ರೀಧರ್, ವರಲಕ್ಷ್ಮಿ, ಡಾ. ಸೋಮಶೇಖರ್, ಪ್ರೊ. ವೇಣುಗೋಪಾಲ್ ಸೇರಿದಂತೆ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಕ್ರೀಡಾಪಟುಗಳ ಬೆನ್ನುತಟ್ಟಿದ್ದಾರೆ.

## ಜನಗಣತಿ ಪರ್ವ ಆರಂಭ: 15ರವರೆಗೆ ಸ್ವಯಂ ಗಣತಿಗೆ ಕಾಲಾವಕಾಶ

ಬಂಗಾರಪೇಟೆ

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ರಾಷ್ಟ್ರೀಯ ಜನಗಣತಿ ಕಾರ್ಯಕ್ರಮವು ತಾಲ್ಲೂಕಿನಲ್ಲಿ ಏಪ್ರಿಲ್ 1 ರಿಂದ ಚಾಲನೆ ಪಡೆದಿದ್ದು, ಈ ಸಂಬಂಧ ಅಗತ್ಯವಿರುವ ಎಲ್ಲಾ ಸಿದ್ಧತೆಗಳನ್ನು ಪೂರ್ಣಗೊಳಿಸಲಾಗಿದೆ ಎಂದು ತಹಶೀಲ್ದಾರ್ ಸುಜಾತಾ ತಿಳಿಸಿದ್ದಾರೆ.

ತಾಲ್ಲೂಕು ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಜನಗಣತಿಯು ರಾಷ್ಟ್ರದ ಅಭಿವೃದ್ಧಿ ಹಾಗೂ ಭವಿಷ್ಯದ ಯೋಜನೆಗಳನ್ನು ರೂಪಿಸಲು ಅತ್ಯಂತ ಪ್ರಮುಖವಾಗಿದೆ. ಹೀಗಾಗಿ ಸಾರ್ವಜನಿಕರು ನಿಖರ ಮಾಹಿತಿ ನೀಡುವ ಮೂಲಕ ಈ ರಾಷ್ಟ್ರೀಯ ಕಾರ್ಯಕ್ರಮಕ್ಕೆ ಸಹಕರಿಸಬೇಕು ಎಂದು ಕೋರಿದರು. ಇದೇ 1 ರಿಂದ 15 ರವರೆಗೆ ಸಾರ್ವಜನಿಕರು ಆನ್‌ಲೈನ್ ಪೋರ್ಟಲ್ ಮೂಲಕ ತಮ್ಮ ಕುಟುಂಬದ ಮಾಹಿತಿಯನ್ನು ಸ್ವಯಂ ಘೋಷಿತವಾಗಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಈ ಅವಧಿಯ ನಂತರ ಗಣತಿದಾರರು ನೇರವಾಗಿ ಮನೆಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಿದ್ದಾರೆ ಎಂದು ಅವರು ವಿವರಿಸಿದರು. ತಾಲ್ಲೂಕಿನಾದ್ಯಂತ ಜನಗಣತಿ ಕಾರ್ಯವನ್ನು ವ್ಯವಸ್ಥಿತವಾಗಿ ನಡೆಸಲು ಒಟ್ಟು 395 ಬ್ಲಾಕ್‌ಗಳನ್ನು ರಚಿಸಲಾಗಿದೆ. ಈ ಬೃಹತ್ ಕಾರ್ಯಕ್ಕಾಗಿ 291 ಗಣತಿದಾರರು ಹಾಗೂ 45 ಮೇಲ್ವಿಚಾರಕರನ್ನು ನೇಮಕ ಮಾಡಲಾಗಿದ್ದು, ಅವರಿಗೆ ಈಗಾಗಲೇ ಅಗತ್ಯ ತರಬೇತಿ ನೀಡಲಾಗಿದೆ. ಸಾರ್ವಜನಿಕರು ನೀಡುವ ಪ್ರತಿಯೊಂದು ಮಾಹಿತಿಯು ಸಂಪೂರ್ಣವಾಗಿ ಗೋಪ್ಯವಾಗಿರುತ್ತದೆ. ಇದನ್ನು ಕೇವಲ ಸರ್ಕಾರದ ಯೋಜನೆಗಳ ರೂಪರೇಷೆ ಸಿದ್ಧಪಡಿಸಲು ಮಾತ್ರ ಬಳಸಲಾಗುತ್ತದೆ. ಮನೆಗೆ ಬರುವ ಗಣತಿದಾರರು ಅಧಿಕೃತ ಗುರುತಿನ ಚೀಟಿ ಹೊಂದಿರುತ್ತಾರೆ. ಸಾರ್ವಜನಿಕರು ಯಾವುದೇ ಆತಂಕವಿಲ್ಲದೆ ನಿಖರ ಮಾಹಿತಿ ನೀಡಿ ಸಹಕರಿಸಬೇಕು ಎಂದು ತಹಶೀಲ್ದಾರ್ ಸುಜಾತಾ ಸ್ಪಷ್ಟಪಡಿಸಿದರು.



ಕನಕಪುರ ತಾಲ್ಲೂಕಿನ ಉಯಂಬಳ್ಳಿ ಹೋಬಳಿಯ ಮುಳ್ಳಹಳ್ಳಿ ಗ್ರಾಮದ ನಿವಾಸಿ, ಪೊಲೀಸ್ ಇನ್ಸ್‌ಪೆಕ್ಟರ್ ಹಾಗೂ ವಿಧಾನಸಭಾ ಸಚಿವಾಲಯದ ಸಹಾಯಕ ದಂಡಾಧಿಕಾರಿ ಎ.ಬಿ. ಶಿವಕುಮಾರ್ ಅವರು ರಾಜ್ಯ ಸರ್ಕಾರದ ಪ್ರತಿಷ್ಠಿತ 'ಮುಖ್ಯಮಂತ್ರಿ ಪದಕ'ಕ್ಕೆ ಭಾಜನರಾದರು.

# ರೇಣುಕಾ ಯಲ್ಲಮ್ಮ ದೇವಿಯ ಹೂವಿನ ಕರಗ ಮಹೋತ್ಸವ

ವಿಜಯಪುರ

ಪಟ್ಟಣದ ಅಧಿದೇವತೆ ಶ್ರೀ ರೇಣುಕಾ ಯಲ್ಲಮ್ಮ ದೇವಿಯ 87ನೇ ವರ್ಷದ ಹೂವಿನ ಕರಗ ಮಹೋತ್ಸವವು ಬುಧವಾರ ರಾತ್ರಿ ಅತ್ಯಂತ ವಿಜೃಂಭಣೆಯಿಂದ ನೆರವೇರಿತು. ಸಹಸ್ರಾರು ಭಕ್ತರ ಸಮ್ಮುಖದಲ್ಲಿ ನಡೆದ ಈ ಉತ್ಸವದಲ್ಲಿ ಧಾರ್ಮಿಕ ವಿಧಿವಿಧಾನಗಳ ಜೊತೆಗೆ ಸಾಂಸ್ಕೃತಿಕ ವೈಭವ ಮೇಳೈಸಿತ್ತು.

ಮಹೋತ್ಸವದ ಅಂಗವಾಗಿ ದೀಪಾರತಿಗಳ ಅಗ್ನಿಕುಂಡ ಪ್ರವೇಶ ಭಕ್ತರಲ್ಲಿ ಮೈ ನವಿರೇಳಿಸಿತು. ಮೆರವಣಿಗೆಯಲ್ಲಿ ಕೀಲುಕುದುರೆ, ಸಾರಕ್ಕಿ ವೇಷ, ಗಾರುಡಿ ಗೊಂಬೆ, ನವಿಲು ಕುಣಿತ, ಚಾರ್ಲಿ ಪ್ರದರ್ಶನ ಹಾಗೂ ಬ್ಯಾಂಡ್ ಸೆಟ್ ವಾದನಗಳು ವಿಶೇಷ ಆಕರ್ಷಣೆಯಾಗಿದ್ದವು. ಮಹಿಳೆಯರು ಮತ್ತು ಯುವತಿಯರು ಬಣ್ಣ ಬಣ್ಣದ ಹೂವು ಹಾಗೂ ವಿದ್ಯುತ್ ದೀಪಗಳಿಂದ ಅಲಂಕೃತಗೊಂಡ ದೀಪಾರತಿಗಳನ್ನು ಹೊತ್ತು ತಂದು ದೇವರಿಗೆ ಸಮರ್ಪಿಸಿದರು.

ಗುರುವಾರ ಮುಂಜಾನೆ 1ಗಂಟೆಗೆ ಕರಗ ಹೊತ್ತ ಪೂಜಾರಿ ದೇವರಾಜ್ ಅವರು ಕೊರವಂಜಿ ಹಾಡಿಗೆ ಹೆಜ್ಜೆ ಹಾಕುತ್ತಾ ದೇವಾಲಯದ ಪ್ರದಕ್ಷಿಣೆ ಹಾಕಿದರು.



ನಂತರ ಗಂಗಾತಾಯಿ ದೇವಾಲಯದ ಬಳಿಯಿರುವ ಜಾಮೀಯಾ ಮಸೀದಿಗೆ ತೆರಳಿ ನಮಿಸುವ ಮೂಲಕ ಭಾವೈಕ್ಯತೆಯ ಸಂದೇಶ ಸಾರಿದರು. ಗಾಂಧಿ ಚೌಕ, ಬಸ್ ನಿಲ್ದಾಣ, ಟೌನ್ ಹಾಲ್ ಸರ್ಕಲ್, ಕೋಲಾರ ರಸ್ತೆ, ದೇವನಹಳ್ಳಿ ರಸ್ತೆ ಸೇರಿದಂತೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಕರಗ ಸಂಚರಿಸಿತು. ವೀರಕುಮಾರರು 'ಗೋವಿಂದ' ನಾಮಸ್ಮರಣೆಯೊಂದಿಗೆ ಅಲಗು ಸೇವೆ ಮಾಡುತ್ತಾ ಕರಗವನ್ನು ಹಿಂಬಾಲಿಸಿದರು. ಹಾದಿಯುದ್ದಕ್ಕೂ ಇಲ್ಲಿನ ಭಕ್ತರು ರಂಗೋಲಿ ಬಿಡಿಸಿ, ಮಲ್ಲಿಗೆ ಹೂಗಳನ್ನು ಎರಚಿ ಪೂಜೆ ಸಲ್ಲಿಸಿದರು. ಗುರುವಾರ ಬೆಳಿಗ್ಗೆ 11 ಗಂಟೆಗೆ ಕರಗವು ದೇವಾಲಯಕ್ಕೆ ಮರಳಿ ಸಂಪನ್ನಗೊಂಡಿತು.

# ಬಡವರ ಪೆನ್ಷನ್ ಮತ್ತು ರೇಷನ್ ಕಾರ್ಡ್ ಕಡಿತ ಖಂಡನೀಯ

ಬಂಗಾರಪೇಟೆ



ಕೋಲಾರ ಜಿಲ್ಲೆಯಾದ್ಯಂತ ಸಾವಿರಾರು ಮಂದಿ ವಿಧವೆಯರು, ವೃದ್ಧರು ಹಾಗೂ ಅಂಗವಿಕಲರಿಗೆ ನೀಡಲಾಗುತ್ತಿದ್ದ ಪೆನ್ಷನ್ ಅನ್ನು ರಾಜ್ಯ ಸರ್ಕಾರ ಕಡಿತಗೊಳಿಸಿರುವುದು ಅತ್ಯಂತ ಖಂಡನೀಯ ಮತ್ತು ಅಮಾನವೀಯ ಕ್ರಮ ಎಂದು ರೈತ ಸಂಘದ ರಾಜ್ಯ ಮುಖಂಡ ಮರಗಲ್ ಶ್ರೀನಿವಾಸ್ ತೀವ್ರವಾಗಿ ಕಿಡಿಕಾರಿದ್ದಾರೆ.

ಬಂಗಾರಪೇಟೆ ತಾಲ್ಲೂಕಿನಲ್ಲಿ ಸಾವಿರಾರು ಬಡ ಕುಟುಂಬಗಳು ಸರ್ಕಾರ ನೀಡುವ ವೃದ್ಧಾಪ್ಯ, ವಿಧವಾ ಮತ್ತು ಅಂಗವಿಕಲ ವೇತನವನ್ನೇ ನಂಬಿ ಜೀವನ ಸಾಗಿಸುತ್ತಿವೆ. ಇಂತಹ ದುರ್ಬಲ ವರ್ಗದವರ ಜೀವನಾಧಾರವಾಗಿರುವ ಪೆನ್ಷನ್ ಹಣವನ್ನು ಕಡಿತಗೊಳಿಸುವ ಮೂಲಕ ಸರ್ಕಾರ ಬಡವರ ಹೊಟ್ಟೆಗೆ ತಣ್ಣೀರಿನ ಬಟ್ಟೆ ಎಳೆದಿದೆ ಎಂದು ಅವರು ಆರೋಪಿಸಿದರು.

ಸರ್ಕಾರದ ದ್ವಂದ್ವ ನೀತಿಯನ್ನು ಪ್ರಶ್ನಿಸಿದ ಶ್ರೀನಿವಾಸ್, "ಬಡವರ ಪೆನ್ಷನ್ ಕಡಿತಗೊಳಿಸುವಲ್ಲಿ ತೋರುತ್ತಿರುವ ಕಠಿಣತೆ ಜನಪ್ರತಿನಿಧಿಗಳ ವಿಷಯದಲ್ಲಿ ಏಕಿಲ್ಲ? ಶಾಸಕರು, ಸಂಸದರು ಮತ್ತು ಮಾಜಿ ಜನಪ್ರತಿನಿಧಿಗಳ ಭತ್ಯೆ, ಪೆನ್ಷನ್ ಹಾಗೂ ಅನಗತ್ಯ ವೆಚ್ಚಗಳಿಗೆ ಕೋಟ್ಯಂತರ ರೂಪಾಯಿ ಖರ್ಚು ಮಾಡುತ್ತಿರುವ ಸರ್ಕಾರಕ್ಕೆ, ಬಡವರಿಗೆ ನೀಡುವ ಅಲ್ಪ ಮೊತ್ತದ ಪೆನ್ಷನ್ ಮಾತ್ರ ಭಾರವಾಗುತ್ತಿರುವುದು ವಿಷಾದನೀಯ," ಎಂದು ಮಾರ್ಮಿಕವಾಗಿ ನುಡಿದರು.

"ರಾಜಕಾರಣಿಗಳ ಸಂಬಳ, ಸೌಲಭ್ಯಗಳು ಹಾಗೂ ಸರ್ಕಾರದ ಯೋಜನೆಗಳು ನಡೆಯುತ್ತಿರುವುದು ಬಡವರು, ರೈತರು ಮತ್ತು ಕೂಲಿ ಕಾರ್ಮಿಕರು ನೀಡುವ ತೆರಿಗೆ ಹಣದಿಂದ ಎಂಬ ಅರಿವು ಆಡಳಿತಗಾರರಿಗೆ ಇರಬೇಕು. ಕೂಡಲೇ ಪೆನ್ಷನ್ ಕಡಿತದ ಆದೇಶವನ್ನು ಹಿಂಪಡೆದು, ಅರ್ಹ ಫಲಾನುಭವಿಗಳಿಗೆ ನ್ಯಾಯ ಒದಗಿಸಬೇಕು," ಎಂದು ಅವರು ಒತ್ತಾಯಿಸಿದರು.

ಪೆನ್ಷನ್ ಮಾತ್ರವಲ್ಲದೆ, ಕಳೆದ ಕೆಲವು ದಿನಗಳಿಂದ ರೇಷನ್ ಕಾರ್ಡ್‌ಗಳನ್ನು ಕಡಿತಗೊಳಿಸುತ್ತಿರುವ ಕ್ರಮವನ್ನೂ ಶ್ರೀನಿವಾಸ್ ತರಾಟೆಗೆ ತೆಗೆದುಕೊಂಡರು. ಆಹಾರ ಭದ್ರತೆ ಮತ್ತು ಸಾಮಾಜಿಕ ಭದ್ರತೆಯ ಯೋಜನೆಗಳಲ್ಲಿ ರಾಜಕೀಯ ಮಾಡುವುದನ್ನು ಸರ್ಕಾರ ಬಿಡಬೇಕು. ಬಡವರ ವಿರುದ್ಧದ ಈ ಧೋರಣೆ ಹೀಗೆಯೇ ಮುಂದುವರಿದರೆ ಮುಂದಿನ ದಿನಗಳಲ್ಲಿ ಸರ್ಕಾರದ ವಿರುದ್ಧ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.

# 2 ಕ್ಷೇತ್ರ ಕೈಜಾರುವ ಭೀತಿಯಿಂದ ನಿದ್ರೆ ಬಾರದ ಸ್ಥಿತಿಯಲ್ಲಿ ಸಿಎಂ- ವಿಜಯೇಂದ್ರ ವಿಶ್ಲೇಷಣೆ

ದಾವಣಗೆರೆ

ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಕ್ಷೇತ್ರಗಳು ಕಾಂಗ್ರೆಸ್ ಪಕ್ಷದ ಕೈಜಾರಿ ಹೋಗುತ್ತಿದ್ದು, ಮುಖ್ಯಮಂತ್ರಿಗಳಿಗೆ ನಿದ್ರೆ ಬರುತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ವಿಶ್ಲೇಷಿಸಿದ್ದಾರೆ.

ಎರಡೂ ಕಡೆಗಳಲ್ಲಿ ಬಿಜೆಪಿ ಗೆದ್ದೇ ಗೆಲ್ಲುವ ವಾತಾವರಣ ನಿರ್ಮಾಣವಾಗಿದೆ. ಯಾವ ಕ್ಷೇತ್ರದಲ್ಲಿ ಹೆಚ್ಚು ಪ್ರಚಾರದಲ್ಲಿ ತೊಡಗಿಸಿಕೊಳ್ಳಬೇಕೆಂಬ ಗೊಂದಲದಲ್ಲಿ ಮುಖ್ಯಮಂತ್ರಿಗಳು ಇದ್ದಾರೆ. ಇವತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ 'ಹಿಂದುಳಿದವರ ನಡೆ ಬಿಜೆಪಿಯ ಕಡೆ' ನಡೆಯುತ್ತಿದೆ. ಸರ್ವ ಸಮಾಜದ ಜನರು ನಮ್ಮ ಅಭ್ಯರ್ಥಿ ಶ್ರೀನಿವಾಸದಾಸ ಕರಿಯಪ್ಪ ಅವರನ್ನು ಗೆಲ್ಲಿಸಲು ಸಂಕಲ್ಪ ತೊಟ್ಟಿದ್ದಾರೆ ಎಂದು ತಿಳಿಸಿದರು. ಈ ಸಮಾವೇಶ ಮತ್ತು ನಮ್ಮ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸುತ್ತಿರುವ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾದ ಅಧ್ಯಕ್ಷ ರಘು ಕೌಟಿಲ್ಯ ಮತ್ತು ಪದಾಧಿಕಾರಿಗಳಿಗೆ ಅಭಿನಂದನೆಗಳು ಎಂದು ತಿಳಿಸಿದರು.

ಭ್ರಷ್ಟಾಚಾರದ ಕುರಿತು ಮಾತನಾಡುವ ನೈತಿಕತೆ ಕಾಂಗ್ರೆಸ್ ಪಕ್ಷ ಮತ್ತು ಮುಖ್ಯಮಂತ್ರಿಗಳಿಗೆ ಇಲ್ಲ ಎಂದು ಅವರು ಆಕ್ಷೇಪಿಸಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣವನ್ನು ಲೂಟಿ ಮಾಡಿದ್ದಾರೆ. ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಮತದಾರರಿಗೆ ದುಡ್ಡು ಹಂಚುತ್ತಿದ್ದಾರೆ. ಶಾಮನೂರು ಅವರ ನೋಟು, ಬಿಜೆಪಿಗೆ ವೋಟು ಎಂದು ನಮ್ಮ ಕಾರ್ಯಕರ್ತರು ಹೇಳುತ್ತಿದ್ದಾರೆ ಎಂದು ನುಡಿದರು. ಜನರು ಎರಡೂ ಕ್ಷೇತ್ರಗಳಲ್ಲಿ ಕಮಲದ ಹೂವನ್ನು ಅರಳಿಸಬೇಕೆಂಬ ಸಂಕಲ್ಪ ಮಾಡಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕಾರ್ಯಕರ್ತರು ಇದೇವೇಳೆ 'ಶಾಮನೂರು ಅವರ ನೋಟು, ಬಿಜೆಪಿಗೆ ವೋಟು' ಎಂಬ ಘೋಷಣೆಗಳನ್ನೂ ಕೂಗಿದರು.

ಭ್ರಷ್ಟಾಚಾರದ ಹಣದಿಂದ ಈ ಕ್ಷೇತ್ರದ ಜನರ ಮತವನ್ನು ಗೆಲ್ಲಲು ಸಾಧ್ಯವಿಲ್ಲ ಎಂದು ನುಡಿದ ಅವರು, ಮತದಾರರು ಈಗಾಗಲೇ ಬಿಜೆಪಿ ಗೆಲ್ಲಿಸುವ ತೀರ್ಮಾನ ಮಾಡಿದ್ದಾರೆ ಎಂದು ಹೇಳಿದರು. ಯಡಿಯೂರಪ್ಪ ಅವರು ಮುಖ್ಯಮಂತ್ರಿಗಳಾಗಿದ್ದಾಗ ಹಿಂದುಳಿದ ವರ್ಗಗಳ ವಿವಿಧ ನಿಗಮಗಳಿಗೆ 550 ಕೋಟಿ ರೂಪಾಯಿ ನೀಡಿದ್ದರು. ಸಿದ್ದರಾಮಯ್ಯನವರ ಸರಕಾರ ಕೇವಲ 200– 250 ಕೋಟಿಯನ್ನಷ್ಟೇ ಕೊಟ್ಟಿದೆ ಎಂದು ಗಮನ ಸೆಳೆದರು. ಹಿಂದುಳಿದ ವರ್ಗಗಳನ್ನು ಮತಬ್ಯಾಂಕಾಗಿ ಕಾಂಗ್ರೆಸ್ ಬಳಸಿಕೊಳ್ಳುತ್ತಿದೆ. ಇದನ್ನು ಅರ್ಥ ಮಾಡಿಕೊಂಡು ಪ್ರಾಮಾಣಿಕ ವ್ಯಕ್ತಿ ಶ್ರೀನಿವಾಸದಾಸ ಕರಿಯಪ್ಪ ಅವರನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಇವತ್ತು ಎಚ್.ಡಿ.ಕುಮಾರಸ್ವಾಮಿಯವರೂ ಬಂದಿದ್ದಾರೆ. ಜೆಡಿಎ[illegible]ನ ಎಲ್ಲ ಕಾರ್ಯಕರ್ತರೂ ಎರಡೂ ಕ್ಷೇತ್ರಗಳಲ್ಲಿ ನಮ್ಮ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸುತ್ತಿದ್ದಾರೆ ಎಂದು ಹೇಳಿದರು. ಜೆಡಿಎಸ್ ಕೂಡ ನಮ್ಮ ಅಭ್ಯರ್ಥಿಗಳಿಗೆ ಶಕ್ತಿ ತುಂಬುವ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.



# 16ರಿಂದ 'ಈ ನೆಲ ಈಜಲ' ಉಚಿತ ಬೇಸಿಗೆ ಶಿಬಿರ

ಕೋಲಾರ

ಜಿಲ್ಲೆಯ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ 'ಈ ನೆಲ ಈಜಲ ಕಲೆ ಮತ್ತು ಸಾಂಸ್ಕೃತಿಕ ಸಂಸ್ಥೆ' ವತಿಯಿಂದ ವಿದ್ಯಾರ್ಥಿಗಳಿಗಾಗಿ ವಿಶೇಷ ಉಚಿತ ಬೇಸಿಗೆ ಶಿಬಿರವನ್ನು ಆಯೋಜಿಸಲಾಗಿದೆ. ಕೋಲಾರ ತಾಲ್ಲೂಕಿನ ಅಮ್ಮೇರಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಏಪ್ರಿಲ್ 16 ರಿಂದ 30 ರವರೆಗೆ ಈ ಸೃಜನಾತ್ಮಕ ಕಲಿಕಾ ಹಬ್ಬ ನಡೆಯಲಿದೆ.

1ನೇ ತರಗತಿಯಿಂದ 10ನೇ ತರಗತಿಯವರೆಗಿನ ಆಸಕ್ತ ವಿದ್ಯಾರ್ಥಿಗಳಿಗೆ ಈ ಶಿಬಿರದಲ್ಲಿ ಮುಕ್ತ ಅವಕಾಶವಿದ್ದು, ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ನೀಡಲಾಗುತ್ತದೆ. ಶಿಬಿರಾರ್ಥಿಗಳಿಗೆ ಕೇವಲ ಪಠ್ಯವಲ್ಲದೆ, ಈ ಕೆಳಗಿನ ವಿಶಿಷ್ಟ ಕಲೆಗಳನ್ನು ಕಲಿಸಲಾಗುವುದು.

ಶಿಬಿರದಲ್ಲಿ ಭಾಗವಹಿಸಲು ಇಚ್ಛಿಸುವ ವಿದ್ಯಾರ್ಥಿಗಳು ಭರ್ತಿ ಮಾಡಿದ ಅರ್ಜಿಯೊಂದಿಗೆ ಎರಡು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಹಾಗೂ ಆಧಾರ್ ಕಾರ್ಡ್ ನಕಲನ್ನು ಏಪ್ರಿಲ್ 15ರ ಒಳಗಾಗಿ ಸಲ್ಲಿಸಬೇಕಿದೆ.

ಬಿ. ವೆಂಕಟಾಚಲಪತಿ (ಜನಪದ ಗಾಯಕ): 9008743256
ಕುಡುವನಹಳ್ಳಿ ಗಣೇಶ್ (ಶಿಬಿರದ ಸಂಚಾಲಕ): 9449404873

ಹೆಚ್ಚಿನ ವಿವರಗಳಿಗಾಗಿ ಮತ್ತು ನೋಂದಣಿಗಾಗಿ ಈ ಕೆಳಗಿನವರನ್ನು ಸಂಪರ್ಕಿಸಬಹುದಾಗಿದೆ.

05/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಪೊಲೀಸ್ ಕಲ್ಯಾಣಕ್ಕೆ ಕೆಜಿಎಫ್ ಜಿಲ್ಲೆಯಿಂದ 21.25 ಲಕ್ಷ ರೂ. ನೆರವು



ಕೆಜಿಎಫ್

ಕರ್ನಾಟಕ ಪೊಲೀಸ್ ಕಾಯ್ದೆ ಜಾರಿಗೆ ಬಂದ ನೆನಪಿಗಾಗಿ ಆಚರಿಸಲಾಗುವ 'ಪೊಲೀಸ್ ಧ್ವಜ ದಿನಾಚರಣೆ'ಯನ್ನು ಕೆಜಿಎಫ್‌ನ ಡಿ.ಎ.ಆರ್. ಪೊಲೀಸ್ ಕವಾಯಿತು ಮೈದಾನದಲ್ಲಿ ಗುರುವಾರ ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಸಮಾರಂಭವು ಪೊಲೀಸ್ ಕಲ್ಯಾಣದ ಹೊಸ ಭರವಸೆಗಳಿಗೆ ವೇದಿಕೆಯಾಯಿತು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಎಸ್ಪಿ ಶಿವಾಂಶು ರಜಪೂತ್, "1965ರ ಏಪ್ರಿಲ್ 2ರಂದು ಕರ್ನಾಟಕ ಪೊಲೀಸ್ ಕಾಯ್ದೆ ಜಾರಿಗೆ ಬಂದಿದ್ದರಿಂದ ಈ ದಿನವನ್ನು ಧ್ವಜ ದಿನ ಹಾಗೂ ಪೊಲೀಸ್ ಕಲ್ಯಾಣ ದಿನವನ್ನಾಗಿ ಆಚರಿಸಲಾಗುತ್ತಿದೆ. 2025ನೇ ಸಾಲಿನಲ್ಲಿ ಧ್ವಜಗಳ ಮಾರಾಟದಿಂದ ಒಟ್ಟು ರೂ. 21,25,000 ಸಂಗ್ರಹವಾಗಿದ್ದು, ಈ ಮೊತ್ತವನ್ನು ಪೊಲೀಸ್ ಕಲ್ಯಾಣ ನಿಧಿಗೆ ಜಮಾ ಮಾಡಲಾಗಿದೆ. ಇದರಲ್ಲಿ ಶೇ. 50ರಷ್ಟು ಹಣವನ್ನು ಕೆಜಿಎಫ್ ನಿವೃತ್ತ ಪೊಲೀಸ್ ಕಲ್ಯಾಣ ನಿಧಿಗೆ ನೀಡಲಾಗಿದೆ," ಎಂದು ಮಾಹಿತಿ ನೀಡಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ನಿವೃತ್ತ ಎಎಸ್‌ಐ ಮಂಜುನಾಥ ಅವರು ಧ್ವಜ ವಂದನೆ ಸ್ವೀಕರಿಸಿದರು. "ನಿವೃತ್ತ ಪೊಲೀಸರ ಜೀವನೋಪಾಯಕ್ಕೆ ಸರ್ಕಾರ ಮತ್ತು ಇಲಾಖೆ ಹೆಚ್ಚಿನ ಸವಲತ್ತುಗಳನ್ನು ಕಲ್ಪಿಸಬೇಕು," ಎಂದು ಅವರು ಇದೇ ಸಂದರ್ಭದಲ್ಲಿ ಮನವಿ ಮಾಡಿದರು. ಕಾರ್ಯಕ್ರಮದಲ್ಲಿ 2025–26ನೇ ಸಾಲಿನಲ್ಲಿ ನಿವೃತ್ತರಾದ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು. ಆರ್.ಪಿ.ಐ. ವಿ. ಸೋಮಶೇಖರ್ ಅವರ ನೇತೃತ್ವದಲ್ಲಿ ನಡೆದ ಪಥಸಂಚಲನವು ನೆರೆದಿದ್ದವರ ಗಮನ ಸೆಳೆಯಿತು. ಡಿ.ಎ.ಆರ್., ನಾಗರಿಕ ಪೊಲೀಸ್ ಹಾಗೂ ಮಹಿಳಾ ಪೊಲೀಸ್ ತಂಡಗಳು ಶಿಸ್ತುಬದ್ಧವಾಗಿ ಪಥಸಂಚಲನ ನಡೆಸಿ ಅತಿಥಿಗಳಿಗೆ ಗೌರವ ಸಲ್ಲಿಸಿದವು. ಗಣ್ಯರು ಪೊಲೀಸ್ ಧ್ವಜಗಳನ್ನು ಬಿಡುಗಡೆಗೊಳಿಸಿ ತಮ್ಮ ವೈಯಕ್ತಿಕ ದೇಣಿಗೆಯನ್ನು ನೀಡಿದರು. ಕಾರ್ಯಕ್ರಮವನ್ನು ಪೊಲೀಸ್ ಕಾನ್ಸ್‌ಟೇಬಲ್ ಶರಣು ಕವಟಗಿ ಅಚ್ಚುಕಟ್ಟಾಗಿ ನಿರೂಪಿಸಿದರೆ, ಕೆಜಿಎಫ್ ಉಪ ವಿಭಾಗದ ಡಿವೈಎಸ್ಪಿ ವಿ. ಲಕ್ಷ್ಮಯ್ಯ ವಂದನಾರ್ಪಣೆ ಮಾಡಿದರು.



ತುಮಕೂರು ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಮುಖ್ಯಪೇದೆ ಪ್ರಸನ್ನಕುಮಾರ್ ಜಿ.ಎನ್. ಅವರು ಪೊಲೀಸ್ ಇಲಾಖೆಯಲ್ಲಿ ಸಲ್ಲಿಸಿದ ಗಮನಾರ್ಹ ಸೇವೆಯನ್ನು ಪರಿಗಣಿಸಿ, ಅವರಿಗೆ ಪ್ರತಿಷ್ಠಿತ 'ಮುಖ್ಯಮಂತ್ರಿ ಚಿನ್ನದ ಪದಕ' ನೀಡಿ ಗೌರವಿಸಲಾಯಿತು. ನಗರದ ಕೋರಮಂಗಲದ 3ನೇ ಪಡೆ ಕೆಎಸ್‌ಆರ್‌ಪಿ ಪೆರೇಡ್ ಮೈದಾನದಲ್ಲಿ ಆಯೋಜಿಸಲಾಗಿದ್ದ 'ಪೊಲೀಸ್ ಧ್ವಜ ದಿನಾಚರಣೆ ಮತ್ತು ಮುಖ್ಯಮಂತ್ರಿ ಚಿನ್ನದ ಪದಕ ಪ್ರದಾನ' ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪದಕ ಪ್ರದಾನ ಮಾಡಿದರು.

# ಉದ್ಯಾನವನವೋ ಸ್ಮಶಾನವೋ? ನಗರಸಭೆಯ ವಿವಾದಾತ್ಮಕ ನಿರ್ಧಾರಕ್ಕೆ ಮುನಿಸ್ವಾಮಿ ಆಕ್ರೋಶ

ಕೋಲಾರ

ನಗರದ ಡಾ. ಬಿ.ಆರ್. ಅಂಬೇಡ್ಕರ್ ಮಕ್ಕಳ ಉದ್ಯಾನವನ ಹಾಗೂ ಸೈನಿಕ ಹುತಾತ್ಮ ಸ್ಮಾರಕವಿರುವ ಜನವಸತಿ ಪ್ರದೇಶದ ಮಧ್ಯೆ ವಿದ್ಯುತ್ ಚಿತಾಗಾರ ನಿರ್ಮಿಸಲು ಮುಂದಾಗಿರುವ ನಗರಸಭೆಯ ಕ್ರಮವನ್ನು ಮಾಜಿ ಸಂಸದ ಎಸ್. ಮುನಿಸ್ವಾಮಿ ತೀವ್ರವಾಗಿ ಖಂಡಿಸಿದ್ದಾರೆ. ನಗರಾಭಿವೃದ್ಧಿ ಪ್ರಾಧಿಕಾರದ ಅನುಮತಿ ಪಡೆಯದೆ ಏಕಾಏಕಿ ಕಾಮಗಾರಿ ಆರಂಭಿಸುತ್ತಿರುವುದು ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾಗಿದೆ ಎಂದು ಮಾಜಿ ಸಂಸದ ಎಸ್. ಮುನಿಸ್ವಾಮಿ ಕಿಡಿಕಾರಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, "ಅಂಬೇಡ್ಕರ್ ಉದ್ಯಾನವನವನ್ನು ಈ ಭಾಗದ ಮಕ್ಕಳು ಮತ್ತು ಸಾರ್ವಜನಿಕರ ಅನುಕೂಲಕ್ಕಾಗಿ ವಿಶೇಷ ಪರಿಶ್ರಮದಿಂದ ನಿರ್ಮಿಸಲಾಗಿದೆ. ಇಲ್ಲಿ ಪ್ರತಿನಿತ್ಯ ನೂರಾರು ಮಕ್ಕಳು ಆಟವಾಡಲು, ವ್ಯಾಯಾಮ ಮಾಡಲು ಮತ್ತು ಸ್ಕೇಟಿಂಗ್ ಕಲಿಯಲು ಬರುತ್ತಾರೆ. ಇಂತಹ ಜಾಗದ ಪಕ್ಕದಲ್ಲೇ ಚಿತಾಗಾರ ನಿರ್ಮಿಸಿದರೆ, ಮೃತದೇಹಗಳ ಓಡಾಟದಿಂದ ಮಕ್ಕಳ ಮನಸ್ಸಿನ ಮೇಲೆ ಕೆಟ್ಟ ಪರಿಣಾಮ ಬೀರಲಿದ್ದು, ಅವರಲ್ಲಿ ಭಯ



ಮತ್ತು ಆತಂಕ ಮೂಡಲಿದೆ," ಎಂದು ಕಳವಳ ವ್ಯಕ್ತಪಡಿಸಿದರು.

ವಿದ್ಯುತ್ ಚಿತಾಗಾರ ನಿರ್ಮಾಣಕ್ಕೆ ಉದ್ದೇಶಿಸಿರುವ ಜಾಗದ ಪಕ್ಕದಲ್ಲೇ ರೈಲ್ವೆ ಮಾರ್ಗ ಹಾದುಹೋಗಿದೆ ಮತ್ತು ಸುತ್ತಲೂ ದಟ್ಟವಾದ ಜನವಸತಿ ಪ್ರದೇಶವಿದೆ. "ಸರಿಯಾದ ರಸ್ತೆ ಸಂಪರ್ಕವೂ ಇಲ್ಲದ ಈ ಜಾಗದಲ್ಲಿ ಯಾವ ಪುರುಷಾರ್ಥಕ್ಕೆ ಚಿತಾಗಾರ ನಿರ್ಮಿಸುತ್ತಿದ್ದೀರಿ? ನಗರಾಭಿವೃದ್ಧಿ ಪ್ರಾಧಿಕಾರದ ಪೂರ್ವಾನುಮತಿ ಪಡೆಯದೆ ಸರ್ವಾಧಿಕಾರಿಯಂತೆ ವರ್ತಿಸುತ್ತಿರುವುದು ಸರಿಯಲ್ಲ," ಎಂದು ಅವರು ನಗರಸಭೆಯನ್ನು ಪ್ರಶ್ನಿಸಿದ್ದಾರೆ.

ಕೋಲಾರದಲ್ಲಿ ಈಗಾಗಲೇ ಒಂದು ಅನಿಲ ಚಿತಾಗಾರದ ಬೃಹತ್ ಕಟ್ಟಡವಿದೆ. ಅದರಲ್ಲೇ ಸುಧಾರಿತ ವಿದ್ಯುತ್ ಚಿತಾಗಾರವನ್ನು ಅಳವಡಿಸುವುದರಿಂದ



ಸಾರ್ವಜನಿಕರ ಹಣ ಉಳಿಯುತ್ತದೆ ಮತ್ತು ಜನರಿಗೂ ಅನುಕೂಲವಾಗುತ್ತದೆ ಎಂದು ಮುನಿಸ್ವಾಮಿ ಸಲಹೆ ನೀಡಿದ್ದಾರೆ. "ರಾಜ್ಯದ ಯಾವುದೇ ದೊಡ್ಡ ಜಿಲ್ಲಾ ಕೇಂದ್ರಗಳಲ್ಲೂ ಎರಡೆರಡು ವಿದ್ಯುತ್ ಚಿತಾಗಾರಗಳಿಲ್ಲ. ಹೀಗಿರುವಾಗ ಕೋಲಾರಕ್ಕೆ ಮಾತ್ರ ಎರಡು ಚಿತಾಗಾರಗಳ ಅಗತ್ಯವಿದೆಯೇ?" ಎಂದು ಅವರು ಪ್ರಶ್ನಿಸಿದರು.

ಅಂಬೇಡ್ಕರ್ ಉದ್ಯಾನವನದಲ್ಲಿ ಬಾಲಭವನ ನಿರ್ಮಿಸಬೇಕು ಮತ್ತು ಕ್ರೀಡಾಭಿರುಚಿ ಬೆಳೆಸಲು ಹೆಚ್ಚಿನ ಪರಿಕರಗಳನ್ನು ಅಳವಡಿಸಬೇಕು.

ಅನೇಕರು ಇಲ್ಲಿ ಉಚಿತ ಬೇಸಿಗೆ ಶಿಬಿರಗಳನ್ನು ನಡೆಸುತ್ತಿದ್ದು, ಅಂತಹ ಪವಿತ್ರ ಜಾಗವನ್ನು ಚಿತಾಗಾರವನ್ನಾಗಿ ಮಾಡಬಾರದು. ಕೂಡಲೇ ಈ ಯೋಜನೆಯನ್ನು ರದ್ದುಗೊಳಿಸಿ ಉದ್ಯಾನವನವನ್ನು ಸಾರ್ವಜನಿಕ ಸ್ನೇಹಿಯಾಗಿ ಅಭಿವೃದ್ಧಿಪಡಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಅಂಬೇಡ್ಕರ್ ಅಧ್ಯಯನ ಕೇಂದ್ರಕ್ಕೆ ರೂ. 1 ಕೋಟಿ ಘೋಷಣೆ

ಕೋಲಾರ

ಬಾಬಾಸಾಹೇಬ್ ಅಂಬೇಡ್ಕರ್ ಅವರು ಯಾವುದೇ ಒಂದು ಜಾತಿಗೆ ಸೀಮಿತವಾದವರಲ್ಲ, ಅವರು ಇಡೀ ವಿಶ್ವಕ್ಕೆ ಮಾದರಿಯಾದ ಮಹಾನ್ ವ್ಯಕ್ತಿ. ಜಿಲ್ಲಾಡಳಿತ ಭವನದಲ್ಲಿ ಅವರ ಪ್ರತಿಮೆ ನಿರ್ಮಾಣ ಕಾರ್ಯದಲ್ಲಿ ಜಿಲ್ಲೆಯ ಎಲ್ಲಾ ಶಾಸಕರು, ಅಧಿಕಾರಿಗಳು ಮತ್ತು ಸಾರ್ವಜನಿಕರು ಕೈಜೋಡಿಸುತ್ತಿರುವುದು ಹೆಮ್ಮೆಯ ವಿಷಯ" ಎಂದು ಕೋಲಾರ ಶಾಸಕ ಡಾ. ಕೊತ್ತೂರು. ಜಿ. ಮಂಜುನಾಥ್ ತಿಳಿಸಿದರು.

ಜಿಲ್ಲಾಡಳಿತ ಮತ್ತು ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಳ್ಳಲಾದ ಕಾರ್ಯಕ್ರಮದಲ್ಲಿ ಜಿಲ್ಲಾಡಳಿತ ಭವನದ ಆವರಣದಲ್ಲಿ ಸುಮಾರು 1.5 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 21 ಅಡಿಯ ಕಂಚಿನ ಭವ್ಯ ಪ್ರತಿಮೆಯ ಸ್ಥಾಪನೆ ಕಾಮಗಾರಿಯ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಜಿಲ್ಲೆಯ ಶೈಕ್ಷಣಿಕ ಅಭಿವೃದ್ಧಿಯ ಬಗ್ಗೆ ಮಾತನಾಡಿದ ಶಾಸಕರು, ಕೋಲಾರಕ್ಕೆ ಮಂಜೂರಾಗಿರುವ ನೂತನ ವೈದ್ಯಕೀಯ ಕಾಲೇಜಿನ ಡಿಪಿಆರ್ ಅನ್ನು 15 ದಿನಗಳ ಒಳಗಾಗಿ ಸರ್ಕಾರಕ್ಕೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಇಂದು ಅದರ ಅಂತಿಮ ಪರಿಶೀಲನೆಗಾಗಿ ಸ್ಥಳ ವೀಕ್ಷಣೆ ನಡೆಸಲಾಗುವುದು ಎಂದು ಮಾಹಿತಿ ನೀಡಿದರು.

ಈ ಐತಿಹಾಸಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ವಿಧಾನ ಪರಿಷತ್ ಸದಸ್ಯ ಎಂ.ಎಲ್. ಅನಿಲ್ ಕುಮಾರ್, ಕೋಲಾರ ಜಿಲ್ಲೆಯ ಇತಿಹಾಸದಲ್ಲಿ ಇದೊಂದು ಮೈಲಿಗಲ್ಲು ಎಂದು ಬಣ್ಣಿಸಿದರು.

ಈ ಪ್ರತಿಮೆಯನ್ನು ತುಮಕೂರಿನಲ್ಲಿರುವ 12 ಅಡಿಯ ಪ್ರತಿಮೆಗಿಂತಲೂ ಎತ್ತರವಾಗಿ, ಅಂದರೆ 21 ಅಡಿ ಎತ್ತರದಲ್ಲಿ ಸುಮಾರು 1200 ಕೆಜಿಗೂ ಅಧಿಕ ತೂಕದ ಕಂಚಿನಿಂದ ನಿರ್ಮಿಸಲಾಗುತ್ತಿದೆ. ಸುಮಾರು 95 ಲಕ್ಷ ರೂಪಾಯಿಗಳ ವೆಚ್ಚ ದಲ್ಲಿ ಪ್ರತಿಮೆ ಹಾಗೂ ಪ್ರತಿಮೆಯ ಸುತ್ತಮುತ್ತಲಿನ ಪರಿಸರವನ್ನು ಸುಂದರಗೊಳಿಸಲು 55



ಲಕ್ಷ ರೂಪಾಯಿಗಳನ್ನು ಮೀಸಲಿಡಲಾಗಿದೆ ಎಂದರು. ಈ ಯೋಜನೆಗೆ ಸರ್ಕಾರದ ನೇರ ಅನುದಾನದ ಲಭ್ಯತೆ ಇಲ್ಲದ ಕಾರಣ, ಸ್ಥಳೀಯ ಸಂಸ್ಥೆಗಳು ಮತ್ತು ಜನಪ್ರತಿನಿಧಿಗಳ ಸಹಕಾರದಿಂದ ಹಣ ಕ್ರೋಢೀಕರಿಸಲಾಗಿದೆ ಎಂದರು.

ಶಾಸಕ ಕೊತ್ತೂರು ಮಂಜುನಾಥ್ ಅವರು 25 ಲಕ್ಷ ರೂ., ಅನಿಲ್ ಕುಮಾರ್ ಮತ್ತು ನಜೀರ್ ಅಹಮದ್ ಸೇರಿ 25 ಲಕ್ಷ ರೂ., ನಗರಸಭೆಯಿಂದ 30 ಲಕ್ಷ ರೂ., ಗ್ರಾಮ ಪಂಚಾಯಿತಿಗಳಿಂದ 25 ಲಕ್ಷ ರೂ. ಹಾಗೂ ಹಾಲು ಒಕ್ಕೂಟ ಮತ್ತು ಕುಡಾ ವತಿಯಿಂದಲೂ ದೇಣಿಗೆ ನೀಡಲು ನಿರ್ಧರಿಸಲಾಗಿದೆ.

ಪ್ರತಿಮೆಯ ಕೆಲಸವನ್ನು ಅತ್ಯಂತ ಗುಣಮಟ್ಟದಿಂದ ನಿರ್ವಹಿಸಬೇಕೆಂದು ಸೂಚಿಸಿದ ಅನಿಲ್ ಕುಮಾರ್ ಅವರು, ಮುಂದಿನ ಮೂರು ತಿಂಗಳ ಒಳಗಾಗಿ ಕಾಮಗಾರಿಯನ್ನು ಪೂರ್ಣಗೊಳಿಸಿ ಜಿಲ್ಲಾ ಉಸ್ತುವಾರಿ ಸಚಿವರ ಸಮ್ಮುಖದಲ್ಲಿ ಅದ್ದೂರಿಯಾಗಿ ಉದ್ಘಾಟನೆ ಮಾಡಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕೋಲಾರದ ಯುವಜನತೆ ಮತ್ತು ಮುಂದಿನ ಪೀಳಿಗೆಗೆ ಅನುಕೂಲವಾಗುವಂತೆ ಕೋಲಾರ ನಗರದ 5 ಕಿ.ಮೀ ವ್ಯಾಪ್ತಿಯಲ್ಲಿ 'ಅಂಬೇಡ್ಕರ್ ಅಧ್ಯಯನ ಕೇಂದ್ರ' ಸ್ಥಾಪಿಸುವ ಮಹತ್ವದ ಪ್ರಸ್ತಾವನೆಯನ್ನು ಮುಂದಿಟ್ಟರು.ಗೌರಿಬಿದನೂರಿನ ಮಾದರಿಯಲ್ಲಿ ಸುಸಜ್ಜಿತ ಗ್ರಂಥಾಲಯ, ಮ್ಯೂಸಿಯಂ ಮತ್ತು ಡಿಜಿಟಲ್ ಲೈಬ್ರರಿ ಒಳಗೊಂಡ ಕೇಂದ್ರವನ್ನು ನಿರ್ಮಿಸಲು ಮನವಿ ಮಾಡಿದರು.

ಈ ಕೇಂದ್ರದ ನಿರ್ಮಾಣಕ್ಕೆ ತಮ್ಮ ವೈಯಕ್ತಿಕ ಅನುದಾನದಿಂದ 1 ಕೋಟಿ ರೂಪಾಯಿಗಳನ್ನು ನೀಡುವುದಾಗಿ ಅವರು ಈ ವೇದಿಕೆಯಲ್ಲಿ ಘೋಷಿಸಿದರು. ಇದಲ್ಲದೆ, ನಚಿಕೇತ ನಿಲಯದ ಅಭಿವೃದ್ಧಿಗೆ 1 ಕೋಟಿ ರೂ. ವೆಚ್ಚದ ಕಾಂಪೌಂಡ್ ಮತ್ತು ಇತರ ಕಾಮಗಾರಿಗಳ ಬಗ್ಗೆಯೂ ಅವರು ಮಾಹಿತಿ ನೀಡಿದರು.

ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಅವರು ಮಾತನಾಡಿ "ಜಿಲ್ಲೆಯ ಶಕ್ತಿ ಕೇಂದ್ರವಾದ ಜಿಲ್ಲಾಡಳಿತ ಭವನದ ಆವರಣದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆ ನಿರ್ಮಾಣವಾಗುತ್ತಿರುವುದು ಸಮಾನತೆ ಮತ್ತು ಸಂವಿಧಾನಕ್ಕೆ ನಾವು ಸಲ್ಲಿಸುವ ದೊಡ್ಡ ಗೌರವ ಎಂದು ಅವರು ಬಣ್ಣಿಸಿದರು.

ಇಡೀ ಜಿಲ್ಲೆಯ ಆಡಳಿತ ಯಂತ್ರ ನಿಯಂತ್ರಿಸುವ ಶಕ್ತಿ ಕೇಂದ್ರದಲ್ಲಿ ಅಂಬೇಡ್ಕರ್ ಅವರು 'ಶಕ್ತಿ ದೇವತೆ'ಯಾಗಿ ವಿರಾಜಮಾನರಾಗುವುದು ಜಿಲ್ಲೆಯ ಇತಿಹಾಸದಲ್ಲಿ ಒಂದು ಅರ್ಥಪೂರ್ಣ ಘಟನೆ. ಆಧುನಿಕ ಭಾರತದ ಇತಿಹಾಸದಲ್ಲಿ ಅಂಬೇಡ್ಕರ್ ಅವರಷ್ಟು ಚರ್ಚೆ, ವಿಮರ್ಶೆ ಮತ್ತು ಪರಾಮರ್ಶೆಗೆ ಒಳಗಾದ ಮತ್ತೊಬ್ಬ ರಾಜಕೀಯ ನಾಯಕರಿಲ್ಲ. ಅವರು ಇಡೀ ಜಗತ್ತಿಗೆ ಸೇರಿದ ಆಸ್ತಿ ಎಂದರು.

ಪ್ರತಿಮೆ ನಿರ್ಮಾಣಕ್ಕೆ ಅಂದಾಜು 1.5 ಕೋಟಿ ರೂಪಾಯಿ ವೆಚ್ಚವಾಗಲಿದ್ದು, ಸಾರ್ವಜನಿಕರು, ಜನಪ್ರತಿನಿಧಿಗಳು ಮತ್ತು ವಿವಿಧ ಸಂಸ್ಥೆಗಳ ಸಹಕಾರದೊಂದಿಗೆ ಒಂದು ಕೋಟಿಗೂ ಅಧಿಕ ಹಣ ಸಂಗ್ರಹವಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಶಾಸಕರುಗಳಾದ ಕೊತ್ತೂರು ಮಂಜುನಾಥ್ ಮತ್ತು ಅನಿಲ್ ಕುಮಾರ್ ಅವರು ಈ ಕಾರ್ಯಕ್ಕೆ ಸಂಪೂರ್ಣ ಬೆಂಬಲ ನೀಡಿದ್ದಾರೆ ಎಂದರು.

ಪ್ರತಿಮೆಯ ಜೊತೆಗೆ ಕೋಲಾರದಲ್ಲಿ ಅಂಬೇಡ್ಕರ್ ಅವರ ಜೀವನ ಮತ್ತು ಸಾಧನೆಯನ್ನು ಬಿಂಬಿಸುವ ಅತ್ಯಾಧುನಿಕ ಮ್ಯೂಸಿಯಂ, ಡಿಜಿಟಲ್ ಗ್ರಂಥಾಲಯ ಸ್ಥಾಪಿಸಲು ಈಕಂಬಳ್ಳಿಯಲ್ಲಿ 5 ಎಕರೆ ಜಮೀನು ಗುರುತಿಸಲಾಗಿದೆ. ಹಾಗೆಯೇ ಮಂಗಸಂದ್ರದ ಬಳಿ 2 ಎಕರೆ ಜಮೀನಿನಲ್ಲಿ ಬೌದ್ಧ ವಿಹಾರ ನಿರ್ಮಿಸಲು ಜಿಲ್ಲಾಡಳಿತ ಕ್ರಮ ಕೈಗೊಂಡಿದೆ ಎಂದರು. "ನಾವು ಜೀರೋ ಬಜೆಟ್‌ನಲ್ಲಿ ಕೆಲಸ ಮಾಡುವ ಅಧಿಕಾರಿಗಳು". ನಮಗೆ ಜನರ ಪ್ರೀತಿ ಮತ್ತು ಅನುರಾಗ ಮುಖ್ಯ. ಅಂಬೇಡ್ಕರ್ ಅವರ ವಿಚಾರದಲ್ಲಿ ಕೋಲಾರ ಜಿಲ್ಲೆಯ ಜನಪ್ರತಿನಿಧಿಗಳು ತೋರಿರುವ ಬದ್ಧತೆ ಮತ್ತು ಕಾಳಜಿ ಶ್ಲಾಘನೀಯ. ಈ ಕಂಚಿನ ಪ್ರತಿಮೆಯನ್ನು ಸಿದ್ಧಪಡಿಸಲು ಸುಮಾರು ಎರಡು ತಿಂಗಳ ಕಾಲಾವಕಾಶ ಬೇಕಾಗುತ್ತದೆ. ಪ್ರತಿಮೆಯ ಜೊತೆಗೆ ಸುತ್ತಮುತ್ತಲ ಪ್ರದೇಶದ ಸೌಂದರ್ಯೀಕರಣ ಕಾರ್ಯವನ್ನೂ ಕೈಗೊಳ್ಳಲಾಗುವುದು ಎಂದರು. ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಪ್ರವೀಣ್ ಪಿ. ಬಾಗೇವಾಡಿ, ಅಪರ ಜಿಲ್ಲಾಧಿಕಾರಿ ಎಸ್. ಎಂ ಮಂಗಳ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್, ಜಿಲ್ಲಾ ಉಪ ವಿಭಾಗಾಧಿಕಾರಿ ಜಂಬಗಿ ರೇಣುಕಾ ಪ್ರಸಾದ್ ದಿಲೀಪ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಶ್ರೀನಿವಾಸನ್, ಸಮಾಜದ ಮುಖಂಡರಾದ ಡಾ ಚಂದ್ರಶೇಖರ್, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಬೆಳಗಾನಹಳ್ಳಿ ಮುನಿವೆಂಕಟಪ್ಪ, ನಗರಸಭೆ ಆಯುಕ್ತರು ನವೀನ್ ಚಂದ್ರ, ಕೋಲಾರ ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಮಂಜುನಾಥ್, ಕೂಡ ಅಧ್ಯಕ್ಷರಾದ ಮೊಹಮ್ಮದ್ ಹನೀಫ್ ಸೇರಿದಂತೆ ದಲಿತ ಸಂಘಟನೆಗಳ ಮುಖಂಡರು ಇದ್ದರು.

# ಹಿಂದಿ ಭಾಷೆಗೆ ಗ್ರೇಡಿಂಗ್ ನಿರ್ಧಾರ ಪ್ರಶ್ನಿಸಿದ ಲೋಕಭವನದ ವಿರುದ್ಧ ಕರವೆ ನಾರಾಯಣ ಗೌಡ ಕಿಡಿ

ಬೆಂಗಳೂರು

ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಮೂರನೇ ಭಾಷೆ ಹಿಂದಿಗೆ ಅಂಕ ನೀಡದೆ ಕೇವಲ ಗ್ರೇಡ್ ನೀಡುವ ನಿರ್ಧಾರದ ಬಗ್ಗೆ ಇರುವ ಕಳವಳಗಳ ಬಗ್ಗೆ ಸಮಗ್ರವಾಗಿ ಪರಿಶೀಲಿಸುವಂತೆ ರಾಜ್ಯಪಾಲರು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿಗೆ ಪತ್ರ ಬರೆದಿರುವುದಕ್ಕೆ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಕಿಡಿಕಾರಿದ್ದು, ತಿಂದ ಮನೆಗೆ ಕನ್ನ ಹಾಕಬೇಡಿ, ಗಂಟು ಮೂಟೆ ಕಟ್ಟಿ ಹೊರಡಿ ಎಂದು ಆಗ್ರಹಿಸಿದ್ದಾರೆ.

ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ನೀವು ಹಿಂದಿ ಸಾಮ್ರಾಜ್ಯಶಾಹಿಯ ಲಾಬಿಯ ಪರವಾಗಿ ಮಾತನಾಡುತ್ತಿದ್ದೀರಿ ಎಂಬುದು ನಮಗೆ ಚೆನ್ನಾಗಿ ಗೊತ್ತಿದೆ. ಕನ್ನಡಿಗರು ಔದಾರ್ಯವಂತರು. ನಮ ನೆಲದಲ್ಲಿ ನಿಮಗೆ ಐಶಾರಾಮಿ ವ್ಯವಸ್ಥೆ ಕಲ್ಪಿಸಿಕೊಟ್ಟಿದ್ದೇವೆ. ಕನ್ನಡಿಗರ ತೆರಿಗೆ ದುಡ್ಡಿನಲ್ಲಿ ರಾಜಭವನ ನಡೆಯುತ್ತಿದೆ. ತಿಂದ ಮನೆಗೆ ಕನ್ನ ಹಾಕುವುದು ತರವಲ್ಲ. ಅಧಿಕಪ್ರಸಂಗವನ್ನು ಮುಂದುವರೆಸಿದರೆ ಗಂಟುಮೂಟೆ ಕಟ್ಟಿಕೊಂಡು ನಿಮ ರಾಜ್ಯಕ್ಕೆ ತೊಲಗಿ ಎಂದು ಖಾರವಾಗಿ ನುಡಿದಿದ್ದಾರೆ.

# ಸಮರ್ಥ್ ಶಾಮನೂರು ಪರ ಸಚಿವ ಈಶ್ವರ್ ಖಂಡ್ರೆ ಮತಯಾಚನೆ



ದಾವಣಗೆರೆ

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಅಂಗವಾಗಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸಮರ್ಥ್ ಶಾಮನೂರು ಅವರ ಪರವಾಗಿ ಅರಣ್ಯ ಮತ್ತು ಜೀವಿಶಾಸ್ತ್ರ ಇಲಾಖೆ ಸಚಿವರಾದ ಈಶ್ವರ್ ಖಂಡ್ರೆ ಅವರು ವಿಸ್ತೃತ ಮತ ಯಾಚನೆ ನಡೆಸಿದರು.

ಅವರೊಂದಿಗೆ ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಅಲ್ಲಂ ಪ್ರಶಾಂತ್, ಪ್ರಚಾರ ಸಮಿತಿ ಕೋ ಆರ್ಡಿನೇಟರ್ ವೆಂಕಟೇಶ ಹೆಗಡೆ, ಡಿಸಿಸಿ ಕಾರ್ಯಾಧ್ಯಕ್ಷ ಬೋಯಪಾಟಿ ವಿಷ್ಣುವರ್ಧನ್, ಉಪಾಧ್ಯಕ್ಷ ಕೆ. ಶ್ರೀನಿವಾಸಲು, ಸಾಮಾಜಿಕ ಜಾಲತಾಣ ಜಿಲ್ಲಾಧ್ಯಕ್ಷ ಅಫಾಕ್ ಅಹ್ಮದ್, ಕಾಂಗ್ರೆಸ್ ಮುಖಂಡರಾದ ವೀರಸೇನಾರೆಡ್ಡಿ ಹಾಗೂ ಜಗದೀಶ್ ಇನ್ನಿತರರು ಇದ್ದರು.

# 'ಹಿರಿಯರ ಅನುಭವಗಳು, ಸಮಾಜದ ಸೇವೆಗೆ ಸದುಪಯೋಗವಾಗಲಿ'

ವಿಜಯಪುರ

ಸಮಾಜದಲ್ಲಿನ ವಿವಿಧ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ,ಅನುಭವ ಪಡೆದುಕೊಂಡಿರುವ ವ್ಯಕ್ತಿಗಳಲ್ಲಿನ ಕೌಶಲ್ಯಗಳನ್ನು ಸಮಾಜದ ಸೇವೆಗೆ ಸದುಪಯೋಗಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಕೋರಮಂಗಲ ವೀರಪ್ಪ ಹೇಳಿದರು.

ಹೋಬಳಿಯ ಕೋರಮಂಗಲ ಗ್ರಾಮದಲ್ಲಿ, ಸೀನಿಯರ್ ಚೇಂಬರ್ ಇಂಟರ್ ನ್ಯಾಷನಲ್ ವಿಜಯಪುರ ಲೀಜನ್ ವತಿಯಿಂದ ಆಯೋಜಿಸಿದ್ದ ಸಂಸ್ಥಾಪಕರ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಸಮಾಜ ಸೇವೆಗೆ ಸಿಗುವಂತಹ ಎಲ್ಲಾ ಅವಕಾಶಗಳನ್ನು ಸದುಪಯೋಗ ಮಾಡಿಕೊಂಡು, ಅನುಭವಗಳನ್ನು ಧಾರೆಯೆರೆದು ಕೆಲಸ ಮಾಡಬೇಕು. ಸೇವಾ ಮನೋಭಾವನೆಯನ್ನು ಇಟ್ಟುಕೊಂಡು ಕೆಲಸ ಮಾಡಿದಾಗ, ಅದು ಸಾರ್ಥಕವಾಗುತ್ತದೆ. ನಾಯಕತ್ವದ ಅಭಿವೃದ್ಧಿ, ನಾಗರಿಕಪ್ರಜ್ಞೆ ಮೂಡಿಸುವುದು, ಶಿಕ್ಷಣ ಪ್ರೋತ್ಸಾಹ, ಮತ್ತು ಆರೋಗ್ಯ ಶಿಬಿರಗಳನ್ನು ಆಯೋಜಿಸುವಂತಹ ಕಾರ್ಯಗಳನ್ನು ಹೆಚ್ಚೆಚ್ಚು ಮಾಡಬೇಕು ಎಂದು ಸಲಹೆ ನೀಡಿದರು.



ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ವಿಜಯಪುರ ಲೀಜನ್ ನಿಯೋಜಿತ ಅಧ್ಯಕ್ಷ ವೆಂಕಟೇಶ್ ಮಾತನಾಡಿ, ಏ.3 1997 ರಂದು 'ಜವಾಬ್ದಾರಿಯುತ ಮತ್ತು ಸಕ್ರಿಯ ಪೌರತ್ವ' ಎಂಬ ಧ್ಯೇಯವಾಕ್ಯದೊಂದಿಗೆ 'ಸೀನಿಯರ್ ಚೇಂಬರ್ ಫಾರ್ ಪಾಸ್ಟ್ ಜೇಸೀಸ್' ಎಂಬ ವಿಶಿಷ್ಟ ಸಂಘಟನೆಯನ್ನು ಆರಂಭಗೊಳಿಸಿದ್ದಾರೆ. ಇದು 2002 ರಲ್ಲಿ ರಾಷ್ಟ್ರೀಕೃತವಾಯಿತು. ಈಗ ಸಂಸ್ಥೆಯು ಸುಮಾರು 150 ಸೈನ್ಯಗಳನ್ನು (ಪ್ರಾದೇಶಿಕ ಶಾಖೆಗಳು) ಮತ್ತು 3000 ಸದಸ್ಯತ್ವವನ್ನು ಭಾರತದ ವಿವಿಧ ರಾಜ್ಯಗಳಿಗೆ ಮತ್ತು ದುಬೈ, ಓಮನ್, ಕತಾರ್, ಯುಎಸ್‌ಎ, ನೇಪಾಳದಂತಹ ಹೊರಗೆ ಹರಡಿದೆ ಮತ್ತು ಸಂಸ್ಥೆಯನ್ನು ಅಂತರರಾಷ್ಟ್ರೀಯ ಸಂವಿಧಾನದಡಿಯಲ್ಲಿ ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ (ಎಸ್ಸಿಐ) ಎಂದು ಕರೆಯಲಾಗುತ್ತಿದೆ ಎಂದರು.

ಸಂಸ್ಥಾಪಕ ಅಧ್ಯಕ್ಷ ಸೀನಿಯರ್ ಕೆ.ವಿ.ಬೈರೇಗೌಡ ಅವರನ್ನು ಹಾಗೂ ಫೌಂಡರ್ಸ್ ಸೆಕ್ರೆಟರಿ ಸೀನಿಯರ್ ಎನ್ .ಸುಬ್ರಮಣ್ಯ ಶೆಟ್ಟಿ ಅವರನ್ನುಸನ್ಮಾನಿಸಲಾಯಿತು.

ಈ ಕಾರ್ಯದರ್ಶಿ ಆನಂದ್, ಮಾಜಿ ಅಧ್ಯಕ್ಷರಾದ ಎನ್.ಜಯರಾಮ್, ವಿ.ವೆಂಕಟೇಶ್, ಜೆಸಿಐ ಮಾಜಿ ಅಧ್ಯಕ್ಷ ಜೆ.ಆರ್. ಮುನಿವೀರಣ್ಣ, ಬೇಕರಿ ಎ.ಮಂಜುನಾಥ್, ಎಸ್.ವಿ.ಬಸವರಾಜ್, ಎಂ.ಮುನಿಕೃಷ್ಣಪ್ಪ, ಕೆ.ಎನ್.ಜನಾರ್ಧನ್, ಎಸ್.ರಮೇಶ್ ಹಾಗೂ ಸೀನಿಯರ್ ಉಪಾಧ್ಯಕ್ಷ ಬಿಜ್ಜವಾರನಾಗರಾಜ್ ಯಲಿಯೂರು ತ್ಯಾಗರಾಜ್ ಅವರು ಹಾಜರಿದ್ದರು.

# ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ; ಬೈಕ್ ಸವಾರ ಸಾವು



ದೊಡ್ಡಬಳ್ಳಾಪುರ

ತಾಲ್ಲೂಕಿನ ಪಾಲನಜೋಗಿಹಳ್ಳಿ ಬಳಿ ಇಂದು ಬೆಳಿಗ್ಗೆ ಕೆಎಸ್‌ಆರ್‌ಟಿಸಿ ಬಸ್ ಹಾಗೂ ಬೈಕ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಯುವಕನೊಬ್ಬ ಸ್ಥಳದಲ್ಲೇ ಮೃತಪಟ್ಟಿದ್ದಾನೆ.

ಮೃತನನ್ನು ಪಾಲನಜೋಗಿಹಳ್ಳಿಯ ನಿವಾಸಿ ಪುರುಷೋತ್ತಮ (29) ಎಂದು ಗುರುತಿಸಲಾಗಿದೆ. ಶುಕ್ರವಾರ ಬೆಳಿಗ್ಗೆ ಸುಮಾರು 9:15ರ ಸಮಯದಲ್ಲಿ ಈ ದುರ್ಘಟನೆ ಸಂಭವಿಸಿದೆ. ಹಿಂದೂಪುರದಿಂದ ಬೆಂಗಳೂರಿನ ಕಡೆಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್, ಮುಂದೆ ಸಾಗುತ್ತಿದ್ದ ಬೈಕ್ ಅನ್ನು ಓವರ್ ಟೇಕ್ ಮಾಡಲು ಪ್ರಯತ್ನಿಸಿದೆ. ಈ ವೇಳೆ ನಿಯಂತ್ರಣ ತಪ್ಪಿದ ಬಸ್ ಬೈಕ್‌ಗೆ ಜೋರಾಗಿ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ. ಡಿಕ್ಕಿಯ ರಭಸಕ್ಕೆ ಬೈಕ್ ಸವಾರ ಪುರುಷೋತ್ತಮ ರಸ್ತೆಗೆ ಬಿದ್ದಿದ್ದು, ತಲೆಗೆ ಗಂಭೀರ ಪೆಟ್ಟಾಗಿ ತೀವ್ರ ರಕ್ತಸ್ರಾವದಿಂದ ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಅಪಘಾತ ಸಂಭವಿಸಿದ ತಕ್ಷಣ ಬಸ್ ಚಾಲಕ ವಾಹನವನ್ನು ಬಿಟ್ಟು ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ತಿಳಿದುಬಂದಿದೆ. ಘಟನಾ ಸ್ಥಳಕ್ಕೆ ದೊಡ್ಡಬಳ್ಳಾಪುರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ಅಪಘಾತದಿಂದಾಗಿ ಕೆಲಕಾಲ ಸಂಚಾರ ವ್ಯತ್ಯಯ ಉಂಟಾಗಿತ್ತು. ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಅಕ್ಷರ ಬೆಳಕಿನತ್ತ ಕೋಲಾರ: ಸಾಕ್ಷರತಾ ಪ್ರಮಾಣ ಶೇ. 84ಕ್ಕೆ ಏರಿಕೆ

ಕೋಲಾರ

2025–26ನೆ ಸಾಲಿಗೆ ಕೇಂದ್ರ ಪುರಸ್ಕೃತ ಉಲ್ಲಾಸ್ ನವಭಾರತ ಸಾಕ್ಷರತಾ ಕಾರ್ಯಕ್ರಮದ ಅಡಿಯಲ್ಲಿ 10700 ಅನಕ್ಷರಸ್ಥರನ್ನು ಸಾಕ್ಷರರನ್ನಾಗಿಸುವ ಗುರಿ ನೀಡಲಾಗಿದ್ದು, 2011ರ ಜನಗಣತಿಯಂತೆ 74.39 ಇದ್ದ ಜಿಲ್ಲೆಯ ಸಾಕ್ಷರತಾ ಪ್ರಮಾಣ ಇದೀಗ ವಿವಿಧ ಸಾಕ್ಷರತಾ ಕಾರ್ಯಕ್ರಮಗಳಿಂದ ಶೇ. 84ಕ್ಕೆ ಹೆಚ್ಚಳವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿಯಲ್ಲಿ ನಡೆದ ಏ.5ರ ಸಾಕ್ಷರತಾ ಪರೀಕ್ಷೆ ಪೂರ್ವಭಾವಿ ಸಭೆಯಲ್ಲಿ 2025–26ನೆ ಸಾಲಿಗೆ ಕೇಂದ್ರ ಪುರಸ್ಕೃತ ಉಲ್ಲಾಸ್ ನವಭಾರತ ಸಾಕ್ಷರತಾ ಕಾರ್ಯಕ್ರಮದ ಕರಪತ್ರಗಳನ್ನು ಬಿಡುಗಡೆ ಮಾಡಿ ಅವರು ಮಾತನಾಡುತ್ತಿದ್ದರು.

2025ರ ಸಾಕ್ಷರತಾಧ್ಯೇಯವಾಕ್ಯ 'ಡಿಜಿಟಲ್ ಯುಗದಲ್ಲಿ ಸಾಕ್ಷರತೆಯನ್ನು ಉತ್ತೇಜಿಸುವುದು' ಆಗಿದ್ದು, ಸಾಕ್ಷರತೆಯ ಪ್ರಮಾಣ ಹೆಚ್ಚಿಸಲು ಕರಪತ್ರ, ಸಭೆ ಸಮಾರಂಭ, ಭಾಷಣ, ವಿಚಾರ ಸಂಕೀರ್ಣ ಪ್ರಚಾರ, ಸಪ್ತಾಹ, ಮಾಸಾಚಾರಣೆ, ಕಾರ್ಯಕ್ರಮಗಳನ್ನು ನಡೆಸುವ



ಮೂಲಕ ಸಾಕ್ಷರತೆಯ ಮಹತ್ವವನ್ನು ಜನಸಾಮಾನ್ಯರಿಗೆ ತಿಳಿಸುವ ಪ್ರಯತ್ನ ಮಾಡಲು ತಿಳಿಸಿದರು.

ಈ ಸಮಯದಲ್ಲಿ 2025–26ನೆ ಸಾಲಿಗೆ ಕೇಂದ್ರ ಪುರಸ್ಕೃತ ಉಲ್ಲಾಸ್ ನವಭಾರತ ಸಾಕ್ಷರತಾ ಕಾರ್ಯಕ್ರಮದ ಅಡಿಯಲ್ಲಿ 10700 ಅನಕ್ಷರಸ್ಥರನ್ನು ಸಾಕ್ಷರರನ್ನಾಗಿಸುವ ಗುರಿ ನೀಡಲಾಗಿದೆ, ಅನಕ್ಷರಸ್ಥರ ಜೀವನ ವಿಧಾನ ಮತ್ತು ವೃತ್ತಿಯನ್ನು ಆಧಾರವಾಗಿಟ್ಟುಕೊಂಡು ಸಾಕ್ಷರತಾ ಯೋಜನೆಗಳನ್ನು ರೂಪಿಸಬೇಕು ಎಂದು ಕರೆ ನೀಡಿದರು.

ಆ ಮೂಲಕ ಅವರಿಗೆ ವಿಜ್ಞಾನ ಮತ್ತು ವೃತ್ತಿಕೌಶಲ್ಯಗಳನ್ನು ಉತ್ಕೃಷ್ಟಗೊಳಿಸುವ ವಿಚಾರಗಳನ್ನು ತಿಳಿಸಬೇಕು, ಎಂಬ ಅಭಿಪ್ರಾಯ ಸಭೆಯಲ್ಲಿ ಮೂಡಿ ಬಂತು. ಈ ರೀತಿಯ ಸಾಕ್ಷರತೆಯಿಂದ ಹಿಂದುಳಿದ ಅನಕ್ಷರಸ್ಥ ಸಮುದಾಯದ ಹಾಗೂ ಸಾಮಾಜಿಕ ಸ್ಥಿತಿಯು ಸುಧಾರಣೆಯಾಗುವುದು. ಇದರಿಂದ ಬಡತನ ಮತ್ತು ನಿರುದ್ಯೋಗ ಸಮಸ್ಯೆಯನ್ನು ತೊಡೆದು ಹಾಕಬಹುದೆಂಬ ಆಶಾವಾದ ಮೂಡಿದೆ ಎಂದರು.

2011ರ ಜನಗಣತಿಯಂತೆ 74.39 ಜಿಲ್ಲೆಯ ಸಾಕ್ಷರತಾ ಪ್ರಮಾಣವಿದ್ದು 2011ರಿಂದ ಇದು ವರೆವಿಗೂ ಗ್ರಾಮೀಣ ಪ್ರದೇಶದಲ್ಲಿ ಅನುಷ್ಠಾನಗೊಳಿಸಿದ ವಿವಿದ ಸಾಕ್ಷರತಾ ಕಾರ್ಯಕ್ರಮಗಳಿಂದ 84ಕ್ಕೆ ಸಾಕ್ಷರತಾ ಪ್ರಮಾಣ ಹೆಚ್ಚಳವಾಗಿರುತ್ತದೆ. ಜಿಲ್ಲೆಯಲ್ಲಿ ಶೇ.100 ಸಾಕ್ಷರತಾ ಪ್ರಮಾಣ ಹೆಚ್ಚಿಸಲು ಕರೆ ನೀಡಿದರು.

ಶಿಕ್ಷಣ ಅಕ್ಷರ ಕಲಿಕೆಯ ಜತೆಗೆ ಬದುಕು ರೂಪಿಸಿಕೊಳ್ಳಲು ದಾರಿ ತೋರುವಂತಿರಬೇಕು ಎಂದ ಅವರು, ಜಿಲ್ಲೆಯಲ್ಲಿ ಯಾವುದೇ ವ್ಯಕ್ತಿ ಅನಕ್ಷರಸ್ಥರಾಗಿರಬಾರದು, ಈ ರೀತಿಯಲ್ಲಿ ಕಾರ್ಯಯೋಜನೆ ರೂಪಿಸಿ, ಶೇ.100 ಸಾಕ್ಷರತೆ ಸಾಧನೆಗೆ ಇಲಾಖೆ ಕ್ರಮವಹಿಸಬೇಕು ಎಂದು ಸಲಹೆ ನೀಡಿದರು.

6 ಸಾವಿರ ಮಂದಿ ಅನಕ್ಷರಸ್ಥರಿಗೆ ಪರೀಕ್ಷೆ: ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಕೆ.ಉಮಾ ಅವರು ಸಭೆಗೆ ಮಾಹಿತಿ ನೀಡಿ, 2025–26 ನೇ ಸಾಲಿನಲ್ಲಿ ಜಿಲ್ಲೆಯ ಅತ್ಯಂತ ಕಡಿಮೆ ಸಾಕ್ಷರತೆ ಹೊಂದಿರುವ 32 ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಿಕೊಂಡು ಲಿಂಕ್ ಡಾಕ್ಯುಮೆಂಟ್ ಅನುದಾನದಡಿಯಲ್ಲಿ 6000 ಅನಕ್ಷರಸ್ಥರನ್ನು ಸಾಕ್ಷರರನ್ನಾಗಿಸುವ ಗುರಿಯೊಂದಿಗೆ ಮೂಲ ಸಾಕ್ಷರತಾ ಕಾರ್ಯಕ್ರಮವನ್ನು ಅನುಷ್ಟಾನಗೊಳಿಸಲಾಗಿದೆ.

ಏ.5 ರಂದು ನಡೆಯುವ ಮೌಲ್ಯಮಾಪನ ಪರೀಕ್ಷೆಯಲ್ಲಿ 6000 ಕಲಿಕಾರ್ಥಿಗಳು ನವ ಸಾಕ್ಷರಾಗುತ್ತಾರೆ. ಎಂದ ಅವರು, 2025–26ನೇ ಸಾಲಿನ ಜಿಲ್ಲೆಯ ಲಿಂಕ್ ಡಾಕ್ಯೂಮೆಂಟ್ ಅನುದಾನದಡಿಯಲ್ಲಿ ಸಾಕ್ಷರತಾ ಕಾರ್ಯಕ್ರಮಕ್ಕೆ ಜಿಲ್ಲೆಯ 6 ತಾಲ್ಲೂಕುಗಳ ಆಯ್ದ 32 ಗ್ರಾಮ ಪಂಚಾಯತಿಗಳಲ್ಲಿ ಒಟ್ಟು 6000 ಅನಕ್ಷರಸ್ಥರಿಗೆ 189 ಪರೀಕ್ಷಾ ಕೇಂದ್ರಗಳುಲ್ಲಿ ಪರೀಕ್ಷೆ ನಡೆಯಲಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಮತ್ತು ಕ್ಷೇತ್ರ ಸಮನ್ವಯಾಧಿಕಾರಿಗಳು ಪರೀಕ್ಷೆ ಕಾರ್ಯದ ಉಸ್ತುವಾರಿ ವಹಿಸಿದ್ದು, ಏ.5ರ ಮೌಲ್ಯಮಾಪನ ಮೇಲ್ವಿಚಾರಣೆಯಲ್ಲಿ 3 ಅವಧಿಗಳಲ್ಲಿ ಪರೀಕ್ಷೆ ನಡೆಯುತ್ತದೆ ಎಂದರು.

ತಾಲ್ಲೂಕುವಾರು ನೋಂದಣಿ ವಿವರ: ಬಂಗಾರಪೇಟೆ ತಾಲ್ಲೂಕಿನ 4 ಗ್ರಾ.ಪಂಗಳ 26 ಪರೀಕ್ಷಾ ಕೇಂದ್ರಗಳಲ್ಲಿ 1 ಸಾವಿರ ಕಲಿಕಾರ್ಥಿಗಳು,ಕೆಜಿಎಫ್ ತಾಲ್ಲೂಕಿನಲ್ಲಿ 3 ಗ್ರಾ.ಪಂಗಳ 5 ಪರೀಕ್ಷಾ ಕೇಂದ್ರಗಳಲ್ಲಿ 250 ಕಲಿಕಾರ್ಥಿಗಳು, ಕೋಲಾರ ತಾಲ್ಲೂಕಿನ 13 ಗ್ರಾ.ಪಂಗಳಲ್ಲಿ 74 ಪರೀಕ್ಷಾ ಕೇಂದ್ರಗಳಲ್ಲಿ 1750 ಕಲಿಕಾರ್ಥಿಗಳು, ಮಾಲೂರು ತಾಲ್ಲೂಕಿನ 4 ಗ್ರಾ.ಪಂಗಳಿಂದ 35 ಕೇಂದ್ರಗಳಲ್ಲಿ 1ಸಾವಿರ ಮಂದಿ, ಮುಳಬಾಗಿಲು ತಾಲ್ಲೂಕಿನ 6 ಗ್ರಾ.ಪಂಗಳಲ್ಲಿ 46 ಪರೀಕ್ಷಾ ಕೇಂದ್ರಗಳಲ್ಲಿ 1750 ಮಂದಿ ಹಾಗೂ ಶ್ರೀನಿವಾಸಪುರ ತಾಲ್ಲೂಕಿನ 2 ಗ್ರಾ.ಪಂಗಳಿಂದ 3 ಪರೀಕ್ಷಾ ಕೇಂದ್ರಗಳಲ್ಲಿ 250 ಮಂದಿ ಪರೀಕ್ಷೆ ಬರೆಯುತ್ತಿದ್ದಾರೆ ಎಂದು ತಿಳಿಸಿದರು.

ಈ ಸಭೆಯಲ್ಲಿ ಹಿರಿಯ ಉಪನ್ಯಾಸಕ ನಾಗರಾಜ್, ಬಿಆರ್‌ಸಿ ರಶ್ಮಿ, ಜಿಲ್ಲೆಯ ಆರು ತಾಲ್ಲೂಕುಗಳ ಬಿಆರ್‌ಸಿ ಸಮನ್ವಯಾಧಿಕಾರಿಗಳಾದ ರಾಧಮ್ಮ, ಸೋಮೇಶ್, ರಮೇಶ್, ತಾಲ್ಲೂಕುಗಳ ಸಾಕ್ಷರತಾ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy